VOLUME: 16 | 11 APRIL 2026 | ಶನಿವಾರ | RS: 2 | PAGE: 06 ISSUE: 70
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಬಹುಭಾಷಾ ನಟಿ ಮೃಣಾಲ್ ಠಾಕೂರ್ ಅವರು ಕಪ್ಪು ಉಡುಗೆಯೊಂದರಲ್ಲಿ ಕಾಣಿಸಿಕೊಂಡಿರುವ ಫೋಟೋಗಳಿಗೆ ಸಾಮಾಜಿಕ ಜಾಲತಾಣಗಳಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ. ಅಲ್ಲದೆ ಶೀಘ್ರ ತೆಲುಗಿನ ಮೃಣಾಲ್ ಠಾಕೂರ್ ಅವರ ಹೊಸ ಚಿತ್ರವೊಂದು ಬಿಡುಗಡೆಗೆ ಸಜ್ಜಾಗಿದೆ ಎಂದು ಹೇಳಲಾಗಿದೆ.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಕಡ್ಡಾಯವಾಗಿ ಗಣತಿ ಮಾಡಿ

ಬೆಂಗಳೂರು: ಆಹಾರ ಸಚಿವರು ಹಾಗೂ ಕರ್ನಾಟಕ ಮಾದರ ಮಹಾಸಭೆಯ ಅಧ್ಯಕ್ಷರಾದ ಕೆ.ಎಚ್. ಮುನಿಯಪ್ಪ ಅವರು ರಾಷ್ಟ್ರೀಯ ಜನಗಣತಿ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬರೂ ತಪ್ಪದೆ ನೋಂದಣಿ ಮಾಡಿಕೊಳ್ಳಬೇಕು ಎಂದು ಕರೆ ನೀಡಿದರು.

ನಗರದ ಮೌರ್ಯ ಹೋಟೆಲ್‌ನಲ್ಲಿ ಅವರ ನೇತೃತ್ವದಲ್ಲಿ ರಾಜ್ಯ ಕಾರ್ಯಕಾರಿಣಿ ಹಾಗೂ ರಾಷ್ಟ್ರೀಯ ಜನಗಣತಿ ಜಾಗೃತಿ ಸಭೆ ನಡೆಯಿತು. ಮಾದರ ಮಹಾಸಭೆಯ ಎಲ್ಲಾ ಜಿಲ್ಲೆಗಳ ಜಿಲ್ಲಾಧ್ಯಕ್ಷರು ಹಾಗೂ ಕಾರ್ಯಕಾರಿಣಿ ಸದಸ್ಯರು ಸಭೆಯಲ್ಲಿ ಭಾಗವಹಿಸಿದರು.

ಸಭೆಯಲ್ಲಿ ಮಾತನಾಡಿದ ಮುನಿಯಪ್ಪ ಅವರು, ಸಮುದಾಯದವರು ಒಗ್ಗಟ್ಟಿನಿಂದ ಇರಬೇಕು ಎಂದು ಹೇಳಿದರು. ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಮ್ ಅವರ ಜನ್ಮದಿನಗಳನ್ನು ಬೇರೆ ಬೇರೆ ಆಚರಿಸುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟರು. "ಈ ಇಬ್ಬರು ನಾಯಕರು ಸಮುದಾಯದ ಎರಡು ಕಣ್ಣುಗಳಂತೆ. ಅಂಬೇಡ್ಕರ್ ಅವರು ಒಂದು ಸಮುದಾಯದ ನಾಯಕರು ಮಾತ್ರವಲ್ಲ, ಇಡೀ ದೇಶದ ಎಲ್ಲಾ ಸಮುದಾಯಗಳ ನಾಯಕರು," ಎಂದು ಹೇಳಿದರು.

ಪರಿಶಿಷ್ಟ ಜಾತಿಯ ಎಲ್ಲಾ ಸಮುದಾಯದವರು ಒಗ್ಗಟ್ಟಾಗಿರಬೇಕು ಹಾಗೂ ಯಾವುದೇ ಕಾರಣಕ್ಕೂ ಗಲಭೆಗಳಿಗೆ ಅವಕಾಶ ನೀಡಬಾರದು ಎಂದು ಸೂಚಿಸಿದರು. ಒಳಮೀಸಲಾತಿ ವಿಚಾರದಲ್ಲಿ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ ಅವರು, ಡಾ. ಜಿ. ಪರಮೇಶ್ವರ್ ಹಾಗೂ ಹೆಚ್.ಸಿ. ಮಹದೇವಪ್ಪ ಅವರೊಂದಿಗೆ ಈ ಕುರಿತು ಚರ್ಚೆ ನಡೆಸಲಾಗಿದೆ ಎಂದು ಹೇಳಿದರು. ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಈ ವಿಷಯವನ್ನು ಚರ್ಚಿಸಿ ಅನುಷ್ಠಾನಗೊಳಿಸಲಾಗುವುದು ಎಂದು ತಿಳಿಸಿದರು. ಈ ವಿಷಯದಲ್ಲಿ ಯಾರೂ ಗೊಂದಲಕ್ಕೆ ಒಳಗಾಗಬಾರದು ಎಂದು ಮನವಿ ಮಾಡಿದರು.

ಜನಗಣತಿ ನೋಂದಣಿ ಕಾರ್ಯದಲ್ಲಿ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಮಾದರ ಮಹಾಸಭೆಯ ಸದಸ್ಯರಾಗಬೇಕು ಎಂದು ಕರೆ ನೀಡಿದರು. ಮೊಬೈಲ್ ಅಪ್ಲಿಕೇಶನ್ ಮೂಲಕ ನೇರವಾಗಿ ನೋಂದಣಿ ಮಾಡಲು ಸೂಚಿಸಿದರು. ಮುಂದಿನ 15 ದಿನಗಳ ಕಾಲ ಸಮುದಾಯದ ಮುಖಂಡರು ತಮ್ಮ ಇತರ ಕೆಲಸಗಳನ್ನು ಬದಿಗಿಟ್ಟು ಜನಗಣತಿ ಜಾಗೃತಿ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು.

## ನಾಪತ್ತೆಯಾಗಿದ್ದ ಯುವತಿ ಶವವಾಗಿ ಪತ್ತೆ



ಚಿಕ್ಕಮಗಳೂರು: ದತ್ತಪೀಠದ ತಪ್ಪಲಿನಲ್ಲಿ ನಾಪತ್ತೆಯಾಗಿದ್ದ ಕೇರಳದ ಪಾಲಕ್ಕಾಡ್ ಮೂಲದ ಬಾಲಕಿ ಶ್ರೀನಂದಾ (15) ಶವ ಪತ್ತೆಯಾಗಿದೆ.

ಮಂಗಳವಾರ (ಏ.7) ಸಂಜೆ ಮಾಣಿಕ್ಯಾಧಾರ ಜಲಪಾತ ವೀಕ್ಷಿಸಲು ಹೋಗುವಾಗ ಬಾಲಕಿ ಕಣ್ಮರೆಯಾಗಿದ್ದಳು. 41 ಕುಟುಂಬದ ಸದಸ್ಯರೊಂದಿಗೆ ಹಂಪಿ ಪ್ರವಾಸ ಮುಗಿಸಿ ಇಲ್ಲಿಗೆ ಬಂದಿದ್ದ ಶ್ರೀನಂದಾ, ನಾಪತ್ತೆಯಾಗುವ ಕೇವಲ ಐದು ನಿಮಿಷಗಳ ಮೊದಲು ತಂದೆಯ ಮೊಬೈಲ್‌ನಲ್ಲಿ ಅತ್ಯಂತ ಖುಷಿಯಿಂದ ರೀಲ್ಸ್ ಮಾಡಿದ್ದಳು. ಆದರೆ, ಜನದಟ್ಟಣೆಯ ನಡುವೆ ಮೆಟ್ಟಿಲುಗಳನ್ನು ಇಳಿದು ಬರುವಾಗ ಅವಳು ಹಠಾತ್ತನೆ ಕಾಣೆಯಾಗಿರುವುದು ಹಲವು ಅನುಮಾನಗಳಿಗೆ ದಾರಿ ಮಾಡಿಕೊಟ್ಟಿತ್ತು. ಇಂದು ಬಾಲಕಿ ಶವವಾಗಿ ಪತ್ತೆಯಾಗಿದ್ದಾಳೆ.

ಬಾಲಕಿ ನಾಪತ್ತೆಯಾದ ವಿಚಾರ ಗೊತ್ತಾಗುತ್ತಿದ್ದಂತೆ ರಕ್ಷಣಾ ತಂಡಗಳು ಥರ್ಮಲ್ ಡ್ರೋನ್ ಮೂಲಕ ಬಾಲಕಿ ಪತ್ತೆಗೆ ಹುಡುಕಾಟ ನಡೆಸಿದ್ದರು. ಪೊಲೀಸ್ ಇಲಾಖೆ, ಅರಣ್ಯ ಇಲಾಖೆ ಹಾಗೂ ಅಗ್ನಿಶಾಮಕ ದಳದ ಸುಮಾರು 60ಕ್ಕೂ ಹೆಚ್ಚು ಸಿಬ್ಬಂದಿ 5 ತಂಡಗಳನ್ನಾಗಿ ಮಾಡಿಕೊಂಡು ಶೋಧಕಾರ್ಯಕ್ಕೆ ಇಳಿದಿತ್ತು. ಬಾಲಕಿ ಮಿಸ್ ಆದ ಜಾಗ ತೀವ್ರ ಕಡಿದಾದ ಪ್ರದೇಶವಾಗಿದ್ದು ಅಲ್ಲಿಂದ ಯಾವ-ಯಾವ ಮಾರ್ಗದಲ್ಲಿ ಹೋಗಲು ಸಾಧ್ಯವಿರುತ್ತೋ ಆ ಮಾರ್ಗದಲ್ಲೆಲ್ಲಾ ತಂಡ ಹುಡುಕಾಡಿತ್ತು. ಆದರೆ ಬಾಲಕಿ ರಕ್ಷಣಾ ತಂಡಕ್ಕೆ ಸುರಕ್ಷಿತವಾಗಿ ಸಿಗದೇ ಇರುವುದು ಎಲ್ಲರಿಗೂ ಬೇಸರ ಮೂಡಿಸಿದೆ.



# ಅಬ್ಬರಿಸಿದ ಮಳೆ

ಬೆಂಗಳೂರು: ಕಳೆದ ಕೆಲವು ದಿನಗಳಿಂದ ಬಿಸಿಲಿನ ಬೇಗೆಗೆ ಬೆಂದು ಹೋಗಿದ್ದ ಬೆಂಗಳೂರಿಗೆ ಮಳೆರಾಯ ತಂಪೇರಿದ್ದಾನೆ.

ಪೂರ್ವ ಮುಂಗಾರು ಹಾಗೂ ಕರ್ನಾಟಕದ ಒಳನಾಡಿನಲ್ಲಿ ಟ್ರಫ್ (ವಾತಾವರಣದ ಮೇಲ್ಪದರದಲ್ಲಿ ಕಡಿಮೆ ಒತ್ತಡವಿರುವ ವಿಸ್ತೃತ ಪ್ರದೇಶ) ಹಿನ್ನೆಲೆ, ಮಳೆಯಾಗುತ್ತಿದೆ. ಇಂದು ಬೆಂಗಳೂರಿನ ವಿಜಯನಗರ, ಹೊಸಹಳ್ಳಿ, ಯಶವಂತಪುರ ಸೇರಿದಂತೆ ಹಲವು ಪ್ರದೇಶಗಳಲ್ಲಿ ಮಳೆರಾಯ ಅಬ್ಬರಿಸಿದ್ದಾನೆ.

ಬಿಸಿಲ ಝಳಕ್ಕೆ ಹೈರಾಣರಾಗಿದ್ದ ಬೆಂಗಳೂರು ಜನ ಮಳೆಯಿಂದ ಕೂಲ್ ಕೂಲ್ ಆಗಿದ್ದಾರೆ. ಸಂಜೆಯ ತಂಪುಗಾಳಿ ಜನರನ್ನ ತಂಪಾಗಿಸಿದೆ. ಆದ್ರೆ ಮಳೆಯಿಂದಾಗಿ ಅಲ್ಲಲ್ಲಿ ಸಂಚಾರದಲ್ಲಿ ಅಸ್ತವ್ಯಸ್ತವೂ ಆಗಿದೆ.

ಮುಂದಿನ ಒಂದು ವಾರಗಳ ಕಾಲ ಮಳೆಯಾಗಲಿದ್ದು, ಇಂದು ಹಾಗೂ ನಾಳೆ ಬೆಂಗಳೂರಿನ ಕೆಲವೆಡೆ ಗುಡುಗು-ಮಿಂಚು ಸಹಿತ ಮಳೆಯ ಎಚ್ಚರಿಕೆಯನ್ನು ಹವಮಾನ ಇಲಾಖೆ ನೀಡಿದೆ. ದಕ್ಷಿಣ ಕನ್ನಡ, ಉಡುಪಿ, ಬೆಳಗಾವಿ, ಧಾರವಾಡ, ಹಾವೇರಿ ಸೇರಿದಂತೆ ಕೆಲವೆಡೆ ಮಳೆಯ ಮುನ್ಸೂಚನೆಯನ್ನು ನೀಡಲಾಗಿದೆ.

## ಝೂಂಬಿ ಡ್ರಗ್: ವೀಡಿಯೋ ವೈರಲ್ ಮಾಡುತ್ತಿರುವವರ ವಿರುದ್ಧ ಕ್ರಮ




ಬೆಂಗಳೂರು: ಝೂಂಬಿ ಡ್ರಗ್ ಸೇವನೆಗೆ ಸಂಬಂಧಿಸಿದಂತೆ ಬೆಂಗಳೂರು ವ್ಯಕ್ತಿಯ ವಿಡಿಯೋವನ್ನು ವೈರಲ್ ಮಾಡುತ್ತಿರುವ ವ್ಯಕ್ತಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಎಚ್ಚರಿಕೆ ನೀಡಿದ್ದಾರೆ.

ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿರುವ ಯುವಕನನ್ನು ಪರೀಕ್ಷೆ ಮಾಡಿದ್ದೇವೆ. ಆತ ಯಾವುದೇ ಝೂಂಬಿ ಡ್ರಗ್ ಸೇವಿಸಿಲ್ಲ. ಈ ವಿಡಿಯೋವನ್ನು ಶೇರ್ ಮಾಡಿದ ವ್ಯಕ್ತಿಯನ್ನು ಬಂಧಿಸಿದ್ದೇವೆ ಎಂದು ತಿಳಿಸಿದ್ದಾರೆ.

ಬಾಗಲೂರು ಪೊಲೀಸರು ವಿಡಿಯೋ ಅಪ್ಲೋಡ್ ಮಾಡಿದ್ದ ವ್ಯಕ್ತಿ ಬಂಧಿಸಿದ್ದು ಈಗ ಆತ ಕ್ಷಮೆ ಕೇಳಿ ವಿಡಿಯೋ ಮಾಡಿದ್ದಾನೆ. ಈ ವಿಡಿಯೋವನ್ನ ಯಾರೆಲ್ಲಾ ಶೇರ್ ಮಾಡಿದ್ದಾರೆ ಅವರಿಗೆ ನೋಟಿಸ್ ನೀಡುತ್ತೇವೆ. ಆಧಾರರಹಿತ ಮಾಹಿತಿ ಶೇರ್ ಮಾಡಿದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

ಮೆಡಿಕಲ್ ರಿಪೋರ್ಟ್ ಆಧಾರದ ಮೇಲೆ ಕಾಮೆಂಟ್ ಮಾಡಬೇಕು. ಒಬ್ಬರ ಬಗ್ಗೆ ಅಪಪ್ರಚಾರ ಮಾಡುವ ಕೆಲಸ ಆಗಬಾರದು. ಊಹೆ ಮಾಡಿಕೊಂಡು ಈ ರೀತಿ ಪೋಸ್ಟ್ ಮಾಡುವವರ ವಿರುದ್ಧ ಕ್ರಮ ತೆಗೆದುಕೊಳ್ಳುತ್ತೇವೆ. ವಿದೇಶದಲ್ಲಿ ಈ ರೀತಿ ಡ್ರಗ್ ಸೇವನೆ ಇದೆ ಎಂದು ಅವನು ವಿಡಿಯೋ ಅಪ್ಲೋಡ್ ಮಾಡಿದ್ದಾನೆ. ಆತನನ್ನು ಈಗ ವಿಚಾರಣೆ ನಡೆಸುತ್ತಿದ್ದೇವೆ ಎಂದು ತಿಳಿಸಿದರು.

ನಟ ದುನಿಯಾ ವಿಜಯ್, ನಿವೃತ್ತ ಪೊಲೀಸ್ ಆಯುಕ್ತ ಭಾಸ್ಕರ್ ರಾವ್ ಸೇರಿದಂತೆ ಹಲವು ಮಂದಿ ವಿಡಿಯೋವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿದ್ದಾರೆ. ನಗರ ಪೊಲೀಸರು ಆರಂಭದಲ್ಲಿ 25 ಮಂದಿಗೆ ನೋಟಿಸ್ ನೀಡುವ ಸಾಧ್ಯತೆಯಿದೆ.

## ಜೆಡಿಎಸ್ ಮಹಿಳಾ ಸಮಾವೇಶಕ್ಕೆ ಸಕಲ ಸಿದ್ದತೆ

ಬೆಂಗಳೂರು: ಜಿಬಿಎ ಚುನಾವಣೆಯಲ್ಲಿ ಹೊಸ ನಾಯಕರು ಸೃಷ್ಟಿ ಆಗ್ತಾರೆ. ಬೆಂಗಳೂರಿನಲ್ಲಿ ಅನೇಕ ಸಮಸ್ಯೆಗಳು ಇವೆ. ಜನರು ಎಚ್ಚೆತ್ತುಕೊಳ್ಳಲು ಇದೊಂದು ಸಮಾವೇಶ. ಬೆಂಗಳೂರಿನಲ್ಲಿ ನಮಗೂ ಶಕ್ತಿ ಇದೆ. ಸಂಘಟನೆ ಒತ್ತು ಕೊಡಬೇಕು ಎಂದು ನಿಖಿಲ್ ಕುಮಾರಸ್ವಾಮಿ ಅವರು ತಿಳಿಸಿದರು.

ಸಮಾವೇಶದ ಪೂರ್ವ ಸಿದ್ಧತೆ ಪರಿಶೀಲನೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಳೆಯ ಸಮಾವೇಶ ಹೊಸ ನಾಯಕತ್ವಕ್ಕೆ ಹೊಸ ಹುರುಪು ತುಂಬಲಿದೆ. ಒಂದು ಲಕ್ಷಕ್ಕೂ ಅಧಿಕ ಜನರು ಭಾಗವಹಿಸುವ ವಿಶ್ವಾಸವಿದೆ. ದೇವೇಗೌಡರು ಸಮಾವೇಶ ಉದ್ಘಾಟನೆ ಮಾಡಲಿದ್ದಾರೆ ಎಂದು ತಿಳಿಸಿದರು.

ಜಿಬಿಎ ಚುನಾವಣೆ ಹಿನ್ನಲೆ ಪಕ್ಷವನ್ನು ಸಂಘಟಿತಗೊಳಿಸುವ ಕಾರ್ಯ ನಡೆಯುತ್ತಿದೆ. ಮಾಜಿ ಪ್ರಧಾನಮಂತ್ರಿ ಎಚ್.ಡಿ. ದೇವೇಗೌಡ ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರ ಅವಧಿಯಲ್ಲಿ ಬೆಂಗಳೂರಿಗೆ ನೀಡಿದ ಕೊಡುಗೆಗಳನ್ನು ಜನರಿಗೆ ತಿಳಿಸಲಾಗುವುದು ಎಂದು ಹೇಳಿದರು

ಸ್ಥಳೀಯ ಸಂಸ್ಥೆಗಳ ಚುನಾವಣೆ ಹಿನ್ನಲೆಯಲ್ಲಿ ರಾಜ್ಯದ ಎಂಟು ಕಡೆ ಸಮಾವೇಶಗಳನ್ನು ಆಯೋಜಿಸಲಾಗುತ್ತಿದ್ದು, ಅದರ ಆರಂಭ ನಾಳೆ ಬೆಂಗಳೂರಿನಿಂದವಾಗಲಿದೆ. ತುಮಕೂರು ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ರಜತ ಮಹೋತ್ಸವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

ಜಿಬಿಎ ಚುನಾವಣೆಯಲ್ಲೂ ಹೆಚ್ಚಿನ ಸದಸ್ಯರನ್ನು ಹೊಂದುವ ಗುರಿಯೊಂದಿಗೆ ಪಕ್ಷ ಸಂಘಟನೆ ಬಲಪಡಿಸಲು ಈ ಸಮಾವೇಶಗಳು ನೆರವಾಗಲಿವೆ.ಬೆಂಗಳೂರಿನಲ್ಲಿ ಜೆಡಿಎಸ್ ಶಕ್ತಿ ಕುಂದಿದೆ ಎಂಬ ಟೀಕೆಗಳಿಗೆ ಉತ್ತರವಾಗಿ, ಪಕ್ಷ ಸಂಘಟನೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದು ತಿಳಿಸಿದರು. ಬೆಂಗಳೂರು ಅಭಿವೃದ್ಧಿಗೆ ದೇವೇಗೌಡರ ಕೊಡುಗೆ ಅಪಾರವಾಗಿದ್ದು, ನಗರಕ್ಕೆ ಕಾವೇರಿ ನೀರು ತಂದವರು ದೇವೇಗೌಡರು, ಫ್ಲೈಓವರ್ ಯೋಜನೆಗಳನ್ನು ಜಾರಿಗೆ ತಂದವರೂ ಅವರೇ. ಜಿಬಿಎ ಚುನಾವಣೆಯಲ್ಲಿ ಪ್ರತ್ಯೇಕ ಅಥವಾ ಸ್ವತಂತ್ರ ಸ್ಪರ್ಧೆ ಕುರಿತಂತೆ ಇನ್ನೂ ಯಾವುದೇ ನಿರ್ಧಾರವಾಗಿಲ್ಲ. ಚುನಾವಣೆ ಘೋಷಣೆಯಾದ ಬಳಿಕ ಈ ಕುರಿತು ಚರ್ಚೆ ನಡೆಯಲಿದೆ ಎಂದರು.

ಸದ್ಯಕ್ಕೆ ಮೈತ್ರಿ ಬಗ್ಗೆ ಯಾವುದೇ ಚರ್ಚೆ ಆಗಿಲ್ಲ. ಮಾಡ್ತೀವಿ. ಒಟ್ಟಾಗಿ ಹೋಗಬೇಕಾ? ಏಕಾಂಗಿಯಾಗಿ ಹೋಗಬೇಕಾ? ಅಂತ ಎರಡು ಪಕ್ಷದ ವರಿಷ್ಠರು ತೀರ್ಮಾನ ಮಾಡ್ತಾರೆ. ನಾವು ಪಕ್ಷ ಸಂಘಟನೆ ಮಾಡೋ ಕೆಲಸ ಮಾಡ್ತೀವಿ ಅಂತ ಸ್ಪಷ್ಟಪಡಿಸಿದರು.

ಲೋಕಸಭೆ ಚುನಾವಣೆಯಲ್ಲಿ ನಾವು ಒಟ್ಟಾಗಿ ಹೋಗಿದ್ವಿ. ಈಗಲೂ ಬಿಜೆಪಿ ಕೇಂದ್ರ ಮತ್ತು ರಾಜ್ಯದ ನಾಯಕರ ಜೊತೆ ಸೌಹಾರ್ದಯುತವಾಗಿ ಹೊಂದಾಣಿಕೆ ಮಾಡಿಕೊಳ್ತೀವಿ.

## 'ಲ್ಯಾಂಬೋರ್ಗಿನಿ ಕಾರಿನಲ್ಲಿ ಹೋಗಿ ರಸ್ತೆ ಕಸ ಗುಡಿಸಿ'

ಬೆಂಗಳೂರು: ಮೈಸೂರು ರಸ್ತೆಯಲ್ಲಿ ಅಜಾಗರೂಕತೆ ಮತ್ತು ನಿರ್ಲಕ್ಷ್ಯದಿಂದ ಕಾರು ಓಡಿಸಿದ ಆರೋಪಕ್ಕೆ ಗುರಿಯಾಗಿರುವ ಬೆಂಗಳೂರಿನ ವ್ಯಕ್ತಿಯು ಸಮುದಾಯ ಸೇವೆ ಮಾಡುವುದಾಗಿ ಹೇಳಿರುವುದನ್ನು ಪರಿಗಣಿಸಿರುವ ಹೈಕೋರ್ಟ್ "ಹಸಿರು ಮೈಸೂರು ರಸ್ತೆಯಲ್ಲಿ ಅಜಾಗರೂಕತೆ ಮತ್ತು ನಿರ್ಲಕ್ಷ್ಯದಿಂದ ಕಾರು ಓಡಿಸಿದ ಆರೋಪಕ್ಕೆ ಗುರಿಯಾಗಿರುವ ಬೆಂಗಳೂರಿನ ವ್ಯಕ್ತಿಯು ಸಮುದಾಯ ಸೇವೆ ಮಾಡುವುದಾಗಿ ಹೇಳಿರುವುದನ್ನು ಪರಿಗಣಿಸಿರುವ ಕರ್ನಾಟಕ ಹೈಕೋರ್ಟ್ "ಹಸಿರು ಲ್ಯಾಂಬೋರ್ಗಿನಿ ಕಾರಿನಲ್ಲಿ ಹೋಗಿ ರಸ್ತೆ ಕಸ ಗುಡಿಸಿ, ಮತ್ತೆ ಲ್ಯಾಂಬೋರ್ಗಿನಿಯಲ್ಲಿ ಬನ್ನಿ" ಎಂದು ಗುರುವಾರ ಮೌಖಿಕವಾಗಿ ಹೇಳಿದೆ.

ಅಂತಿಮವಾಗಿ "ಯಾವ ರೀತಿಯ ಸಮುದಾಯ ಸೇವೆಯನ್ನು ಬೆಂಗಳೂರಿನ ಸಿ ವಿ ರಾಮನ್ ನಗರದ ಬಿ ಆರ್ ಚಿರಂತ್ ಮಾಡಬೇಕು" ಎಂಬುದನ್ನು ಆದೇಶದಲ್ಲಿ ವಿವರಿಸುವುದಾಗಿ ಹೇಳಿರುವ ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠವು ಅರ್ಜಿ ಇತ್ಯರ್ಥಪಡಿಸಿದೆ.

ವಿಚಾರಣೆ ಆರಂಭವಾಗುತ್ತಿದ್ದಂತೆ ಪೀಠವು "ಚಿರಂತ್‌ಗೆ ಪಶ್ಚಾತಾಪವಾಗಿದೆ. ಬಿಎನ್‌ಎಸ್‌ಎಸ್‌ನಲ್ಲಿ 10 ರೀತಿಯ ಸಮುದಾಯ ಸೇವೆಗಳಿವೆ. ಲ್ಯಾಂಬೋರ್ಗಿನಿಯಲ್ಲಿ ಹೋಗಿ, ರಸ್ತೆ ಕಸ ಗುಡಿಸಿ, ಮತ್ತೆ ಲ್ಯಾಂಬೋರ್ಗಿನಿಯಲ್ಲಿ ಬನ್ನಿ. ಸಂಚಾರ ನಿಯಮ ಉಲ್ಲಂಘಿಸಿರುವುದರಿಂದ ಸಂಚಾರ ನಿಯಮದ ಪಾಠ ಮಾಡುತ್ತೀರಾ? ನಿಮಯ ಉಲ್ಲಂಘಿಸಿ, ಕಲಿಯುವುದು ಹೇಗೆ ಎಂದು ಮಕ್ಕಳು ಕಲಿಯುತ್ತಾರೆ. ಯಾವ ಸೇವೆ ಮಾಡಬೇಕು ಎಂದು ಬರೆಯುತ್ತೇನೆ, ಅದನ್ನು ಮಾಡಬೇಕು" ಎಂದಿತು.

ಅರ್ಜಿದಾರರ ಪರ ವಕೀಲ ರಜತ್ ಅವರು "ಚಿರಂತ್ ಅವರನ್ನು ಅಫೆಂಡರ್ ಎಂದು ತೋರಿಸಲಾಗಿದೆ. ಚಿರಂತನ್ ಅವರು ಯಾವುದೇ ಅಪರಾಧ ಮಾಡಿಲ್ಲ. ಆದರೂ, ಅವರು ಸಮುದಾಯ ಸೇವೆ ಮಾಡುವ ಇಚ್ಛೆ ಹೊಂದಿದ್ದಾರೆ. ಸಂಚಾರ ನಿಯಮಗಳ ಬಗ್ಗೆ ಶಾಲಾ ಮಕ್ಕಳಿಗೆ ಅರಿವು ಮೂಡಿಸುವ ಕೆಲಸ ಮಾಡುತ್ತಾರೆ. ಸಂಚಾರ ನಿಯಮ ಉಲ್ಲಂಘಿಸದಂತೆ ಮಕ್ಕಳಿಗೆ ತಿಳಿಸುತ್ತಾರೆ. ಬೇರೊಂದು ಪ್ರಕರಣದಲ್ಲಿ ವೈದ್ಯರೊಬ್ಬರಿಗೆ ಸರ್ಕಾರಿ ಶಾಲೆಯಲ್ಲಿ ಪ್ರತಿ ಭಾನುವಾರ ಆರು ತಿಂಗಳ ಕಾಲ ಸಮುದಾಯ ಸೇವೆ ಮಾಡುವಂತೆ ನ್ಯಾಯಾಲಯ ನಿರ್ದೇಶಿಸಿದೆ. ಇಡೀ ದೇಶದಲ್ಲೇ ಇದು ಮೊದಲ ಪ್ರಕರಣವಾಗಲಿದೆ. ವಿನಾಯಿತಿ ತೋರಬೇಕು" ಎಂದರು. ಪ್ರಕರಣದ ಹಿನ್ನೆಲೆ: ಮನುಷ್ಯನ ಪ್ರಾಣಕ್ಕೆ ಹಾನಿಯಾಗುವಂಥ ಸೈಲೆನ್ಸರ್ ಅಳವಡಿಸಿಕೊಂಡಿರುವ ಲ್ಯಾಂಬೋರ್ಗಿನಿ ಕಾರನ್ನು ಮೈಸೂರು ರಸ್ತೆ ಕಡೆಗೆ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡುತ್ತಿರುವ ವಿಡಿಯೊವನ್ನು ಸನಾತನ ಎಂಬ ಎಕ್ಸ್ ಖಾತೆಯಲ್ಲಿ ವೀಕ್ಷಿಸಿರುವುದಾಗಿ ಕರ್ತವ್ಯನಿರತ ಪಿಎಸ್‌ಐ ಆರ್ ರಾಮಸ್ವಾಮಿ ದೂರು ನೀಡಿದ್ದರು. ಇದರ ಅನ್ವಯ ಬೆಂಗಳೂರಿನ ಕೆಂಗೇರಿ ಸಂಚಾರಿ ಠಾಣೆಯಲ್ಲಿ ಜನವರಿ 20ರಂದು -281 ಮತ್ತು ಭಾರತೀಯ ಮೋಟಾರು ವಾಹನಗಳ ಕಾಯಿದೆ 120 ಮತ್ತು177ರ ಅಡಿ ಚಿರಂತನ್ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿತ್ತು.

## ನಿತೀಶ್ ಪ್ರಮಾಣವಚನ

ಪಾಟ್ನಾ: ನಿತೀಶ್ ಕುಮಾರ್ ರಾಜ್ಯಸಭಾ ಸದಸ್ಯರಾಗಿ ಇಂದು ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಇದು ರಾಜ್ಯ ಸರ್ಕಾರದಿಂದ ಅವರು ಹೊರಬರುವ ಸೂಚನೆಯಾಗಿದ್ದು, ಬಿಹಾರದಲ್ಲಿ ಹೊಸ ಸರ್ಕಾರ ರಚನೆಗೆ ದಾರಿ ಸುಗಮಗೊಳಿಸಿದೆ.

ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಬಿಹಾರ ಉಪಮುಖ್ಯಮಂತ್ರಿಗಳಾದ ವಿಜಯ್ ಕುಮಾರ್ ಸಿನ್ಹಾ ಮತ್ತು ಸಾಮ್ರಾಟ್ ಚೌಧರಿ ಭಾಗವಹಿಸಿದ್ದರು.

ಹೊಸ ಹುದ್ದೆ ವಹಿಸಿಕೊಳ್ಳುವ ಒಂದು ದಿನ ಮೊದಲು ನಿತೀಶ್ ಕುಮಾರ್ ದೆಹಲಿಗೆ ಪ್ರಯಾಣ ಬೆಳೆಸಿ, ಶೀಘ್ರದಲ್ಲೇ ಮುಖ್ಯಮಂತ್ರಿ ಹುದ್ದೆಗೆ ರಾಜೀನಾಮೆ ನೀಡುವುದಾಗಿ ದೃಢಪಡಿಸಿದ್ದರು. ಬಿಹಾರದಲ್ಲಿ ನನ್ನ ಹೆಚ್ಚಿನ ಕೆಲಸವನ್ನು ಪೂರ್ಣಗೊಳಿಸಿದ್ದೇನೆ. ಈಗ ದೆಹಲಿಯಲ್ಲಿ ನನ್ನ ಜವಾಬ್ದಾರಿಗಳತ್ತ ಗಮನಹರಿಸಲು ಉದ್ದೇಶಿಸಿದ್ದೇನೆ ಎಂದು ತಿಳಿಸಿದ್ದರು.

ನಾನು ಅಲ್ಲಿನ ಸಿಎಂ ಸ್ಥಾನದಿಂದ ಕೆಳಗಿಳಿದು ಇಲ್ಲಿ ಕೆಲಸ ಮಾಡುತ್ತೇನೆ. ಮೂರು ಅಥವಾ ನಾಲ್ಕು ದಿನಗಳಲ್ಲಿ ನಾನು ರಾಜೀನಾಮೆ ನೀಡುತ್ತೇನೆ. ಬೇರೆಯವರಿಗೆ ಸಿಎಂ ಸ್ಥಾನ ನೀಡಲಾಗುವುದು ಎಂದು ನಿತೀಶ್ ಕುಮಾರ್ ಹೇಳಿದ್ದರು.

ನಿತೀಶ್ ಕುಮಾರ್ ಬಿಹಾರದ ಅತ್ಯಂತ ದೀರ್ಘಾವಧಿಯ ಮುಖ್ಯಮಂತ್ರಿಯಾಗಿದ್ದಾರೆ. 1985 ರಲ್ಲಿ ಶಾಸಕರಾಗಿ ತಮ್ಮ ರಾಜಕೀಯ ಪ್ರಯಾಣವನ್ನು ಪ್ರಾರಂಭಿಸಿದರು. ನಂತರ ಅಟಲ್ ಬಿಹಾರಿ ವಾಜಪೇಯಿ ಸರ್ಕಾರದಲ್ಲಿ ಕೇಂದ್ರ ಸಚಿವರಾಗಿ ಸೇವೆ ಸಲ್ಲಿಸಿದ್ದರು.

## ಇಂಧನ ವಿತರಣೆ ಸರಿಯಾಗಿ ವಿತರಿಸಿ: ಸಚಿವ ಕೆ.ಹೆಚ್.ಮುನಿಯಪ್ಪ ಎಚ್ಚರಿಕೆ

ಬೆಂಗಳೂರು: ಸಾರ್ವಜನಿಕರ ಹಿತದೃಷ್ಟಿಯಿಂದ ರಾಜ್ಯಕ್ಕೆ ಅಗತ್ಯವಿರುವಷ್ಟು ಇಂಧನ ಹಾಗೂ ಎಲ್‌ಪಿಜಿ ಸರಬರಾಜು ಸಮರ್ಪಕವಾಗಿ ನಡೆಯಬೇಕು ಎಂದು ಆಹಾರ ಸಚಿವ ಕೆ.ಹೆಚ್. ಮುನಿಯಪ್ಪ ಕೇಂದ್ರ ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

ವಸಂತನಗರದ ಆಹಾರ ಭವನದಲ್ಲಿ ಇಂದು ಐಒಸಿ, ಬಿಪಿಸಿ, ಎಚ್ಪಿಸಿ ಮತ್ತು ಗೇಲ್ ತೈಲ ಸಂಸ್ಥೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಬಳಿಕ ಮಾಧ್ಯಮದವರನ್ನು ಉದ್ದೇಶಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಎಲ್‌ಪಿಜಿ ಸರಬರಾಜಿನಲ್ಲಿ ವಿಫಲವಾಗಿದೆ



ಎಂದು ಟೀಕಿಸಿದರು. ರಾಜ್ಯದ ಅಗತ್ಯಕ್ಕೆ ತಕ್ಕಂತೆ ಅನಿಲ ಪೂರೈಕೆ ಮಾಡಬೇಕು ಎಂದು ಒತ್ತಾಯಿಸಿದರು.

ಆಟೋ ಚಾಲಕರು ಎಲ್‌ಪಿಜಿ ಗ್ಯಾಸ್ ಮೇಲೆ ಅವಲಂಬಿತರಾಗಿರುವುದರಿಂದ ಅವರಿಗೆ ಹೆಚ್ಚಿನ ಪ್ರಮಾಣದಲ್ಲಿ ಗ್ಯಾಸ್ ಪೂರೈಕೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಈ ಸಂಬಂಧ ಕೇಂದ್ರ ಪೆಟ್ರೋಲಿಯಂ ಸಚಿವರಿಗೆ ಪತ್ರ ಬರೆದಿದ್ದು, ಕೇಂದ್ರ ಪೆಟ್ರೋಲಿಯಂ ಕಾರ್ಯದರ್ಶಿಗಳೊಂದಿಗೆ ಮಾತುಕತೆ ನಡೆಸಿ ಸಮಸ್ಯೆ ಬಗೆಹರಿಸಲಾಗುವುದು ಎಂದು ತಿಳಿಸಿದರು.

ಸರ್ಕಾರ ನಿಗದಿಪಡಿಸಿರುವ ದರಕ್ಕಿಂತ ಹೆಚ್ಚು ದರದಲ್ಲಿ ಖಾಸಗಿ ಕಂಪನಿಗಳು ಗ್ಯಾಸ್ ಮಾರಾಟ ಮಾಡಿದರೆ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳಲಾಗುವುದು. ಗ್ರಾಹಕರಿಗೆ ತೊಂದರೆ ನೀಡುವ ಕಂಪನಿಗಳನ್ನು ಸೀಜ್ ಮಾಡುವುದಾಗಿ ಎಚ್ಚರಿಕೆ ನೀಡಿದರು.

ಯುದ್ಧ ಪರಿಸ್ಥಿತಿಯ ಪರಿಣಾಮವಾಗಿ ಇಂಧನ ಕೊರತೆ ಉಂಟಾಗಿರುವ ಹಿನ್ನೆಲೆ ಕೆಲವು ತೊಂದರೆಗಳು ಕಂಡುಬಂದರೂ, ಕೇಂದ್ರ ಸರ್ಕಾರ ನೀಡುವ ಗ್ಯಾಸ್ ಅನ್ನು ರಾಜ್ಯ ಸರ್ಕಾರ ಸಮರ್ಪಕವಾಗಿ ವಿತರಿಸುತ್ತಿದೆ. ಈ ಪ್ರಕ್ರಿಯೆಯಲ್ಲಿ ರಾಜ್ಯ ಸರ್ಕಾರದ ಯಾವುದೇ ತಪ್ಪಿಲ್ಲ ಎಂದು ಸ್ಪಷ್ಟಪಡಿಸಿದರು.

ಕಾಳಸಂತೆಯಲ್ಲಿ ಗ್ಯಾಸ್ ಸಿಲಿಂಡರ್‌ಗಳನ್ನು ಹೆಚ್ಚಿನ ದರಕ್ಕೆ ಮಾರಾಟ ಮಾಡುವವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುತ್ತಿದ್ದು, ಅಕ್ರಮವಾಗಿ ಸಂಗ್ರಹಿಸಿರುವ ಸಿಲಿಂಡರ್‌ಗಳನ್ನು ವಶಪಡಿಸಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಸಭೆಯಲ್ಲಿ ಸಚಿವರ ಆಪ್ತ ಕಾರ್ಯದರ್ಶಿ ಡಾ.ಹೆಚ್.ನಟರಾಜ್ ಸೇರಿದಂತೆ ಅನಿಲ ಕಂಪನಿಗಳ ಅಧಿಕಾರಿಗಳು ಮತ್ತು ನಿಗಮದ ವ್ಯವಸ್ಥಾಪಕ ನಿರ್ದೇಶಕ ಜಗದೀಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
11/04/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಎಲೆಕ್ಟ್ರಾನಿಕ್ಸ್ ಕ್ಷೇತ್ರದಲ್ಲಿ ಭಾರತದ ಶಕ್ತಿಪ್ರದರ್ಶನ



ಬೆಂಗಳೂರು

ಗ್ರೇಟರ್ ನೋಯ್ಡಾದ ಇಂಡಿಯಾ ಎಕ್ಸ್‌ಪೋ ಮಾರ್ಟ್‌ನಲ್ಲಿ 'ಎಲೆಕ್ಟ್ರಾನಿಕಾ ಇಂಡಿಯಾ' ಹಾಗೂ 'ಪ್ರೊಡಕ್ಟ್ರೋನಿಕಾ ಇಂಡಿಯಾ 2026' ಮಹತ್ವದ ವಾಣಿಜ್ಯ ಪ್ರದರ್ಶನಗಳು ಭರ್ಜರಿಯಾಗಿ ಪ್ರಾರಂಭವಾಗಿದ್ದು, ಭಾರತದ ಎಲೆಕ್ಟ್ರಾನಿಕ್ಸ್ ಕ್ಷೇತ್ರದ ವೇಗದ ಬೆಳವಣಿಗೆಗೆ ಹೊಸ ದಿಕ್ಕನ್ನು ನೀಡುವ ಘಟನೆಯಾಗಿ ಗುರುತಿಸಿಕೊಂಡಿವೆ. ಉದ್ಘಾಟನಾ ದಿನವೇ ನೀತಿ ನಿರ್ಧಾರಗಳು ಮತ್ತು ವ್ಯವಹಾರ ಉದ್ದೇಶಗಳ ಸಮನ್ವಯದೊಂದಿಗೆ ಗಮನ ಸೆಳೆಯಿತು.

ಹಿರಿಯ ಸರ್ಕಾರದ ನಾಯಕರು ಮತ್ತು ಉದ್ಯಮ ಪ್ರತಿನಿಧಿಗಳು ಈ ವೇದಿಕೆಯಲ್ಲಿ ಒಂದಾಗಿ ಸೇರಿ ಭಾರತದ ಉತ್ಪಾದನಾ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸುವತ್ತ ತಮ್ಮ ಬದ್ಧತೆಯನ್ನು ವ್ಯಕ್ತಪಡಿಸಿದರು.

ಮೆಸ್ಸೆ ಮ್ಯೂನಿಕ್ ಇಂಡಿಯಾ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಐಎಂಇಎ ಪ್ರದೇಶದ ಅಧ್ಯಕ್ಷರಾಗಿರುವ ಭುಪಿಂದರ್ ಸಿಂಗ್ ಮಾತನಾಡಿ, "ಈ ವೇದಿಕೆಗಳು ಈಗ ಸ್ಪಷ್ಟ ವ್ಯವಹಾರ ಉದ್ದೇಶಗಳನ್ನು ಹೊಂದಿರುವ ಸಂಸ್ಥೆಗಳ ಪ್ರಮುಖ ಕೇಂದ್ರಗಳಾಗಿ ರೂಪಾಂತರಗೊಂಡಿವೆ. ಕಂಪನಿಗಳು ಈಗ ಸೋರ್ಸಿಂಗ್, ಸಹಭಾಗಿತ್ವ ಅಥವಾ ಹೂಡಿಕೆ ಎಂಬ ಸ್ಪಷ್ಟ ಆದ್ಯತೆಗಳೊಂದಿಗೆ ಇಲ್ಲಿ ಭಾಗವಹಿಸುತ್ತಿವೆ. ಆರಂಭಿಕ ಚಟುವಟಿಕೆಗಳೇ ನಿಜವಾದ ಮತ್ತು ಅಳೆಯಬಹುದಾದ ಫಲಿತಾಂಶಗಳತ್ತ ಸಾಗುತ್ತಿರುವುದನ್ನು ತೋರಿಸುತ್ತವೆ," ಎಂದು ಹೇಳಿದರು.

# "ಪೆಸಾ ಸಮರ್ ಕ್ಯಾಂಪ್ 2026 ಉದ್ಘಾಟನೆ: ಯುವ ಪ್ರತಿಭೆಗಳಿಗೆ ಕ್ರೀಡಾ ಪ್ರೇರಣೆ"

ಬೆಂಗಳೂರು

ಜಯನಗರ 3ನೇ ಬ್ಲಾಕ್‌ನ ಕಿಟೂರು ರಾಣಿ ಚೆನ್ನಮ್ಮ ಒಳಾಂಗಣ ವಾಲಿಬಾಲ್ ಕ್ರೀಡಾಂಗಣದಲ್ಲಿ ಪೆಸಾ ಸಮರ್ ಕ್ಯಾಂಪ್ 2026ರ ಉದ್ಘಾಟನಾ ಸಮಾರಂಭವು ಸಂಭ್ರಮದಿಂದ ನೆರವೇರಿತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ನಟ ಹಾಗೂ ನಿರ್ಮಾಪಕರಾದ ಗಂಡಸಿ ಸದಾನಂದ ಸ್ವಾಮಿ, ದೈಹಿಕ ಶಿಕ್ಷಣ ನಿರ್ದೇಶಕ ಸುರೇಶ್, ಹಾಗೂ ಪೆಸಾ ಸಂಸ್ಥೆಯ ಅಧ್ಯಕ್ಷ ನಿಸಾರ್ ಅಹ್ಮದ್ ಅವರು ಭಾಗವಹಿಸಿದರು. ಚಲನಚಿತ್ರ ನಟಿ ಶ್ರೀಮತಿ ವಂದನಾ, ಮಹಾನಂದಿ ಸುರೇಶ್ ಕುಮಾರ್, ಉಪಾಧ್ಯಕ್ಷರಾದ ನಂಜುಂಡಸ್ವಾಮಿ, ರಂಗಸ್ವಾಮಿ, ಶಂಕರಪ್ಪ, ಕಾರ್ಯದರ್ಶಿ ಅಸ್ಲಾಂ, ಖಜಾಂಚಿ ಶಿವಲಿಂಗೇಗೌಡ, ಸಂಘಟನಾ ಕಾರ್ಯದರ್ಶಿ ಆರ್. ಸುರೇಶ್ ಹಾಗೂ ನಿರ್ದೇಶಕರಾದ ಸತೀಶ್ ಮತ್ತು ಚಿನ್ನರಾಜ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಎಲ್ಲಾ ದೈಹಿಕ ಶಿಕ್ಷಣ ಶಿಕ್ಷಕರು ಕ್ಯಾಂಪ್‌ಗೆ ಅಧಿಕೃತ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಗಣ್ಯರು, ಯುವಜನತೆಗೆ ಕ್ರೀಡೆ ಮತ್ತು ಶಿಬಿರಗಳ ಮಹತ್ವವನ್ನು ವಿವರಿಸಿ, ಇಂತಹ ಕಾರ್ಯಕ್ರಮಗಳು ಮಕ್ಕಳಲ್ಲಿ ಶಿಸ್ತು, ತಂಡದ ಮನೋಭಾವ ಮತ್ತು ಪ್ರತಿಭೆ ಬೆಳವಣಿಗೆಗೆ ಸಹಾಯಕವಾಗುತ್ತವೆ ಎಂದು ಹೇಳಿದರು.







ಈ ಸಂದರ್ಭದಲ್ಲಿ ಅನೇಕ ಗಣ್ಯರು, ಕ್ರೀಡಾಪಟುಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು, ಕಾರ್ಯಕ್ರಮಕ್ಕೆ ವಿಶೇಷ ಮೆರಗು ತಂದರು. ಪೆಸಾ ಸಮರ್ ಕ್ಯಾಂಪ್ 2026 ಮೂಲಕ ಯುವ ಪ್ರತಿಭೆಗಳಿಗೆ ಕ್ರೀಡಾ ತರಬೇತಿ, ಶಿಸ್ತು ಮತ್ತು ತಂಡದ ಆತ್ಮವನ್ನು ಬೆಳೆಸುವ ಉದ್ದೇಶ ಹೊಂದಲಾಗಿದೆ.


ಕಾರ್ಯಕ್ರಮವು ಉತ್ಸಾಹಭರಿತ ವಾತಾವರಣದಲ್ಲಿ ಯಶಸ್ವಿಯಾಗಿ ನಡೆಯಿತು.

# 'ಬಳಲುತ್ತಿರುವ ಕಾರ್ಪೊರೇಟ್ ವಲಯಕ್ಕೆ ಆಧ್ಯಾತ್ಮಿಕ ಸ್ಪರ್ಶ'

ಬೆಂಗಳೂರು

ಗಡುವುಗಳು, ಹೂಡಿಕೆ ಸುತ್ತುಗಳು ಮತ್ತು ನಿರಂತರ ಸ್ಪರ್ಧಾತ್ಮಕ ಓಟದ ನಡುವೆ ಸಾಗುತ್ತಿರುವ ನಗರ ಜೀವನದಲ್ಲಿ ಮನಶಾಂತಿಯನ್ನು ಕಂಡುಕೊಳ್ಳುವುದು ಇಂದು ಒಂದು ದೊಡ್ಡ ಸವಾಲಾಗಿ ಪರಿಣಮಿಸಿದೆ. ಇಂತಹ ಒತ್ತಡದ ವಾತಾವರಣದಲ್ಲಿ, ಬೆಂಗಳೂರಿನ ಆಧ್ಯಾತ್ಮಿಕ ಕ್ಷೇಮ ವೇದಿಕೆಯಾದ 'ಯುನಿಕ್ ಟ್ಯಾರೋ 1111' ಕಾರ್ಪೊರೇಟ್ ವಲಯದ ಬಳಲುತ್ತಿರುವ ವೃತ್ತಿಪರರಿಗೆ ಹೊಸ ದಾರಿ ತೋರಿಸುತ್ತಿದೆ.





ಡಾ. ರಶ್ಮಿ ಮುತಾಲ್ಕರ್ ಹಾಗೂ ಗೌತಮ್ ಶ್ರವಣ್ ಕುಮಾರ್ ಸ್ಥಾಪಿಸಿದ ಈ ವೇದಿಕೆ, ಹೆಚ್ಚಿನ ಕಾರ್ಯಭಾರ ಮತ್ತು ಮಾನಸಿಕ ಒತ್ತಡದಿಂದ ಬಳಲುತ್ತಿರುವ ವೃತ್ತಿಪರರನ್ನು ಗುರಿಯಾಗಿಸಿಕೊಂಡು ಕಾರ್ಯನಿರ್ವಹಿಸುತ್ತಿದೆ. ವಿಶೇಷವಾಗಿ ಉನ್ನತ ಹುದ್ದೆಗಳಲ್ಲಿ ಕೆಲಸ ಮಾಡುವವರು ಹಾಗೂ ಸಂಸ್ಥಾಪಕರು, ಹೊರಗೆ ಯಶಸ್ವಿಯಾಗಿ ಕಾಣಿಸಿಕೊಂಡರೂ ಒಳಗಿನಿಂದ ಸಂಪೂರ್ಣವಾಗಿ ಕುಗ್ಗಿರುವ ಪರಿಸ್ಥಿತಿಯಲ್ಲಿ ಈ ವೇದಿಕೆಯನ್ನು ಸಂಪರ್ಕಿಸುತ್ತಿದ್ದಾರೆ.

ಅತಿಯಾದ ಕೆಲಸದ ಒತ್ತಡದಿಂದ ಉಂಟಾಗುವ ಆಯಾಸ, ಭಾವನಾತ್ಮಕ ಬಳಲಿಕೆ, ವೃತ್ತಿಜೀವನದ ಗೊಂದಲ ಹಾಗೂ ಜೀವನದ ಉದ್ದೇಶದಿಂದ ದೂರವಾಗುತ್ತಿರುವ ಸ್ಥಿತಿ ಇವುಗಳು ಬಹುತೇಕ ಗ್ರಾಹಕರಲ್ಲಿ ಕಂಡುಬರುವ ಸಾಮಾನ್ಯ ಸಮಸ್ಯೆಗಳಾಗಿವೆ ಎಂದು ಡಾ. ರಶ್ಮಿ ತಿಳಿಸಿದ್ದಾರೆ. "ನಾವು ಜನರು ತಮ್ಮ ವಾಸ್ತವಿಕತೆಯನ್ನು ಒಪ್ಪಿಕೊಳ್ಳಲು, ಒಳಗಿನಿಂದ ಬದಲಾವಣೆಯನ್ನು ತರಲು ಮತ್ತು ಸ್ಪಷ್ಟತೆಯನ್ನು ಕಂಡುಕೊಳ್ಳಲು ಸಹಾಯ ಮಾಡುತ್ತೇವೆ. ಇದರಿಂದ ಅವರು ತಮ್ಮ ಜೀವನವನ್ನು ಉತ್ತಮವಾಗಿ ನಿರ್ವಹಿಸಲು ಸಾಧ್ಯವಾಗುತ್ತದೆ," ಎಂದು ಅವರು ವಿವರಿಸಿದ್ದಾರೆ.

ಗೌತಮ್ ಶ್ರವಣ್ ಕುಮಾರ್ ಕೂಡ ಇದೇ ಮಾತನ್ನು ಪ್ರತಿಧ್ವನಿಸುತ್ತಾ, "ಜನರು ಎದುರಿಸುತ್ತಿರುವ ಪ್ರಮುಖ ಸಮಸ್ಯೆಗಳು ಅತಿಯಾದ ಆಯಾಸ, ಸ್ಪಷ್ಟತೆಯ ಕೊರತೆ ಮತ್ತು ಜೀವನದ ಗುರಿಯಿಂದ ದೂರವಾಗಿರುವುದು. ಅವರಿಗೆ ಬೆಂಬಲ, ಅರಿವು ಮತ್ತು ಸರಿಯಾದ ಮಾರ್ಗದರ್ಶನ ದೊರೆಯುವಂತಹ ವಾತಾವರಣವನ್ನು ನಿರ್ಮಿಸುವುದೇ ನಮ್ಮ ಉದ್ದೇಶ," ಎಂದು ತಿಳಿಸಿದ್ದಾರೆ.

# ಭಾರತದ ವಿದ್ಯುತ್ ಚಲನೆಯ ಕ್ಷೇತ್ರದಲ್ಲಿ ಹೊಸ ಹಾದಿ

ಹೈದರಾಬಾದ್

ಭಾರತದ ಪ್ರಮುಖ ವಿದ್ಯುತ್ ಬಸ್ ತಯಾರಕ ಸಂಸ್ಥೆಯಾಗಿರುವ ಓಲೆಕ್ಟ್ರಾ ಗ್ರೀನ್‌ಟೆಕ್ ಲಿಮಿಟೆಡ್ ತನ್ನ ಹೊಸ ಬ್ರಾಂಡ್ ಗುರುತನ್ನು ಅನಾವರಣಗೊಳಿಸಿದೆ. "ಖಿಡಿಚಿಟಿಜಿಂಡಿಟುಟಿರ ಇತಜಡಿಥಿಜಚಿಥಿ" ಎಂಬ ಹೊಸ ಟ್ಯಾಗ್ಲೈನ್ ಸಹ ಈ ಸಂದರ್ಭದಲ್ಲಿ ಪರಿಚಯಿಸಲಾಗಿದೆ.

ಈ ಹೊಸ ಬ್ರಾಂಡ್ ಗುರುತು ಓಲೆಕ್ಟ್ರಾ ಸಂಸ್ಥೆಯ ಬೆಳವಣಿಗೆಯನ್ನು ಪ್ರತಿಬಿಂಬಿಸುತ್ತದೆ. ವಿದ್ಯುತ್ ಬಸ್ ತಯಾರಿಕೆಯಲ್ಲಿ ಮುಂಚೂಣಿಯಲ್ಲಿದ್ದ ಸಂಸ್ಥೆ ಈಗ ಸಮಗ್ರ ಚಲನೆ ಮತ್ತು ಇಂಧನ ಪರಿಹಾರಗಳನ್ನು ನೀಡುವ, ನವೀನತೆಯತ್ತ ಮುಖ ಮಾಡಿದ ಸಂಸ್ಥೆಯಾಗಿ ರೂಪಾಂತರಗೊಳ್ಳುತ್ತಿರುವುದನ್ನು ಇದು ಸೂಚಿಸುತ್ತದೆ.

ಹೊಸ ಗುರುತಿನ ಮೂಲಕ ಆಧುನಿಕ ವಿನ್ಯಾಸ, ಸ್ಪಷ್ಟ ಕಥನ ಮತ್ತು ಏಕೀಕೃತ ಧ್ವನಿಯನ್ನು ಪರಿಚಯಿಸಲಾಗಿದೆ. ದೀರ್ಘಕಾಲೀನ ದೃಷ್ಟಿಕೋನದಂತೆ, ಸ್ಥಿರ ಮತ್ತು ಮೌಲ್ಯಾಧಾರಿತ ಚಲನೆ ಹಾಗೂ ಇಂಧನ ಪರಿಹಾರಗಳ ಮೂಲಕ ಜಾಗತಿಕ ಮಟ್ಟದಲ್ಲಿ ಜವಾಬ್ದಾರಿಯುತ ಭವಿಷ್ಯ ನಿರ್ಮಾಣದಲ್ಲಿ ಮುನ್ನಡೆ ಸಾಧಿಸುವುದು ಸಂಸ್ಥೆಯ ಗುರಿಯಾಗಿದೆ.

ಈ ದೃಷ್ಟಿಗೆ ಅನುಗುಣವಾಗಿ, ಚಲನೆ ಮತ್ತು ಇಂಧನ ಕ್ಷೇತ್ರದಲ್ಲಿ ನಂಬಲರ್ಹ ಭಾಗ ಸಹಭಾಗಿಯಾಗಿ ಪರಿಣಮಿಸುವುದು ಸಂಸ್ಥೆಯ ಧ್ಯೇಯವಾಗಿದೆ. ಸುಲಭವಾಗಿ ಬಳಸಬಹುದಾದ ನವೀನತೆ, ಕಾರ್ಯನಿರ್ವಹಣಾ ಶ್ರೇಷ್ಠತೆ ಮತ್ತು ಗ್ರಾಹಕ ಅನುಭವದ ಮೂಲಕ ಎಲ್ಲ ಹಿತಾಸಕ್ತಿದಾರರಿಗೆ ಮೌಲ್ಯ ಸೃಷ್ಟಿಸುವುದು ಉದ್ದೇಶವಾಗಿದೆ.

"ಖಿಡಿಚಿಟಿಜಿಂಡಿಟುಟಿರ ಇತಜಡಿಥಿಜಚಿಥಿ" ಎಂಬ ಟ್ಯಾಗ್ಲೈನ್ ಸಂಸ್ಥೆಯ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ನಾಗರಿಕರ ದಿನನಿತ್ಯದ ಚಲನವಲನವನ್ನು ಸುಧಾರಿಸುವುದು, ಸಮುದಾಯಗಳನ್ನು ಸಬಲಗೊಳಿಸುವುದು, ಪಾಲುದಾರರನ್ನು ಪ್ರೋತ್ಸಾಹಿಸುವುದು ಮತ್ತು ಸಂಸ್ಥೆಯ ಒಳಗಡೆ ಉದ್ದೇಶಪೂರ್ಣ ಕಾರ್ಯ ಪದ್ಧತಿಯನ್ನು ಉತ್ತೇಜಿಸುವುದು ಇದರ ಭಾಗವಾಗಿದೆ.

ಬ್ರಾಂಡ್ ಮರುಸ್ಥಾಪನೆ ಮೂರು ಪ್ರಮುಖ ಅಂಶಗಳ ಮೇಲೆ ಆಧಾರಿತವಾಗಿದೆ ಪ್ರಾಗ್ಮಾಟಿಕ್ ಫ್ಯೂಚರಿಸಮ್, ಅಕ್ಸೆಸಿಬಲ್ ಇನೋವೇಶನ್ ಮತ್ತು ಟ್ರಸ್ಟೆಡ್ ಗೈಡ್. ಭವಿಷ್ಯಮುಖಿ ತಂತ್ರಜ್ಞಾನಗಳನ್ನು ವಾಸ್ತವ ಪರಿಸ್ಥಿತಿಗಳಿಗೆ ಹೊಂದಿಕೊಳ್ಳುವಂತೆ ರೂಪಿಸುವುದು, ನವೀನತೆಯನ್ನು ಎಲ್ಲರಿಗೂ ತಲುಪುವಂತೆ ಮಾಡುವುದು ಹಾಗೂ ವಿಶ್ವಾಸಾರ್ಹ ಮಾರ್ಗದರ್ಶಕನಾಗಿರುವುದು ಸಂಸ್ಥೆಯ ಧೋರಣೆಗಳಾಗಿವೆ. ಹೊಸ ಗುರುತಿನಲ್ಲಿ ದೃಶ್ಯ ಅಂಶಗಳನ್ನೂ ಪುನರ್ವ್ಯಾಖ್ಯಾನಿಸಲಾಗಿದೆ. 'ಓಲೆಕ್ಟ್ರಾ ಪ್ರಿಸಮ್' ರೂಪದಲ್ಲಿರುವ ತ್ರಿಕೋನವು ದಿಟ್ಟತೆ ಮತ್ತು ಉದ್ದೇಶಪೂರ್ಣ ದಿಕ್ಕನ್ನು ಸೂಚಿಸಿದರೆ, ಅದರ ಸುತ್ತಲಿನ ವೃತ್ತ 'ಓಲೆಕ್ಟ್ರಾ ಯೂನಿವರ್ಸ್' ಎಂಬ ಪರಿಕಲ್ಪನೆ ಮೂಲಕ ಪಾಲುದಾರರು, ನಗರಗಳು ಮತ್ತು ಮೂಲಸೌಕರ್ಯಗಳ ಸಮಗ್ರ ಪರಿಸರವನ್ನು ಪ್ರತಿನಿಧಿಸುತ್ತದೆ.

# ಎನ್‌ಬಿಬಿಎಲ್‌ನ 'ಬ್ಯಾಂಕಿಂಗ್ ಕನೆಕ್ಟ್' ವೇದಿಕೆಗೆ ಆಕ್ಸಿಸ್ ಬ್ಯಾಂಕ್ ಸೇರ್ಪಡೆ

ಬೆಂಗಳೂರು

ನ್ಯಾಷನಲ್ ಪೇಮೆಂಟ್ಸ್ ಕಾರ್ಪೊರೇಷನ್ ಆಫ್ ಇಂಡಿಯಾ (ಎನ್ ಪಿ ಸಿ ಐ) ದ ಅಂಗಸಂಸ್ಥೆಯಾದ 'ಎನ್ ಪಿ ಸಿ ಐ ಭಾರತ್ ಬಿಲ್ ಪೇ ಲಿಮಿಟೆಡ್' (ಎನ್ ಬಿ ಬಿ ಎಲ್) ಅಭಿವೃದ್ಧಿಪಡಿಸಿರುವ 'ಬ್ಯಾಂಕಿಂಗ್ ಕನೆಕ್ಟ್' ಪ್ಲಾಟ್ ಫಾರ್ಮ್ ಗೆ ದೇಶದ ಪ್ರಮುಖ ಖಾಸಗಿ ಬ್ಯಾಂಕ್ ಆದ ಆಕ್ಸಿಸ್ ಬ್ಯಾಂಕ್ ಅಧಿಕೃತವಾಗಿ ಸೇರ್ಪಡೆಗೊಂಡಿದೆ.

ಈ ಹೊಸ ತಾಂತ್ರಿಕ ಸಂಯೋಜನೆಯಿಂದಾಗಿ ಆಕ್ಸಿಸ್ ಬ್ಯಾಂಕ್ ನ ಸುಮಾರು 3.7 ಕೋಟಿ ಗ್ರಾಹಕರು ಇನ್ಮುಂದೆ ಡಿಜಿಟಲ್ ಪಾವತಿಗಳನ್ನು ಹೆಚ್ಚು ವೇಗವಾಗಿ ಮತ್ತು ಸುಲಭವಾಗಿ ಮಾಡಲು ಸಾಧ್ಯವಾಗಲಿದೆ. ಈ ಪ್ಲಾಟ್ ಫಾರ್ಮ್ ಮೂಲಕ ದೇಶದ 4,800 ಕ್ಕೂ ಹೆಚ್ಚು ವ್ಯಾಪಾರಿಗಳ ಬಳಿ ಆನ್ ಲೈನ್ ಶಾಪಿಂಗ್ ಮಾಡುವಾಗ ಗ್ರಾಹಕರಿಗೆ ಅತ್ಯುತ್ತಮ 'ನೆಟ್-ಬ್ಯಾಂಕಿಂಗ್' ಅನುಭವ ದೊರೆಯಲಿದೆ.

ಬ್ಯಾಂಕಿಂಗ್ ಕನೆಕ್ಟ್ ಪ್ಲಾಟ್ ಫಾರ್ಮ್ ತನ್ನ ಇಂಟರ್-ಆಪರೇಬಲ್ ಡಿಜಿಟಲ್ ಪೇಮೆಂಟ್ ವ್ಯವಸ್ಥೆಯ ಮೂಲಕ ಬ್ಯಾಂಕಿಂಗ್ ವಲಯದಲ್ಲಿ ಕ್ರಾಂತಿ ಮಾಡುತ್ತಿದೆ. ಸದ್ಯ ಎಸ್ ಬಿ ಐ, ಐಸಿಐಸಿಐ ಮತ್ತು ಎಚ್ ಡಿ ಎಫ್ ಸಿ ಬ್ಯಾಂಕ್ ಗಳೂ ಸೇರಿದಂತೆ ಒಟ್ಟು ಎಂಟು ಪ್ರಮುಖ ಬ್ಯಾಂಕ್ ಗಳು ಈ ಪ್ಲಾಟ್ ಫಾರ್ಮ್ ನಲ್ಲಿ ಸಕ್ರಿಯವಾಗಿವೆ. ಇದರ ಜೊತೆಗೆ 11 ಪೇಮೆಂಟ್ ಅಗ್ರಿಗೇಟರ್ ಗಳು ಕೂಡ ಈ ವ್ಯವಸ್ಥೆಯ ಭಾಗವಾಗಿವೆ.

ಡಿಜಿಟಲ್ ಪಾವತಿ ಪ್ರಕ್ರಿಯೆಯನ್ನು ಸರಳಗೊಳಿಸುವುದು ಮತ್ತು ಭದ್ರತೆಯನ್ನು ಹೆಚ್ಚಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಉದ್ಯಮವು ಹಂತಹಂತವಾಗಿ ಇಂಟರ್-ಆಪರೇಬಲ್ ನೆಟ್-ಬ್ಯಾಂಕಿಂಗ್ ವ್ಯವಸ್ಥೆಯತ್ತ ವಾಲುತ್ತಿರುವುದು ಡಿಜಿಟಲ್ ಇಂಡಿಯಾ ಅಭಿಯಾನಕ್ಕೆ ಹೆಚ್ಚಿನ ಶಕ್ತಿ ನೀಡಿದೆ.

ಈ ಪ್ಲಾಟ್ ಫಾರ್ಮ್ ಸರಳೀಕೃತ ಆನ್ ಬೋರ್ಡಿಂಗ್ ಫ್ರೇಮ್ ವರ್ಕ್ ಅನ್ನು ಹೊಂದಿದ್ದು, ಇದು ಸಂಯೋಜನೆಯ ಸಮಯವನ್ನು ಕಡಿಮೆ ಮಾಡುತ್ತದೆ ಮತ್ತು ಸ್ಟ್ಯಾಂಡರ್ಡೈಸ್ಡ್ ಎಪಿಐಗಳು ಹಾಗೂ ಟೂಲ್ ಕಿಟ್ ಗಳ ಮೂಲಕ ಮರ್ಚೆಂಟ್ ಗಳನ್ನು ಶೀಘ್ರವಾಗಿ ಸಕ್ರಿಯಗೊಳಿಸಲು ಪೇಮೆಂಟ್ ಅಗ್ರಿಗೇಟರ್ ಗಳಿಗೆ ಅವಕಾಶ ನೀಡುತ್ತದೆ.

ಇದು ಪ್ರತ್ಯೇಕ ಬ್ಯಾಂಕ್ ಸಂಯೋಜನೆಗಳು ಮತ್ತು ಹಳೆಯ ದ್ವಿಪಕ್ಷೀಯ ಒಪ್ಪಂದಗಳ ಮೇಲಿನ ಪೇಮೆಂಟ್ ಅಗ್ರಿಗೇಟರ್‌ಗಳ ಅವಲಂಬನೆಯನ್ನು ಕಡಿಮೆ ಮಾಡುತ್ತದೆ, ಇದರಿಂದ ಗ್ರಾಹಕರಿಗೆ ವೇಗವಾದ ಮತ್ತು ಸ್ಥಿರವಾದ ಪಾವತಿ ಅನುಭವ ದೊರೆಯುತ್ತದೆ. ವ್ಯಾಪಾರಿಗಳು ಕೂಡ ಸ್ಟ್ಯಾಂಡರ್ಡೈಸ್ಡ್ ನೆಟ್ ಬ್ಯಾಂಕಿಂಗ್ ಅನುಭವ, ಸುಧಾರಿತ ಪಾವತಿ ವಿಶ್ವಾಸಾರ್ಹತೆ ಮತ್ತು ಚೆಕ್ ಔಟ್ ಸಮಯದಲ್ಲಿ ಹೆಚ್ಚಿನ ಗ್ರಾಹಕ ತೃಪ್ತಿಯ ಪ್ರಯೋಜನಗಳನ್ನು ಪಡೆಯುತ್ತಾರೆ.

# ಜಯಂತಿ ಪೂರ್ವಭಾವಿ ಸಭೆ: ಗದ್ದಲದ ನಡುವೆ ಒಮ್ಮತದ ನಿರ್ಧಾರ!



ಶ್ರೀನಿವಾಸಪುರ

ಪಟ್ಟಣದ ಪುರಸಭೆ ಕಚೇರಿಯಲ್ಲಿ ಬಾಬು ಜಗಜೀವನ್‌ರಾಮ್ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಣೆಯ ಕುರಿತು ಹಮ್ಮಿಕೊಳ್ಳಲಾಗಿದ್ದ ಪೂರ್ವಭಾವಿ ಸಭೆಯು ಆರಂಭದಲ್ಲಿ ತೀವ್ರ ಗದ್ದಲಕ್ಕೆ ಸಾಕ್ಷಿಯಾಯಿತು. ನಂತರ ಶಾಸಕರು ಹಾಗೂ ಅಧಿಕಾರಿಗಳ ಮಧ್ಯಪ್ರವೇಶದಿಂದ ಸಭೆ ಸುಸೂತ್ರವಾಗಿ ನಡೆಯಿತು.

ಸಭೆಯಲ್ಲಿ ಮಾತನಾಡಿದ ಶಾಸಕ ಜಿ.ಕೆ. ವೆಂಕಟಶಿವಾರೆಡ್ಡಿ ಅವರು, "ಬಾಬು ಜಗಜೀವನ್‌ರಾಮ್ ಹಾಗೂ ಬಿ.ಆರ್. ಅಂಬೇಡ್ಕರ್ ಅವರು ಕೇವಲ ಒಂದು ಸಮುದಾಯಕ್ಕೆ ಸೀಮಿತವಾದವರಲ್ಲ. ಅವರು ಇಡೀ ಸಮಾಜದ ಒಳಿತಿಗಾಗಿ ಹೋರಾಡಿದ ಮಹಾನ್ ಚೇತನಗಳು. ಅವರನ್ನು ಗೌರವಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಆದ್ದರಿಂದ ನಾವೆಲ್ಲರೂ ಭೇದ-ಭಾವ ಮರೆತು ಅದ್ದೂರಿಯಾಗಿ ಜಯಂತಿಗಳನ್ನು ಆಚರಿಸೋಣ" ಎಂದು ಕರೆ ನೀಡಿದರು.

ತಹಶೀಲ್ದಾರ್ ಜಿ.ಎನ್. ಸುದೀಂದ್ರ ಮಾತನಾಡಿ, "ಏಪ್ರಿಲ್ 5 ರಂದು ಬಾಬು ಜಗಜೀವನ್‌ರಾಮ್ ಜಯಂತಿ ಹಾಗೂ ಏಪ್ರಿಲ್ 14 ರಂದು ಡಾ. ಬಿ.ಆರ್. ಅಂಬೇಡ್ಕರ್ ಜಯಂತಿಯನ್ನು ಸರ್ಕಾರಿ ಶಿಷ್ಟಾಚಾರದಂತೆ ಅರ್ಥಪೂರ್ಣವಾಗಿ ಆಚರಿಸಲಾಗುವುದು. ಕಾರ್ಯಕ್ರಮದ ಯಶಸ್ಸಿಗೆ ಸಾರ್ವಜನಿಕರು ಹಾಗೂ ಸಂಘ-ಸಂಸ್ಥೆಗಳು ಕೈಜೋಡಿಸಬೇಕು. ಸಣ್ಣಪುಟ್ಟ ಲೋಪದೋಷಗಳಿದ್ದಲ್ಲಿ ಸರಿಪಡಿಸಿಕೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸೋಣ" ಎಂದು ಮನವಿ ಮಾಡಿದರು. ಸಭೆಯಲ್ಲಿ ಇಓ ಕೆ. ಸರ್ವೇಶ್, ಪುರಸಭೆ ಮುಖ್ಯಾಧಿಕಾರಿ ವಿ. ನಾಗರಾಜ್, ಸಮಾಜ ಕಲ್ಯಾಣ ಇಲಾಖೆಯ ಎನ್. ರಾಜೇಶ್ ಹಾಗೂ ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ಮಾದೇಶ್ ಉಪಸ್ಥಿತರಿದ್ದರು. ಸಮುದಾಯದ ಮುಖಂಡರಾದ ಉಪ್ಪರಪಲ್ಲಿ ತಿಮ್ಮಯ್ಯ, ಚಲ್ದಿಗಾನಹಳ್ಳಿ ಈರಪ್ಪ, ಮುನಿವೆಂಕಟಪ್ಪ, ರಾಮಾಂಜಮ್ಮ ಸೇರಿದಂತೆ ಹಲವು ದಲಿತ ಪರ ಸಂಘಟನೆಗಳ ಮುಖಂಡರು ಭಾಗವಹಿಸಿ ಸಲಹೆ ಸೂಚನೆಗಳನ್ನು ನೀಡಿದರು.

# "ಎಸ್‌ಎಂಆರ್‌ಎಸ್‌ಸಿ 2026ರಲ್ಲಿ 'ಪ್ರಾಜೆಕ್ಟ್ ವಿಮಾನ' ಮತ್ತು 'ಪ್ರಾಜೆಕ್ಟ್ ಆಪೆರಿಯನ್' ಅನಾವರಣ

ಬೆಂಗಳೂರು

ಭಾರತದಲ್ಲಿ ಆಯೋಜಿಸಲಾದ ಮೂರನೇ ಜಾಗತಿಕ ಎಸ್‌ಎಸ್‌ಐ ಬಹು-ವಿಶೇಷತಾ ರೋಬೋಟಿಕ್ ಶಸ್ತ್ರಚಿಕಿತ್ಸಾ ಸಮ್ಮೇಳನ (ಎಸ್‌ಎಂಆರ್‌ಎಸ್‌ಸಿ) 2026 ಸಂದರ್ಭದಲ್ಲಿ ಅತ್ಯಾಧುನಿಕ ವೈದ್ಯಕೀಯ ಮತ್ತು ರಕ್ಷಣಾ ತಂತ್ರಜ್ಞಾನಗಳ ಮಹತ್ವದ ಪ್ರದರ್ಶನ ಕಂಡುಬಂದಿದೆ. ಈ ಸಂದರ್ಭದಲ್ಲಿ ಎಸ್‌ಎಸ್ ಇನೋವೇಷನ್ಸ್ ಇಂಟರ್‌ನ್ಯಾಷನಲ್ ಸಂಸ್ಥೆ ಎರಡು ಕ್ರಾಂತಿಕಾರಿ ತಂತ್ರಜ್ಞಾನಗಳನ್ನು 'ಪ್ರಾಜೆಕ್ಟ್ ವಿಮಾನ' ಮತ್ತು 'ಪ್ರಾಜೆಕ್ಟ್ ಆಪೆರಿಯನ್' ಅನಾವರಣಗೊಳಿಸಿದ್ದು, ಭವಿಷ್ಯದ ಶಸ್ತ್ರಚಿಕಿತ್ಸೆ ಮತ್ತು ತುರ್ತು ವೈದ್ಯಕೀಯ ವ್ಯವಸ್ಥೆಗೆ ಹೊಸ ದಿಕ್ಕನ್ನು ನೀಡುವ ಸಾಧ್ಯತೆಯನ್ನು ಮೂಡಿಸಿದೆ.

ಮೂರು ದಿನಗಳ ಈ ಜಾಗತಿಕ ಸಮ್ಮೇಳನದಲ್ಲಿ ವಿಶ್ವದ ವಿವಿಧ ಭಾಗಗಳಿಂದ 1500ಕ್ಕೂ ಹೆಚ್ಚು ವೈದ್ಯರು ಹಾಗೂ 250ಕ್ಕೂ ಹೆಚ್ಚು ತಜ್ಞರು ಭಾಗವಹಿಸಿದರು. ರೋಬೋಟಿಕ್ ಶಸ್ತ್ರಚಿಕಿತ್ಸೆ, ಕೃತಕ ಬುದ್ಧಿಮತ್ತೆ, ದೂರ ಶಸ್ತ್ರಚಿಕಿತ್ಸೆ ಮತ್ತು ಚಲನೆಯಲ್ಲೇ ಕಾರ್ಯನಿರ್ವಹಿಸುವ ಶಸ್ತ್ರಚಿಕಿತ್ಸಾ ವೇದಿಕೆಗಳಂತಹ ಅತ್ಯಾಧುನಿಕ ತಂತ್ರಜ್ಞಾನಗಳ ಕುರಿತು ವಿಶ್ಲೇಷಣಾತ್ಮಕ ಚರ್ಚೆಗಳು ನಡೆಯಿತು. ಇದೇ ವೇಳೆ ಎಸ್‌ಎಸ್‌ಐ ಮಂತ್ರಾ3 ಮತ್ತು ಮಂತ್ರಾಸನ ವ್ಯವಸ್ಥೆಗಳ ಮೂಲಕ 15 ನೇರ ದೂರ ಶಸ್ತ್ರಚಿಕಿತ್ಸೆ ಹಾಗೂ 14 ನೇರ ಶಸ್ತ್ರಚಿಕಿತ್ಸೆಗಳ ಯಶಸ್ವಿ ಪ್ರದರ್ಶನ ಕೂಡ ನಡೆಯಿತು.

ಸಮ್ಮೇಳನವನ್ನು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ರಾಜ್ಯ ಸಚಿವರಾದ ಪ್ರತಾಪರಾವ್ ಜಾಧವ್ ಅವರ ಸಾನ್ನಿಧ್ಯದಲ್ಲಿ ಉದ್ಘಾಟಿಸಲಾಯಿತು. ಈ ಸಂದರ್ಭದಲ್ಲಿ ಡಾ. ನರೇಶ್ ತ್ರೇಹಾನ್, ಡಾ. ಸಂಗೀತಾ ರೆಡ್ಡಿ, ಡಾ. ಫ್ರೆಡ್ರಿಕ್ ಮೋಲ್, ಮಧುಸೂದನ್ ಸಾಯಿ ಮತ್ತು ಡಾ. ಮೈಲಸ್ವಾಮಿ ಅನ್ನಾದುರೈ ಸೇರಿದಂತೆ ದೇಶ-ವಿದೇಶಗಳ ಅನೇಕ ಗಣ್ಯ ತಜ್ಞರು ಉಪಸ್ಥಿತರಿದ್ದರು.

ಸಮ್ಮೇಳನದ ಪ್ರಮುಖ ಆಕರ್ಷಣೆಯಾಗಿ 'ಪ್ರಾಜೆಕ್ಟ್ ವಿಮಾನ' ಅನಾವರಣಗೊಂಡಿದ್ದು, ಇದು ಯುದ್ಧಭೂಮಿ ಹಾಗೂ ತುರ್ತು ಪರಿಸ್ಥಿತಿಗಳಲ್ಲಿ ಶಸ್ತ್ರಚಿಕಿತ್ಸೆ ನಡೆಸಲು ವಿನ್ಯಾಸಗೊಳಿಸಲಾದ ಅತ್ಯಾಧುನಿಕ ವ್ಯವಸ್ಥೆಯಾಗಿದೆ. ಇದರಲ್ಲಿ ಅಳವಡಿಸಲಾದ ಎರಡು ಅತ್ಯಾಧುನಿಕ, ಏಳು ದಿಕ್ಕುಗಳಲ್ಲಿ ಚಲಿಸುವ ಸಣ್ಣ ರೋಬೋಟಿಕ್ ಕೈಗಳ ಮೂಲಕ ದೂರದಲ್ಲಿರುವ ತಜ್ಞ ಶಸ್ತ್ರಚಿಕಿತ್ಸಕರು ಗಂಭೀರವಾಗಿ ಗಾಯಗೊಂಡ ಸೈನಿಕರ ಮೇಲೆ ಶಸ್ತ್ರಚಿಕಿತ್ಸೆ ನಡೆಸಲು ಸಾಧ್ಯವಾಗುತ್ತದೆ.


# ದೇವರಹಳ್ಳಿಯಲ್ಲಿ ಶ್ರದ್ಧಾಭಕ್ತಿಯ ಧಾರ್ಮಿಕ ಉತ್ಸವ

ಬೇತಮಂಗಲ

ಕೆಜಿಎಫ್ ತಾಲ್ಲೂಕಿನ ದೇವರಹಳ್ಳಿ ಗ್ರಾಮದಲ್ಲಿ ಲೋಕಕಲ್ಯಾಣ ಹಾಗೂ ಗ್ರಾಮದ ಅಭಿವೃದ್ಧಿಗಾಗಿ ಹಮ್ಮಿಕೊಳ್ಳಲಾಗಿದ್ದ ಶ್ರೀ ಮುನೇಶ್ವರ ಸ್ವಾಮಿಯ ವಿಶೇಷ ಅಭಿಷೇಕ ಮತ್ತು ಅನ್ನಸಂತರ್ಪಣೆ ಕಾರ್ಯಕ್ರಮವು ಅತ್ಯಂತ ಶ್ರದ್ಧಾಭಕ್ತಿಯಿಂದ ಜರುಗಿತು.

ಕಾರ್ಯಕ್ರಮದ ಅಂಗವಾಗಿ ಕೆಜಿಎಫ್ ಶಾಸಕಿ ರೂಪಕಲಾ ಶಶಿಧರ್ ಅವರು ದೇಗುಲಕ್ಕೆ ಭೇಟಿ ನೀಡಿ ಶ್ರೀ ಮುನೇಶ್ವರ ಸ್ವಾಮಿಯ ದರ್ಶನ ಪಡೆದರು. ಗ್ರಾಮದ ಒಳಿತಿಗಾಗಿ ಹಮ್ಮಿಕೊಂಡಿರುವ ಈ ಧಾರ್ಮಿಕ ಕಾರ್ಯಕ್ರಮಕ್ಕೆ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

# 6ರಂದು ಬಸವೇಶ್ವರರ ಪುತ್ಥಳಿ ಲೋಕಾರ್ಪಣೆ



ವಿಜಯಪುರ

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಕಚೇರಿ ಸಂಕೀರ್ಣದ ಮುಂಭಾಗದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಜಗಜ್ಯೋತಿ ಬಸವೇಶ್ವರರ ಕಂಚಿನ ಪ್ರತಿಮೆಯ ಲೋಕಾರ್ಪಣೆ ಕಾರ್ಯಕ್ರಮಕ್ಕೆ ಸಚಿವ ಕೆ.ಹೆಚ್. ಮುನಿಯಪ್ಪ ಅವರಿಗೆ ಅಧಿಕೃತವಾಗಿ ಆಹ್ವಾನ ನೀಡಲಾಯಿತು.

ಜಗಜ್ಯೋತಿ ಬಸವೇಶ್ವರ ಪ್ರತಿಮೆ ನಿರ್ಮಾಣ ಸಮಿತಿಯ ಗೌರವಾಧ್ಯಕ್ಷರಾದ ವಿ. ಮಂಜುನಾಥ್ ಅವರ ನೇತೃತ್ವದ ನಿಯೋಗವು ಸಚಿವರನ್ನು ಭೇಟಿ ಮಾಡಿ, ಏಪ್ರಿಲ್ 6ರಂದು ನಡೆಯಲಿರುವ ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಬರುವಂತೆ ಮನವಿ ಮಾಡಿತು.

ಸಾಂಸ್ಕೃತಿಕ ಮತ್ತು ಧಾರ್ಮಿಕ ಚರಿತ್ರೆಗೆ ಹೊಸ ಮೆರುಗು ನೀಡಲಿದೆ.

ಈ ಸಂದರ್ಭದಲ್ಲಿ ಪ್ರತಿಮೆ ನಿರ್ಮಾಣ ಸಮಿತಿಯ ಅಧ್ಯಕ್ಷ ಎಂ.ಎಸ್. ರಮೇಶ್, ಉಪಾಧ್ಯಕ್ಷ ಜಗದೀಶ್, ಸದಸ್ಯರಾದ ನಾಗೇಶ್, ಎಸ್.ಆರ್.ಎಸ್. ಬಸವರಾಜ್, ವಿಜಯ್ ಕುಮಾರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದು, ಕಾರ್ಯಕ್ರಮದ ಸಿದ್ಧತೆಗಳ ಕುರಿತು ಚರ್ಚಿಸಿದರು.

# ಅಹಿಂಸೆ ಮತ್ತು ಸಮಾನತೆಯಿಂದ ಮಾತ್ರ ಸಶಕ್ತ ಸಮಾಜ ನಿರ್ಮಾಣ ಸಾಧ್ಯ: ಸಿಇಓ

ಕೋಲಾರ

"ಜಗತ್ತಿಗೆ ಶಾಂತಿ ಮತ್ತು ಅಹಿಂಸೆಯ ಪಾಠ ಬೋಧಿಸಿದ ಭಗವಾನ್ ಮಹಾವೀರರ ತತ್ವಗಳು ಇಂದಿನ ಸಂಘರ್ಷಮಯ ಸಮಾಜಕ್ಕೆ ಅತ್ಯಂತ ಪ್ರಸ್ತುತವಾಗಿವೆ. ನಾವು ಅಹಿಂಸೆಯ ಹಾದಿಯಲ್ಲಿ ಸಾಗುವುದರಿಂದ ಮಾತ್ರ ಸದೃಢ ಸಮಾಜ ಕಟ್ಟಲು ಸಾಧ್ಯ" ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಪ್ರವೀಣ್ ಪಿ. ಬಾಗೇವಾಡಿ ಅಭಿಪ್ರಾಯಪಟ್ಟರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ 'ಭಗವಾನ್ ಮಹಾವೀರ ಜಯಂತಿ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



**ಮಹಾವೀರರ ಬದುಕೇ ಒಂದು ಮಹಾನ್ ಆದರ್ಶ:** ರಾಜಮನೆತನದಲ್ಲಿ ಜನಿಸಿದರೂ ಜನಸಾಮಾನ್ಯರ ಕಷ್ಟಕ್ಕೆ ಮಿಡಿದು, ಐಹಿಕ ಸುಖತ್ಯಜಿಸಿ ಜ್ಞಾನೋದಯ ಪಡೆದ ವರ್ಧಮಾನ ಮಹಾವೀರರ ಜೀವನ ನಮಗೆಲ್ಲರಿಗೂ ಪ್ರೇರಣೆ. ಜೈನ ಧರ್ಮದ 24ನೇ ತೀರ್ಥಂಕರರಾಗಿ ಅವರು ನೀಡಿದ ಪಂಚಶೀಲ ತತ್ವಗಳು ಮನುಕುಲದ ಏಳಿಗೆಗೆ ಪೂರಕವಾಗಿವೆ. "ತನ್ನೊಳಗಿನ ದೌರ್ಬಲ್ಯಗಳನ್ನು ಗೆಲ್ಲುವವನೇ ನಿಜವಾದ ವಿಜೇತ (ಜಿನ)" ಎಂಬ ಅವರ ಮಾತು ಇಂದಿಗೂ ಸತ್ಯ ಎಂದು ಬಣ್ಣಿಸಿದರು.

**ಹಿಂಸೆಯ ಮನಸ್ಥಿತಿ ದೂರವಾಗಲಿ:** ಇಂದಿನ ಕಾಲಘಟ್ಟದಲ್ಲಿ ನಾವು ಚಲನಚಿತ್ರಗಳಲ್ಲೂ ಹಿಂಸೆಯನ್ನೇ ಇಷ್ಟಪಡುವ ಮನಸ್ಥಿತಿ ಬೆಳೆಸಿಕೊಳ್ಳುತ್ತಿದ್ದೇವೆ. ಆದರೆ ಶಾಂತಿ ನೆಲೆಸಬೇಕಾದರೆ ಅಹಿಂಸೆ ಅನಿವಾರ್ಯ. ಮಹಾವೀರ, ಬುದ್ಧ, ಬಸವಣ್ಣ, ಗಾಂಧೀಜಿ ಹಾಗೂ ಅಂಬೇಡ್ಕರ್ ಅವರಂತಹ ಮಹಾನ್ ಪುರುಷರು ಭಾರತದ ಇತಿಹಾಸವನ್ನು ಉದಾತ್ತ ತತ್ವಗಳ ಮೂಲಕವೇ ರೂಪಿಸಿದ್ದಾರೆ ಎಂದು ನೆನಪಿಸಿದರು.

**ವಿವಿಧತೆಯಲ್ಲಿ ಏಕತೆಯೇ ಭಾರತದ ಸಾರ:** ಬೌದ್ಧ, ಜೈನ, ಹಿಂದೂ, ಸಿಖ್ ಸೇರಿದಂತೆ ಎಲ್ಲಾ ಧರ್ಮಗಳ ಮೂಲ ಸಾರ ಮನುಕುಲದ ಒಳಿತೇ ಆಗಿದೆ. ಈ ಎಲ್ಲಾ ಧರ್ಮಗಳ ಉತ್ತಮ ಅಂಶಗಳನ್ನು ಅಳವಡಿಸಿಕೊಂಡು ಅನ್ಯೋನ್ಯವಾಗಿ ಬಾಳುವುದೇ ನಾವು ಮಹಾನ್ ಪುರುಷರಿಗೆ ನೀಡುವ ನಿಜವಾದ ಗೌರವ ಎಂದು ಅವರು ಕರೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ರವಿಚಂದ್ರ, ಸಹಾಯಕ ಯೋಜನಾಧಿಕಾರಿ ವೆಂಕಟಾಚಲಪತಿ, ಮುಖ್ಯ ಲೆಕ್ಕಾಧಿಕಾರಿ ರಘುನಾಥ ರೆಡ್ಡಿ, ಯೋಜನಾ ನಿರ್ದೇಶಕ ಮಂಜುನಾಥ್ ಸ್ವಾಮಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಯುದ್ಧ ನಿಲ್ಲಿಸುವಂತೆ ಆಗ್ರಹಿಸಿ ವಾಟಾಳ್ ನಾಗರಾಜ್ ಪ್ರತಿಭಟನೆ

ರಾಮನಗರ

ಯುದ್ಧೋನ್ಮಾದಲ್ಲಿರುವ ಅಮೆರಿಕಾ, ಇಸ್ರೇಲ್ ಮತ್ತು ಇರಾನ್ ರಾಷ್ಟ್ರಗಳು ಕೂಡಲೇ ಯುದ್ಧವನ್ನು ನಿಲ್ಲಿಸಿ ಶಾಂತಿಯಿಂದ ಮಾತುಕತೆಗಳ ಮೂಲಕ ಸಮಸ್ಯೆಯನ್ನು ಬಗೆಹರಿಸಿಕೊಳ್ಳಬೇಕು ಎಂದು ಕನ್ನಡ ಚಳುವಳಿ ಹೋರಾಟಗಾರ ವಾಟಾಳ್ ನಾಗರಾಜ್ ತಿಳಿಸಿದರು.

ನಗರದ ಐಜೂರು ವೃತ್ತದಲ್ಲಿ ಕರುನಾಡ ಸೇನೆ ಹಾಗೂ ಕನ್ನಡ ವಾಟಾಳ್ ಪಕ್ಷ ಸಂಯುಕ್ತವಾಗಿ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಧ್ಯಪ್ರಾಚ್ಯದಲ್ಲಿ ಕಳೆದ 31 ದಿನಗಳಿಂದ ನಡೆಯುತ್ತಿರುವ ಯುದ್ಧದಿಂದಾಗಿ ಇಡೀ ವಿಶ್ವಕ್ಕೆ ಅಪಾಯವಿದೆ. ಆದ್ದರಿಂದ ಕೂಡಲೇ ಯುದ್ಧವನ್ನು ನಿಲ್ಲಿಸಬೇಕೆಂದು ಒತ್ತಾಯಿಸಿ ಖಾಲಿ ಸಿಲಿಂಡರ್ ಮೇಲೆ ಕುಳಿತು, ಈಡುಗಾಯಿ ಒಡೆದು ಪ್ರತಿಭಟಿಸಿದರು.

ಹಿಂದೆ ಅಮೆರಿಕಾ ವಿಯೆಟ್ನಾಂ, ನಾಗಸಾಕಿ, ಹಿರೋಷಿಮಾಗಳಿಗೆ ಪರಮಾಣು ಬಾಂಬ್ ಹಾಕಿದ್ದು ಇತಿಹಾಸ. ಇಂದಿಗೂ ಅಲ್ಲಿನ ಜನರು ಸಂಕಷ್ಟದಲ್ಲಿದ್ದಾರೆ. ಆದ್ದರಿಂದ ದೇಶದ ಪ್ರಧಾನಮಂತ್ರಿ ನರೇಂದ್ರ ಮೋದಿ, ವಿರೋಧಪಕ್ಷದ ನಾಯಕ ರಾಹುಲ್‌ಗಾಂಧಿ ಹಾಗೂ ಮುಖಂಡರೆಲ್ಲರೂ ಸೇರಿ ಯುದ್ಧೋನ್ಮಾದಲ್ಲಿರುವ ಅಮೆರಿಕಾ, ಇಸ್ರೇಲ್ ಮತ್ತು ಇರಾನ್ ರಾಷ್ಟ್ರಗಳು ಕೂಡಲೇ ಯುದ್ಧ ನಿಲ್ಲಿಸಿ ಶಾಂತಿಯಿಂದ ಮಾತುಕತೆಗಳ ಮೂಲಕ ಸಮಸ್ಯೆಯನ್ನು ಬಗೆಹರಿಸಿಕೊಳ್ಳುವಂತೆ ಮನವಿ ಮಾಡಬೇಕಾಗಿದೆ. ಇಡೀ ವಿಶ್ವದಲ್ಲಿ ಭಾರತ ದೇಶಕ್ಕೆ ಮಾತ್ರ ಇಂತಹ ಶಕ್ತಿ ಇದೆ ಎಂದರು.

ಅನಿಲ ಮತ್ತು ಇಂಧನ ಕೊರತೆಯಿಂದ ಈಗಾಗಲೇ ರಾಜ್ಯದಲ್ಲಿ ಅತ್ಯಂತ ಗಂಭೀರ ಪರಿಸ್ಥಿತಿ ಉಂಟಾಗಿದ್ದು, ಜನಜೀವನ ಅಲ್ಲೋಲ ಕಲ್ಲೋಲವಾಗುತ್ತಿದೆ. ಬೆಂಗಳೂರು ನರಕವಾಗುತ್ತಿದೆ. ಇಲ್ಲಿ ಕುಡಿಯಲು ನೀರಿಲ್ಲ. ಆಟೋರಿಕ್ಷಾಗಳು ಓಡುತ್ತಿಲ್ಲ. ವಾಹನಗಳು ನಿಂತಿವೆ. ಹೋಟೆಲ್‌ಗಳು ಮುಚ್ಚಿವೆ. ಇದೇ ಪರಿಸ್ಥಿತಿ ಮುಂದುವರೆದರೆ ರಾಜ್ಯ ಭಾರೀ ಸಂಕಷ್ಟಕ್ಕೆ ಈಡಾಗಲಿದೆ. ರಾಜ್ಯದ ವಿಧಾನಸಭಾ ಸದಸ್ಯರು ಕೇಂದ್ರದ ಪ್ರಧಾನಮಂತ್ರಿ ನರೇಂದ್ರಮೋದಿ ಅವರೊಂದಿಗೆ ಚರ್ಚಿಸಿ ರಾಜ್ಯಕ್ಕೆ ಬೇಕಾದ ಎಲ್ಲಾ ರೀತಿಯ ನೆರವನ್ನು ಕೋರಬೇಕಾಗಿರುವುದು ಅನಿವಾರ್ಯವಾಗಿದೆ. ಪ್ರಪಂಚದಲ್ಲಿ ಒಕ್ಕೊರಲಿನ ಮಾತು ಯುದ್ಧ ನಿಲ್ಲಬೇಕೆಂಬುದು ಆಗಿದೆ. ಈ ಯುದ್ಧವು ಅಮೆರಿಕಾ, ಇಸ್ರೇಲ್ ಮತ್ತು ಇರಾನ್ ಈ ಮೂರು ದೇಶಗಳಿಗೆ ಸಂಬಂಧಿಸಿಲ್ಲ. ಈ ಯುದ್ಧದಿಂದಾಗಿ ಇಡೀ ಪ್ರಪಂಚದ ಉದ್ದಕ್ಕೂ ಕಣ್ಣೀರು ಹಾಕುವ ಪರಿಸ್ಥಿತಿ ಉಂಟಾಗಿದೆ. ಸಣ್ಣಪುಟ್ಟ ರಾಜ್ಯ, ದೇಶಗಳು ಇದರಿಂದ ಹೊರತಾಗಿಲ್ಲ. ಮೊದಲಿಗೆ ಯುದ್ಧವನ್ನು ನಿಲ್ಲಿಸಬೇಕಾಗಿದೆ. ಆದರೆ ಅಮೆರಿಕಾ 50 ಸಾವಿರ ಸೈನಿಕರನ್ನು ಇರಾನ್‌ಗೆ ನುಗ್ಗಿಸಿ ಸಂಪೂರ್ಣ ಇರಾನ್ ದೇಶವನ್ನು ನಾಶ ಮಾಡಲು ಹೊರಟಿದೆ. ಮುಂದಿನ 18 ದಿನಗಳೊಳಗೆ ಯುದ್ಧ ನಿಲ್ಲಿಸದಿದ್ದರೆ, ಇಡೀ ಅಖಂಡ ಕರ್ನಾಟಕವನ್ನು ಬಂದ್ ಮಾಡಿ ಯುದ್ಧ ನಿಲ್ಲಿಸಬೇಕೆಂದು ಒತ್ತಾಯಿಸುತ್ತೇವೆ. ಯುದ್ಧ ನಿಲ್ಲುವವರೆಗೂ ರಾಮನಗರ, ಮಂಡ್ಯ ಮತ್ತು ಮೈಸೂರಿನಿಂದಲೇ ಚಾಲನೆ ನೀಡಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆಯಲ್ಲಿ ಕರುನಾಡ ಸೇನೆ ರಾಜ್ಯ ಉಪಾಧ್ಯಕ್ಷ ಎಂ.ಜಗದೀಶ್ ಐಜೂರು, ರಾಜ್ಯ ಉಸ್ತುವಾರಿ ಗಂಗಾಧರ್ ವಿ.ಎನ್. ಜಿಲ್ಲಾಧ್ಯಕ್ಷ ಜಯಕುಮಾರ್, ದಲಿತ ಘಟಕದ ಜಿಲ್ಲಾಧ್ಯಕ್ಷ ಜಯರಾಮು, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಕುಮಾರ್, ತಾಲ್ಲೂಕು ಉಪಾಧ್ಯಕ್ಷ ಕರುನಾಡ ಜಯಕುಮಾರ್, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಪುಷ್ಪಲತಾ, ವಾಟಾಳ್ ನಾಗರಾಜ್ ಅವರ ಆಪ್ತ ಕಾರ್ಯದರ್ಶಿ ಪಾರ್ಥಸಾರಥಿ ಇದ್ದರು.



## ಅಡುಗೆ ಅನಿಲ ಅಭಾವ; ಪಡಿತರ ಚೀಟಿದಾರರಿಗೆ ಸೀಮೆಎಣ್ಣೆ ವಿತರಣೆಗೆ ಒತ್ತಾಯ



ವಿಜಯಪುರ

ಅಮೆರಿಕಾ, ಇಸ್ರೇಲ್ ಮತ್ತು ಇರಾನ್ ನಡುವೆ ನಡೆಯುತ್ತಿರುವ ಯುದ್ಧದ ಸನ್ನಿವೇಶದಿಂದಾಗಿ ದೇಶಾದ್ಯಂತ ಅಡುಗೆ ಅನಿಲ ಸಿಲಿಂಡರ್‌ಗಳ ತೀವ್ರ ಅಭಾವ ಸೃಷ್ಟಿಯಾಗಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕೂಡಲೇ ಮಧ್ಯಪ್ರವೇಶಿಸಿ ಪಡಿತರ ಚೀಟಿದಾರರಿಗೆ ಸೀಮೆಎಣ್ಣೆ ವಿತರಿಸಬೇಕು ಎಂದು ಸಂವಿಧಾನ ರಕ್ಷಣೆ ನೀಲಿ ಸೇನೆಯ ರಾಜ್ಯ ಉಪಾಧ್ಯಕ್ಷ ಬಂಗಾರಪ್ಪ ಒತ್ತಾಯಿಸಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯುದ್ಧದ ಪರಿಣಾಮವಾಗಿ ಉಂಟಾಗಿರುವ ಅನಿಲದ ಬಿಕ್ಕಟ್ಟು ಕೇವಲ ಹೋಟೆಲ್ ಮತ್ತು ಕಾರ್ಖಾನೆಗಳಿಗೆ ಮಾತ್ರವಲ್ಲದೆ, ಈಗ ಸಾಮಾನ್ಯ ಜನರ ಅಡುಗೆ ಮನೆಗಳಿಗೂ ತಟ್ಟಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಮೂಲೆ ಸೇರಿದ ಸಿಲಿಂಡರ್, ಹೊರಬಂದ ಸ್ಟೌವ್‌ಗಳು!

"ಸಿಲಿಂಡರ್‌ಗಳ ಲಭ್ಯತೆ ಇಲ್ಲದೆ ಜನರು ಪರದಾಡುತ್ತಿದ್ದಾರೆ. ಒಂದು ಕಾಲದಲ್ಲಿ ಸಿಲಿಂಡರ್ ಬಂದ ಮೇಲೆ ಮೂಲೆ ಸೇರಿದ್ದ ಸೀಮೆಎಣ್ಣೆ ಸ್ಟೌವ್‌ಗಳನ್ನು ಈಗ ಅನಿವಾರ್ಯವಾಗಿ ಹೊರತೆಗೆಯುವ ಸ್ಥಿತಿ ನಿರ್ಮಾಣವಾಗಿದೆ. ಆದರೆ, ಉರಿಸಲು ಸೀಮೆಎಣ್ಣೆಯೂ ಇಲ್ಲದೆ ಬಡವರು ಸಂಕಷ್ಟಕ್ಕೆ ಸಿಲುಕಿದ್ದಾರೆ," ಎಂದು ಅವರು ವಿವರಿಸಿದರು.

ಸೌದೆಯೂ ದುಬಾರಿ: ಬಡವರ ಗೋಳು

ಹಳ್ಳಿಗಳಲ್ಲಿಯೂ ಕಾಡುಗಳು ನಾಶವಾಗಿ ಕಾಂಕ್ರೀಟ್ ಕಾಡುಗಳಾಗಿ ಮಾರ್ಪಟ್ಟಿರುವುದರಿಂದ ಉರುವಲು ಸಿಗುತ್ತಿಲ್ಲ. ಸದ್ಯ ಒಂದು ಟನ್ ಸೌದೆಯ ಬೆಲೆ 6 ಸಾವಿರ ರೂಪಾಯಿ ದಾಟಿದೆ. ಇಷ್ಟು ದುಬಾರಿ ಹಣ ನೀಡಿ ಸೌದೆ ಖರೀದಿಸುವ ಶಕ್ತಿ ಬಡವರಿಗಿಲ್ಲ. ಹೀಗಾಗಿ ಪರ್ಯಾಯ ವ್ಯವಸ್ಥೆಯಾಗಿ ಸರ್ಕಾರ ಕೂಡಲೇ ಸೀಮೆಎಣ್ಣೆ ವಿತರಣೆಗೆ ಕ್ರಮ ಕೈಗೊಳ್ಳಬೇಕು ಎಂದು ಅವರು ಮನವಿ ಮಾಡಿದರು.

# ಪ್ರದೀಪ್ ಈಶ್ವರ್ ವಿರುದ್ಧ ಕ್ರಮಕ್ಕೆ ಸಿ.ಕೆ.ರಾಮಮೂರ್ತಿ ಆಗ್ರಹ

ಬೆಂಗಳೂರು

ಶಾಸಕ ಪ್ರದೀಪ್ ಈಶ್ವರ್ ಅವರು ಅವಹೇಳನಕಾರಿ ಮಾತನಾಡುತ್ತಿದ್ದು, ಅವರ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಇಂದು ಚುನಾವಣಾ ಅಧಿಕಾರಿಗಳಿಗೆ ದೂರು ನೀಡಿದ್ದೇವೆ ಎಂದು ಬಿಜೆಪಿ ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಮತ್ತು ಶಾಸಕ ಸಿ.ಕೆ. ರಾಮಮೂರ್ತಿ ತಿಳಿಸಿದ್ದಾರೆ.

ಸಿ.ಕೆ. ರಾಮಮೂರ್ತಿ, ಪಕ್ಷದ ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್, ಕಾನೂನು ಪ್ರಕೋಷ್ಠದ ರಾಜ್ಯ ಸಂಚಾಲಕ ವಸಂತ್ ಕುಮಾರ್ ಅವರು ಇಂದು ಮಹಾರಾಣಿ ಕಾಲೇಜು ಸರ್ಕಲ್ ಬಳಿ ಇರುವ ರಾಜ್ಯ ಮುಖ್ಯ ಚುನಾವಣಾ ಅಧಿಕಾರಿಗಳ ಕಚೇರಿಗೆ ಭೇಟಿ ನೀಡಿ ದೂರು ಸಲ್ಲಿಸಿದರು.

ದಾವಣಗೆರೆ ದಕ್ಷಿಣ, ಬಾಗಲಕೋಟೆ ಉಪ ಚುನಾವಣೆ ನಡೆಯುತ್ತಿದೆ. ಪ್ರದೀಪ್ ಈಶ್ವರ್ ಒಬ್ಬ ಹುಚ್ಚ; ಅವರು ಬಿಜೆಪಿ ನಾಯಕರನ್ನು ಕೋತಿಗಳು, ಅಯೋಗ್ಯರೆಂದು ಸಂಬೋಧಿಸಿದ್ದಾರೆ. ಅವಹೇಳನಕಾರಿ ಮಾತನಾಡಿದ್ದಾರೆ. ಇವೆಲ್ಲ ಸಂವಿಧಾನವಿರೋಧಿ ಮತ್ತು ನೀತಿಸಂಹಿತೆಯನ್ನು ಉಲ್ಲಂಘಿಸಿವೆ ಎಂದು ಸಿ .ಕೆ. ರಾಮಮೂರ್ತಿ ಅವರು ಆಕ್ಷೇಪಿಸಿದರು. ಪ್ರದೀಪ್ ಈಶ್ವರ್ ಪ್ರಚೋದನೆ ಕೊಡುವಂತೆ ಮಾತನಾಡುತ್ತಾರೆ. ಅವರ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಹೋರಾಟ ರೂಪಿಸುವುದಾಗಿ ಪ್ರಶ್ನೆಗೆ ಉತ್ತರವಾಗಿ ತಿಳಿಸಿದರು.

# ಜನಗಣತಿ ಹಬ್ಬ

ಮಾಲೂರು

2027ರ ಜನಗಣತಿ ಕಾರ್ಯಕ್ಕೆ ಸಂಬಂಧಿಸಿದಂತೆ ಮಾಲೂರು ತಾಲೂಕಿನಾದ್ಯಂತ ಪೂರ್ವಸಿದ್ಧತೆಗಳು ಪೂರ್ಣಗೊಂಡಿದ್ದು, ಏಪ್ರಿಲ್ 1 ರಿಂದ ಮೊದಲ ಹಂತದ ಮನೆಪಟ್ಟಿ ಕಾರ್ಯಾಚರಣೆ ಆರಂಭವಾಗಲಿದೆ ಎಂದು ತಹಶೀಲ್ದಾರ್ ಎಂ.ವಿ. ರೂಪ ತಿಳಿಸಿದ್ದಾರೆ.

ನಗರ ಮತ್ತು ಗ್ರಾಮೀಣ ಭಾಗವನ್ನೊಳಗೊಂಡಂತೆ ಒಟ್ಟು 610 ಗಣತಿ ಬ್ಲಾಕ್‌ಗಳನ್ನು ರಚಿಸಲಾಗಿದ್ದು, ಏಪ್ರಿಲ್ 15ರವರೆಗೆ ಈ ಪ್ರಕ್ರಿಯೆ ನಡೆಯಲಿದೆ. ಮೊದಲ ಹಂತದಲ್ಲಿ ಗಣತಿದಾರರು ಮನೆಗಳ ಪಟ್ಟಿಯನ್ನು ಸಿದ್ಧಪಡಿಸಲಿದ್ದಾರೆ.

ಸ್ವಯಂ ಗಣತಿಗೆ ವಿಶೇಷ ಅವಕಾಶ: ಈ ಬಾರಿಯ ಗಣತಿಯಲ್ಲಿ ಸಾರ್ವಜನಿಕರಿಗೆ ವಿಶೇಷ ಸೌಲಭ್ಯ ನೀಡಲಾಗಿದ್ದು, ಏಪ್ರಿಲ್ 15ರವರೆಗೆ ನಾಗರಿಕರು ಆನ್‌ಲೈನ್ ಪೋರ್ಟಲ್ ಮೂಲಕ ತಮ್ಮ ಕುಟುಂಬದ ವಿವರಗಳನ್ನು ಸ್ವಯಂ ದಾಖಲಿಸಬಹುದಾಗಿದೆ. ಮೊಬೈಲ್ ಸಂಖ್ಯೆಗೆ ಬರುವ ಒಟಿಪಿ ಮೂಲಕ ಲಾಗಿನ್ ಆಗಿ, ಡಿಜಿಟಲ್ ಮ್ಯಾಪ್‌ನಲ್ಲಿ ಮನೆಯ ಸ್ಥಳ ಗುರುತಿಸಿ ವಿವರ ಭರ್ತಿ ಮಾಡಬಹುದು. ಒಂದು ವೇಳೆ ಸ್ವಯಂ ಗಣತಿ ಸಾಧ್ಯವಾಗದಿದ್ದರೆ, ಏಪ್ರಿಲ್ 16 ರಿಂದ ಮೇ 15 ರವರೆಗೆ ಗಣತಿದಾರರು ಖುದ್ದಾಗಿ ಮನೆ ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಲಿದ್ದಾರೆ.

ತರಬೇತಿ ಪೂರ್ಣ, ಗಣತಿದಾರರ ನಿಯೋಜನೆ: ಗಣತಿ ಕಾರ್ಯಕ್ಕಾಗಿ ಶಿಕ್ಷಕರು, ಅಂಗನವಾಡಿ ಕಾರ್ಯಕರ್ತೆಯರು, ನಗರಸಭೆ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯರನ್ನು ನಿಯೋಜಿಸಲಾಗಿದೆ. ಈಗಾಗಲೇ ಇವರಿಗೆ ಅಗತ್ಯ ತರಬೇತಿ ನೀಡಲಾಗಿದ್ದು, ನಗರ ಪ್ರದೇಶದಲ್ಲಿ 100 ಹಾಗೂ ಗ್ರಾಮೀಣ ಭಾಗದಲ್ಲಿ 510 ಬ್ಲಾಕ್‌ಗಳಲ್ಲಿ ಕಾರ್ಯನಿರ್ವಹಿಸಲಿದ್ದಾರೆ.

ಶಾಸಕರ ನಿವಾಸದಲ್ಲಿ ಚಾಲನೆ: ಟೇಕಲ್ ಹೋಬಳಿಯ ಕೊಮ್ಮನಹಳ್ಳಿ ಗ್ರಾಮದಲ್ಲಿರುವ ಶಾಸಕರ ನಿವಾಸದಲ್ಲಿ ಗಣತಿ ಮಾಡುವ ಮೂಲಕ ಈ ಮಹತ್ವದ ಕಾರ್ಯಕ್ಕೆ ಅಧಿಕೃತ ಚಾಲನೆ ನೀಡಲಾಗುವುದು ಎಂದು ತಹಶೀಲ್ದಾರ್ ಮಾಹಿತಿ ನೀಡಿದ್ದಾರೆ. ಸಾರ್ವಜನಿಕರು ಗಣತಿದಾರರಿಗೆ ನಿಖರ ಮಾಹಿತಿ ನೀಡುವ ಮೂಲಕ ಈ ರಾಷ್ಟ್ರೀಯ ಕಾರ್ಯದ ಯಶಸ್ವಿಗೆ ಸಹಕರಿಸಬೇಕೆಂದು ಅವರು ಮನವಿ ಮಾಡಿದ್ದಾರೆ. ಸಾರ್ವಜನಿಕರು ಗಣತಿದಾರರಿಗೆ ನಿಖರ ಮಾಹಿತಿ ನೀಡುವ ಮೂಲಕ ಈ ರಾಷ್ಟ್ರೀಯ ಕಾರ್ಯದ ಯಶಸ್ವಿಗೆ ಸಹಕರಿಸಬೇಕೆಂದು ಅವರು ಮನವಿ ಮಾಡಿದ್ದಾರೆ.

## ಕೆಐಎಡಿಬಿ ಭೂಸ್ವಾಧೀನ ವಿರೋಧಿಸಿ 'ಟ್ರ್ಯಾಕ್ಟರ್ ಚಲೋ'



ದೊಡ್ಡಬಳ್ಳಾಪುರ

ತಾಲೂಕಿನ ದೊಡ್ಡಬೆಳವಂಗಲ ಹೋಬಳಿ ವ್ಯಾಪ್ತಿಯ ಸುಮಾರು 2,100 ಎಕರೆ ಫಲವತ್ತಾದ ಕೃಷಿ ಭೂಮಿಯನ್ನು ಕೆಐಎಡಿಬಿ ಸ್ವಾಧೀನಪಡಿಸಿಕೊಳ್ಳಲು ಮುಂದಾಗಿರುವುದನ್ನು ವಿರೋಧಿಸಿ ಸಾವಿರಾರು ರೈತರು ಚಿಕ್ಕಬೆಳವಂಗಲದಿಂದ ನಗರದ ತಾಲೂಕು ಕಚೇರಿಯವರೆಗೆ ಬೃಹತ್ 'ಟ್ರ್ಯಾಕ್ಟರ್ ಜಾಥಾ' ನಡೆಸಿದರು.

ದೊಡ್ಡಬೆಳವಂಗಲ ಕೃಷಿ ಭೂಸ್ವಾಧೀನ ವಿರೋಧಿ ಹೋರಾಟ ಸಮಿತಿಯ ನೇತೃತ್ವದಲ್ಲಿ ನಡೆದ ಈ ಪ್ರತಿಭಟನೆಯಲ್ಲಿ ನೂರಾರು ಟ್ರ್ಯಾಕ್ಟರ್‌ಗಳೊಂದಿಗೆ ಆಗಮಿಸಿದ ರೈತರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಆಕ್ರೋಶ ವ್ಯಕ್ತಪಡಿಸಿದರು.

ನಮ್ಮ ಭೂಮಿ – ನಮ್ಮ ಹಕ್ಕು: ದೊಡ್ಡಬೆಳವಂಗಲ, ಚಿಕ್ಕಬೆಳವಂಗಲ, ರಾಂಪುರ, ನಾರನಹಳ್ಳಿ ಮತ್ತು ಸೊಣ್ಣೆನಹಳ್ಳಿ ಗ್ರಾಮಗಳ ವ್ಯಾಪ್ತಿಯ ಜಮೀನುಗಳನ್ನು ಕೈಗಾರಿಕಾ ಉದ್ದೇಶಕ್ಕೆ ಬಳಸಿಕೊಳ್ಳಲು ಸರ್ಕಾರ ಸಿದ್ಧತೆ ನಡೆಸಿದೆ. ಇದನ್ನು ಖಂಡಿಸಿದ ಪ್ರತಿಭಟನಾಕಾರರು, "ನಾವು ಈ ಭೂಮಿಯಲ್ಲಿ ಅಡಿಕೆ, ತೆಂಗು, ಸೀಬೆ, ದ್ರಾಕ್ಷಿ ಮತ್ತು ರಾಗಿಯಂತಹ ಬೆಳೆಗಳನ್ನು ಬೆಳೆಯುತ್ತಿದ್ದೇವೆ. ಇದು ನೂರಾರು ಕುಟುಂಬಗಳ ಜೀವನೋಪಾಯವಾಗಿದೆ. ಇಂತಹ ಫಲವತ್ತಾದ ಭೂಮಿಯನ್ನು ಯಾವುದೇ ಕಾರಣಕ್ಕೂ ಬಿಟ್ಟುಕೊಡುವುದಿಲ್ಲ" ಎಂದು ಪಟ್ಟು ಹಿಡಿದರು.

ಸರ್ಕಾರಗಳ ವಿರುದ್ಧ ಆಕ್ರೋಶ: "ರೈತ ದೇಶದ ಬೆನ್ನೆಲುಬು ಎಂದು ಹೇಳುವ ಸರ್ಕಾರಗಳು, ಬಲವಂತವಾಗಿ ಭೂಮಿಯನ್ನು ಕಸಿದುಕೊಂಡು ಅದೇ ಬೆನ್ನೆಲುಬನ್ನು ಮುರಿಯುವ ಕೆಲಸ ಮಾಡುತ್ತಿವೆ. ನಮ್ಮ ಪರಿಸರ ಮತ್ತು ಕೃಷಿ ಭೂಮಿಯನ್ನು ಉಳಿಸಿಕೊಳ್ಳುವುದು ನಮ್ಮ ಹಕ್ಕು," ಎಂದು ಹೋರಾಟಗಾರರು ಎಚ್ಚರಿಸಿದರು.

ಜಾಥಾದ ಉದ್ದಕ್ಕೂ ರೈತರು ಸಾಲಾಗಿ ಟ್ರ್ಯಾಕ್ಟರ್‌ಗಳನ್ನು ಚಲಾಯಿಸುವ ಮೂಲಕ ತಾಲೂಕು ಆಡಳಿತದ ಗಮನ ಸೆಳೆದರು. ಸದ್ಯ ಈ ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಬಿಡದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುವುದಾಗಿ ಸಮಿತಿ ತಿಳಿಸಿದೆ.

# ಪ್ರತಿ ಹೋಬಳಿಯಲ್ಲೂ 'ಗ್ಯಾರಂಟಿ ಫಲಾನುಭವಿಗಳ ಸಮಾವೇಶ'ಕ್ಕೆ ಸೂಚನೆ

ಕೋಲಾರ

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಿಂದ ವಂಚಿತರಾದ ಅರ್ಹ ಫಲಾನುಭವಿಗಳನ್ನು ಗುರುತಿಸಿ, ಸ್ಥಳದಲ್ಲಿಯೇ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಪ್ರತಿಯೊಂದು ಹೋಬಳಿ ಕೇಂದ್ರದಲ್ಲಿ ವಿಶೇಷ ಸಮಾವೇಶ ನಡೆಸಲಾಗುವುದು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ವೇಮಗಲ್ ವಿ.ಎಂ. ಮುನಿಯಪ್ಪ ತಿಳಿಸಿದರು.

ನಗರದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಗ್ಯಾರಂಟಿ ಯೋಜನೆಗಳ ತಾಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹೋಬಳಿ ಮಟ್ಟದಲ್ಲಿ ಪರಿಹಾರ: ಯೋಜನೆಗಳ ಲಾಭ ಪಡೆಯಲು ತಾಂತ್ರಿಕ ತೊಂದರೆ ಅಥವಾ ದಾಖಲೆಗಳ ಸಮಸ್ಯೆ ಎದುರಿಸುತ್ತಿರುವವರಿಗಾಗಿ ಐದು ಇಲಾಖೆಗಳ ಸಮನ್ವಯದೊಂದಿಗೆ ಪ್ರತಿ ಹೋಬಳಿಯಲ್ಲೂ ಸಮಾವೇಶ ಆಯೋಜಿಸಲಾಗುವುದು. "ಗ್ಯಾರಂಟಿ ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಬೇಕು. ಇದಕ್ಕಾಗಿ ಗ್ರಾಮ ಪಂಚಾಯಿತಿ ಪಿಡಿಒಗಳು, ಆಶಾ ಕಾರ್ಯಕರ್ತೆಯರು ಮತ್ತು ಜಲಗಾರರ ಮೂಲಕ ಪ್ರತಿ ಗ್ರಾಮದಲ್ಲಿ ಕರಪತ್ರ ಹಂಚಿ ವ್ಯಾಪಕ ಪ್ರಚಾರ ಮಾಡಬೇಕು" ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.





ಪಡಿತರ ಚೀಟಿ ರದ್ದತಿ ಬಗ್ಗೆ ಆತಂಕ: ಕೆಲವು ಭಾಗಗಳಲ್ಲಿ ಪಡಿತರ ಚೀಟಿಗಳು ರದ್ದಾಗುತ್ತಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, "ಶ್ರೀಮಂತರ ಹೆಸರಿನಲ್ಲಿರುವ ಅನರ್ಹ ಕಾರ್ಡ್‌ಗಳನ್ನು ರದ್ದು ಮಾಡಿ. ಆದರೆ, ಬಡವರು ಮತ್ತು ಅರ್ಹ ಫಲಾನುಭವಿಗಳಿಗೆ ಇದರಿಂದ ಅನ್ಯಾಯವಾಗಬಾರದು. ಒಂದು ವೇಳೆ ಅರ್ಹತೆ ಇದ್ದು ತಾಂತ್ರಿಕ ಕಾರಣದಿಂದ ಕಾರ್ಡ್ ರದ್ದಾಗಿದ್ದರೆ, ಕೂಡಲೇ ಪರಿಶೀಲಿಸಿ ಅದನ್ನು ಉಳಿಸಿಕೊಳ್ಳುವ ಕೆಲಸವಾಗಬೇಕು," ಎಂದರು.

ಮುಂದಿನ ವಾರ ಮಹತ್ವದ ಸಭೆ: ಆಹಾರ ಇಲಾಖೆಯ ವತಿಯಿಂದ ತಾಲೂಕಿನ ಎಲ್ಲಾ ಪಡಿತರ ವಿತರಣಾ ಸೊಸೈಟಿಗಳ ಸಭೆಯನ್ನು ಮುಂದಿನ ವಾರದೊಳಗೆ ಕರೆಯಬೇಕು. ಸಾರ್ವಜನಿಕರು ಅಗತ್ಯ ದಾಖಲೆಗಳನ್ನು ಸಲ್ಲಿಸಿದರೆ ತಕ್ಷಣವೇ ಪರಿಶೀಲಿಸಿ ಕ್ರಮ ವಹಿಸಲಾಗುವುದು ಎಂದು ಸಭೆಯಲ್ಲಿದ್ದ ಅಧಿಕಾರಿಗಳು ಭರವಸೆ ನೀಡಿದರು.

ಸಭೆಯಲ್ಲಿ ತಾಲೂಕು ಪಂಚಾಯಿತಿ ಇಒ ಮಂಜುನಾಥ್, ತಾಲೂಕು ಸಮಿತಿ ಸದಸ್ಯರು ಹಾಗೂ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಭೋಗ ತ್ಯಜಿಸಿ ಯೋಗಿಯಾದ ಮಹಾವೀರರ ತತ್ವಗಳು ಇಂದಿಗೂ ಪ್ರಸ್ತುತ: ಮಲ್ಲಪ್ಪ ಯರಗೋಳ

ದೊಡ್ಡಬಳ್ಳಾಪುರ

"ಅಹಿಂಸೆಯೇ ಪರಮೋಧರ್ಮ ಎಂದು ಸಾರಿದ ಭಗವಾನ್ ಮಹಾವೀರರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಸಮಾಜದಲ್ಲಿ ಶಾಂತಿ ಮತ್ತು ನೆಮ್ಮದಿ ನೆಲೆಸಲು ಸಾಧ್ಯ," ಎಂದು ತಹಶೀಲ್ದಾರ್ ಮಲ್ಲಪ್ಪ ಕೆ. ಯರಗೋಳ ಅಭಿಪ್ರಾಯಪಟ್ಟರು.

ನಗರದ ತಾಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಆಯೋಜಿಸಿದ್ದ ಜೈನ ಧರ್ಮದ 24ನೇ ತೀರ್ಥಂಕರ ವರ್ಧಮಾನ ಮಹಾವೀರರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮಹಾವೀರರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಅರಮನೆಯ ಸುಖಭೋಗಗಳನ್ನು ತ್ಯಜಿಸಿ ಸತ್ಯಾನ್ವೇಷಣೆಗಾಗಿ ಹೊರಟ ಮಹಾವೀರರು, ಸತತ 12 ವರ್ಷಗಳ ಕಾಲ ಕಠಿಣ ತಪಸ್ಸು ಮಾಡಿ 42ನೇ ವಯಸ್ಸಿನಲ್ಲಿ 'ಕೈವಲ್ಯ ಜ್ಞಾನೋದಯ' ಪಡೆದರು. ಇಂದ್ರಿಯಗಳನ್ನು ನಿಗ್ರಹಿಸಿ ಸುಖ–ದುಃಖಗಳನ್ನು ಸಮಾನವಾಗಿ ಸ್ವೀಕರಿಸುವುದೇ ನಿಜವಾದ ಜಯ ಎಂದು ಅವರು ಬೋಧಿಸಿದರು ಎಂದು ತಹಶೀಲ್ದಾರ್ ವಿವರಿಸಿದರು.

ಮಹಾವೀರರು ಜಗತ್ತಿಗೆ ನೀಡಿದ ಕೊಡುಗೆಯನ್ನು ಸ್ಮರಿಸಿದ ಅವರು, "ಮಹಾವೀರರು ಬೋಧಿಸಿದ ಸಮ್ಯಕ್ ಜ್ಞಾನ, ಸಮ್ಯಕ್ ದರ್ಶನ ಮತ್ತು ಸಮ್ಯಕ್ ಚಾರಿತ್ರ್ಯ ಎಂಬ 'ತ್ರಿರತ್ನಗಳು' ಹಾಗೂ ಅಹಿಂಸೆ, ಸತ್ಯ, ಅಸ್ತೇಯ, ಅಪರಿಗ್ರಹ ಮತ್ತು ಬ್ರಹ್ಮಚರ್ಯ ಎಂಬ 'ಪಂಚ ಪ್ರತಿಜ್ಞೆಗಳು' ಸಾರ್ವಕಾಲಿಕ ಸತ್ಯಗಳಾಗಿವೆ. ಇವು ಉತ್ತಮ ಸಮಾಜದ ನಿರ್ಮಾಣಕ್ಕೆ ಬುನಾದಿಯಾಗಿವೆ," ಎಂದರು.

ಕಾರ್ಯಕ್ರಮದಲ್ಲಿ ಮಹಾವೀರ ಜೈನ ಸಂಘದ ಅಧ್ಯಕ್ಷ ಪ್ರಕಾಶ್, ಕಾರ್ಯದರ್ಶಿ ರಮೇಶ್, ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ರಾಜಶೇಖರ್, ಗ್ರಾಪಂ ಮಾಜಿ ಸದಸ್ಯೆ ನಾಗರತ್ನಮ್ಮ ಹಾಗೂ ಜೈನ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.



# ಅಲ್ಪ ನೀರು, ಅಧಿಕ ಲಾಭ: ಬಂಗಾರಪೇಟೆ ಅನ್ನದಾತನ 'ಪಾಲಿಹೌಸ್' ಮಂತ್ರ!

● ಎಸ್.ಮಹೇಶ್

ಬೂದಿಕೋಟೆ

ಸಾಂಪ್ರದಾಯಿಕ ಕೃಷಿಯ ಸವಾಲುಗಳ ನಡುವೆ ಬಂಗಾರಪೇಟೆ ತಾಲೂಕಿನ ರೈತರು ಈಗ ಆಧುನಿಕ ಕೃಷಿ ಪದ್ಧತಿಯಾದ 'ಪಾಲಿಹೌಸ್' ತಂತ್ರಜ್ಞಾನದತ್ತ ಹೆಚ್ಚಿನ ಆಸಕ್ತಿ ತೋರುತ್ತಿದ್ದಾರೆ. ಹವಾಮಾನ ವೈಪರಿತ್ಯ, ಮಳೆ ಕೊರತೆ ಮತ್ತು ಕಾಡುಪ್ರಾಣಿಗಳ ಹಾವಳಿಯಿಂದ ಬೇಸತ್ತಿದ್ದ ಅನ್ನದಾತನಿಗೆ ಈ ತಂತ್ರಜ್ಞಾನವು ಈಗ ಆಶಾಕಿರಣವಾಗಿ ಮೂಡಿಬಂದಿದೆ.

ತಾಲೂಕಿನಾದ್ಯಂತ ಟೊಮ್ಯಾಟೊ, ಕ್ಯಾಪ್ಸಿಕಂ, ಸೌತೆಕಾಯಿ, ಬೀನ್ಸ್ ಹಾಗೂ ಚಂಡು ಹೂವಿನಂತಹ ಬೆಳೆಗಳನ್ನು ಪಾಲಿಹೌಸ್ ಒಳಗೆ ಯಶಸ್ವಿಯಾಗಿ ಬೆಳೆಯಲಾಗುತ್ತಿದೆ. ಇದರಿಂದ ಗುಣಮಟ್ಟದ ಉತ್ಪನ್ನಗಳು ದೊರೆಯುತ್ತಿದ್ದು, ಮಾರುಕಟ್ಟೆಯಲ್ಲಿ ಉತ್ತಮ ಬೇಡಿಕೆ ಕಂಡುಬರುತ್ತಿದೆ.

ಪಾಲಿಹೌಸ್ ಕೃಷಿಯ ಲಾಭಗಳೇನು?

ನೀರಿನ ಉಳಿತಾಯ: ಈ ಪದ್ಧತಿಯಲ್ಲಿ ನೀರಿನ ಬಳಕೆ ಅತ್ಯಂತ ಕಡಿಮೆಯಾಗಿದ್ದು, ಲಭ್ಯವಿರುವ ಅಲ್ಪ ನೀರಿನಲ್ಲೇ ಸಮೃದ್ಧ ಬೆಳೆ ತೆಗೆಯಬಹುದಾಗಿದೆ.

ಕೀಟಬಾಧೆ ನಿಯಂತ್ರಣ: ನಿಯಂತ್ರಿತ ವಾತಾವರಣ ಇರುವುದರಿಂದ ಕೀಟನಾಶಕಗಳ ವೆಚ್ಚ ಗಣನೀಯವಾಗಿ ಇಳಿಕೆಯಾಗಿದೆ.



ಹವಾಮಾನ ರಕ್ಷಣೆ: ಅತಿಯಾದ ಬಿಸಿಲು ಅಥವಾ ಅಕಾಲಿಕ ಮಳೆಯಿಂದ ಬೆಳೆಗಳಿಗೆ ಹಾನಿಯಾಗದಂತೆ ಪಾಲಿಹೌಸ್ ರಕ್ಷಣೆ ನೀಡುತ್ತದೆ.

ಉತ್ತಮ ಮಾರುಕಟ್ಟೆ ಬೆಲೆ: ಇಲ್ಲಿ ಬೆಳೆಯುವ ತರಕಾರಿಗಳು ತಾಜಾ ಮತ್ತು ಆಕರ್ಷಕವಾಗಿರುವುದರಿಂದ ಮಧ್ಯವರ್ತಿಗಳು ಹಾಗೂ ಗ್ರಾಹಕರಿಂದ ಉತ್ತಮ ಬೆಲೆ ಸಿಗುತ್ತಿದೆ.

ಸರ್ಕಾರದ ಪ್ರೋತ್ಸಾಹಕ್ಕೆ ರೈತರ ಆಗ್ರಹ: "ಹೊರಗಿನ ಕೃಷಿಗಿಂತ ಪಾಲಿಹೌಸ್‌ನಲ್ಲಿ ಹಾನಿ ಕಡಿಮೆ, ಆದಾಯ ಹೆಚ್ಚು. ಬೆಳಗ್ಗೆ ತಾಜಾ ತರಕಾರಿಗಳನ್ನು ಮಾರುಕಟ್ಟೆಗೆ ಒಯ್ದರೆ ತಕ್ಷಣವೇ ಮಾರಾಟವಾಗುತ್ತವೆ," ಎಂದು ಸ್ಥಳೀಯ ರೈತರು ಹರ್ಷ ವ್ಯಕ್ತಪಡಿಸಿದ್ದಾರೆ.

ಆದರೆ, ಪಾಲಿಹೌಸ್ ನಿರ್ಮಾಣಕ್ಕೆ ಆರಂಭಿಕ ವೆಚ್ಚ ಹೆಚ್ಚಿರುವುದರಿಂದ ಸರ್ಕಾರದಿಂದ ಹೆಚ್ಚಿನ ಸಬ್ಸಿಡಿ ಮತ್ತು ಕೃಷಿ ತಜ್ಞರಿಂದ ತಾಂತ್ರಿಕ ಮಾರ್ಗದರ್ಶನ ಸಿಕ್ಕರೆ ಇನ್ನಷ್ಟು ಸಣ್ಣ ಮತ್ತು ಅತಿಸಣ್ಣ ರೈತರು ಈ ಪದ್ಧತಿಯನ್ನು ಅಳವಡಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂಬುದು ರೈತರ ಅಭಿಪ್ರಾಯವಾಗಿದೆ. ಒಟ್ಟಾರೆಯಾಗಿ, ಆಧುನಿಕ ಕೃಷಿ ವಿಧಾನಗಳು ಬಂಗಾರಪೇಟೆಯ ಗ್ರಾಮೀಣ ರೈತರ ಬದುಕಿನಲ್ಲಿ ಹೊಸ ಬದಲಾವಣೆಯ ಗಾಳಿ ಬೀಸುತ್ತಿವೆ.

# ಯುವಶಕ್ತಿಯನ್ನು ಒಗ್ಗೂಡಿಸಲು ಕ್ರೀಡೆಗಳೇ ಪ್ರಶಸ್ತ ಮಾರ್ಗ: ಸಚಿವ ಮುನಿಯಪ್ಪ

ವಿಜಯಪುರ

"ಕ್ರೀಡೆಗಳು ಯುವಜನತೆಯನ್ನು ಒಗ್ಗೂಡಿಸುವ ಅತ್ಯುತ್ತಮ ಮಾಧ್ಯಮವಾಗಿದ್ದು, ಆರೋಗ್ಯವಂತ ಸಮಾಜ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ," ಎಂದು ಕೇಂದ್ರ ಸಚಿವ ಕೆ.ಹೆಚ್. ಮುನಿಯಪ್ಪ ಅಭಿಪ್ರಾಯಪಟ್ಟರು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಆಯೋಜಿಸಲಾಗಿದ್ದ 'ಕೆ.ಎಚ್. ಎಂ. ಯುವ ಕಾಂಗ್ರೆಸ್ ಪ್ರೀಮಿಯರ್ ಲೀಗ್' ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಯುವಕರು ದೈಹಿಕವಾಗಿ ಮತ್ತು ಮಾನಸಿಕವಾಗಿ ಸದೃಢರಾಗಿರಬೇಕು. ಅವರು ಯಾವುದೇ ದುಶ್ಚಟಗಳಿಗೆ ಬಲಿಯಾಗದಂತೆ ತಡೆಯಲು ಕ್ರೀಡಾ ಚಟುವಟಿಕೆಗಳು ಹೆಚ್ಚು ಸಹಕಾರಿಯಾಗುತ್ತವೆ. ಕೇವಲ ಕ್ರಿಕೆಟ್ ಮಾತ್ರವಲ್ಲದೆ, ಕಬಡ್ಡಿ, ಅಥ್ಲೆಟಿಕ್ಸ್‌ನಂತಹ ನಮ್ಮ ದೇಶೀಯ ಕ್ರೀಡೆಗಳಲ್ಲೂ ಯುವಕರು ಆಸಕ್ತಿ ತೋರಿಸಬೇಕು. ಈ ಮೂಲಕ ದೈಹಿಕ ಆರೋಗ್ಯವನ್ನು ಸುಧಾರಿಸಿಕೊಳ್ಳಬೇಕು ಎಂದು ಸಚಿವರು ಕಿವಿಮಾತು ಹೇಳಿದರು.



"ಯುವಜನತೆ ದಿನನಿತ್ಯ ವ್ಯಾಯಾಮ ಮತ್ತು ಧ್ಯಾನವನ್ನು ರೂಢಿಸಿಕೊಳ್ಳಬೇಕು. ಓದಿನ ಮೂಲಕ ಜ್ಞಾನ ಸಂಪಾದನೆಯನ್ನು ಮಾಡುವಂತೆಯೇ, ಕ್ರೀಡೆಗಳ ಮೂಲಕ ಆರೋಗ್ಯ ಸಂಪಾದನೆಯನ್ನೂ ಮಾಡಿಕೊಳ್ಳಬೇಕು," ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ದಿನ್ನೂರು ವೆಂಕಟೇಶ್, ಪುರಸಭೆ ಸದಸ್ಯ ಎಂ. ಸತೀಶ್ ಕುಮಾರ್, ಮುಖಂಡರಾದ ಕೆ.ಎಂ. ಮಧು, ಆರ್. ಮುನಿರಾಜು, ಯುವ ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಆರ್. ನಾಗೇಶ್ ಹಾಗೂ ಸ್ಥಳೀಯ ಯುವ ಕಾಂಗ್ರೆಸ್ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಚಿಕ್ಕಬಳ್ಳಾಪುರದ ನೆಲದಲ್ಲಿ ಅಜರಾಮರ ಸಿದ್ಧಗಂಗಾ ಶ್ರೀಗಳ ದಾಸೋಹ ಪರಂಪರೆ

ಎಂ. ಕೃಷ್ಣಪ್ಪ

ಚಿಕ್ಕಬಳ್ಳಾಪುರ

"ಕಾಯಕವೇ ಕೈಲಾಸ" ಎಂದು ಸಾರಿದ ಬಸವಣ್ಣನವರ ನಿಜವಾದ ಅನುಯಾಯಿ, ತ್ರಿವಿಧ ದಾಸೋಹಿ ಪರಮಪೂಜ್ಯ ಡಾ. ಶ್ರೀ ಶ್ರೀ ಶಿವಕುಮಾರ ಸ್ವಾಮೀಜಿಯವರು ದೈಹಿಕವಾಗಿ ನಮ್ಮನ್ನಗಲಿದ್ದರೂ, ಅವರು ಹಾಕಿಕೊಟ್ಟ ದಾಸೋಹದ ಹಾದಿ ಚಿಕ್ಕಬಳ್ಳಾಪುರದ ನೆಲದಲ್ಲಿ ಇಂದಿಗೂ ನಂದಾದೀಪದಂತೆ ಬೆಳಗುತ್ತಿದೆ. ಸಿದ್ಧಗಂಗಾ ಮಠದಿಂದ ಕೇವಲ 60 ಕಿಲೋಮೀಟರ್ ದೂರದಲ್ಲಿರುವ ಈ ನಗರಕ್ಕೂ ಮತ್ತು ಶ್ರೀಗಳಿಗೂ ಇರುವ ಅವಿನಾಭಾವ ಸಂಬಂಧಕ್ಕೆ ಇಲ್ಲಿ ನಡೆಯುತ್ತಿರುವ ಅನ್ನ ದಾಸೋಹವೇ ಸಾಕ್ಷಿ.

ಅಚಲ ಭಕ್ತಿ; ಮಠಕ್ಕೆ ನಿರಂತರ ಅಕ್ಕಿ–ಬೇಳೆ ಸೇವೆ: ಚಿಕ್ಕಬಳ್ಳಾಪುರದ ಭಕ್ತರು ಶ್ರೀಗಳ ಮೇಲಿರುವ ಭಕ್ತಿಯನ್ನು ಕೇವಲ ಪೂಜೆಗೆ ಸೀಮಿತಗೊಳಿಸಿಲ್ಲ. ನಗರದ ಹಳೆಯ ವಿದ್ಯಾರ್ಥಿಗಳು ಹಾಗೂ ಭಕ್ತಾಧಿಗಳು ಇಂದಿಗೂ ಲೋಡ್‌ಗಟ್ಟಲೆ ಅಕ್ಕಿ, ತರಕಾರಿ ಮತ್ತು ಬೇಳೆಕಾಳುಗಳನ್ನು ಮಠದ ದಾಸೋಹಕ್ಕೆ ತಪ್ಪದೇ ಕಳುಹಿಸುವ ಸಂಪ್ರದಾಯವನ್ನು ಮುಂದುವರಿಸಿಕೊಂಡು ಬಂದಿದ್ದಾರೆ. ಪ್ರಮುಖ ಹಣ್ಣಿನ ವ್ಯಾಪಾರಿ ಮಲ್ಲಿಕಾರ್ಜುನಯ್ಯ ಹಾಗೂ ಅವರ ಸ್ನೇಹಿತರ ಬಳಗ ಈ ಮಹತ್ಕಾರ್ಯವನ್ನು ಶ್ರದ್ಧೆಯಿಂದ ನಿರ್ವಹಿಸುತ್ತಿರುವುದು ಶ್ಲಾಘನೀಯ.



ಮಾನಸ ವೃದ್ಧಾಶ್ರಮ: ಶ್ರೀಗಳ ಪಾದಸ್ಪರ್ಶದ ಪುಣ್ಯಫಲ: ನಗರದ ಹೊರವಲಯದ ಬಾದಗಾನಹಳ್ಳಿ ಬಳಿಯ ರಂಗಸ್ಥಳದ ಸಮೀಪವಿರುವ 'ಮಾನಸ ವೃದ್ಧಾಶ್ರಮ' ಶ್ರೀಗಳ ಸ್ಮರಣೆಯ ಅತ್ಯಂತ ಪವಿತ್ರ ಕೇಂದ್ರವಾಗಿದೆ. 2012ರಲ್ಲಿ ಡಾ. ಮಧುಕರ್ ನೇತೃತ್ವದಲ್ಲಿ 'ಶ್ರೀ ಮಾನಸ ಮೆಡಿಕಲ್ ಟ್ರಸ್ಟ್' ಸ್ಥಾಪನೆಯಾದಾಗ, ಸ್ವತಃ ಶಿವಕುಮಾರ ಸ್ವಾಮೀಜಿಯವರೇ ಆಗಮಿಸಿ ಶಂಕುಸ್ಥಾಪನೆ ನೆರವೇರಿಸಿದ್ದರು. ಅಂದು ಕೇವಲ 6 ಜನರಿಂದ ಆರಂಭವಾದ ಈ ಆಶ್ರಮದಲ್ಲಿ ಇಂದು 30ಕ್ಕೂ ಹೆಚ್ಚು ವೃದ್ಧರು ನೆಮ್ಮದಿಯ ಬದುಕು ಕಟ್ಟಿಕೊಂಡಿದ್ದಾರೆ.

ಸ್ವಂತ ಮಕ್ಕಳ ಅಸಡ್ಡೆ ಅಥವಾ ಕೌಟುಂಬಿಕ ಕಾರಣಗಳಿಂದ ನೊಂದು ಬಂದಿರುವ ಇಲ್ಲಿನ ನಿರಾಶ್ರಿತರು, ಪ್ರತಿದಿನ ಶ್ರೀಗಳ ಭಾವಚಿತ್ರಕ್ಕೆ ನಮಿಸಿ, ಅವರ ಸ್ಮರಣೆ ಮಾಡಿದ ನಂತರವೇ ಅನ್ನ ಸೇವಿಸುತ್ತಾರೆ. ಇದು ಶ್ರೀಗಳು ಈ ಮಣ್ಣಿನಲ್ಲಿ ಬಿತ್ತಿದ ಸಂಸ್ಕಾರಕ್ಕೆ ಹಿಡಿದ ಕನ್ನಡಿಯಾಗಿದೆ.

ಸೇವೆಯೇ ಉಸಿರು ಟ್ರಸ್ಟ್‌ನ ಮಾನವೀಯ ಕಾರ್ಯ: ಆಶ್ರಮದ ಸೇವೆ ಕೇವಲ ಆವರಣಕ್ಕೆ ಸೀಮಿತವಾಗಿಲ್ಲ. ನಗರದ ಸರ್ಕಾರಿ ಆಸ್ಪತ್ರೆ, ಕಂದವಾರ ಹಾಗೂ ಚಾಮರಾಜಪೇಟೆಯ ನಿರಾಶ್ರಿತರಿಗೂ ಪ್ರತಿನಿತ್ಯ ಈ ಆಶ್ರಮದಿಂದಲೇ ಅನ್ನ ಸಂತರ್ಪಣೆ ನಡೆಯುತ್ತಿದೆ. "ಈ ಎಲ್ಲ ಮಾನವೀಯ ಕಾರ್ಯಗಳಿಗೆ ನಡೆದಾಡುವ ದೇವರ ಕೃಪೆಯೇ ಮೂಲ ಕಾರಣ" ಎಂದು ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷರಾದ ಡಾ. ಮಧುಕರ್ ಭಕ್ತಿಯಿಂದ ಸ್ಮರಿಸುತ್ತಾರೆ.



ಬೆಟ್ಟದ ತಪ್ಪಲಿನಲ್ಲಿ ಪ್ರಶಾಂತವಾಗಿ ನೆಲೆಸಿರುವ ಈ ಆಶ್ರಮವು, ಸಿದ್ಧಗಂಗೆಯ ಮಹಾದಾಸೋಹಿ ಶ್ರೀಗಳು ತೋರಿದ ಕರುಣೆ ಮತ್ತು ಸೇವೆಯ ಹಾದಿಯಲ್ಲಿ ಮೌನವಾಗಿ ಸಾಗುತ್ತಿದೆ.

ಭಾರತ ಸಾರಥಿ
11/04/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಗ್ಯಾರಂಟಿಗೆ ಹಣ ಕ್ರೋಢೀಕರಿಸಲು ಸಾಧ್ಯವಾಗದೇ ಹೈಕೋರ್ಟಿನ ಕುಂಟು ನೆಪ, ಮೀಸಲಾತಿ ನೆಪ

ಬಾಗಲಕೋಟೆ: ಹಣಕಾಸಿನ ಸಚಿವರೂ ಆದ ಮುಖ್ಯಮಂತ್ರಿಗಳು ರಾಜ್ಯದ ಆರ್ಥಿಕ ಪರಿಸ್ಥಿತಿಯ ನೈಜ ಚಿತ್ರಣವನ್ನು ಜನರಿಗೆ ತಿಳಿಸುವ ಪುಣ್ಯದ ಕೆಲಸ ಮಾಡಬೇಕೆಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಆಗ್ರಹಿಸಿದ್ದಾರೆ.

ಮಾಧ್ಯಮ ಪ್ರತಿನಿಧಿಗಳ ಜೊತೆ ಇಂದು ಮಾತನಾಡಿದ ಅವರು, ಕಾಂಗ್ರೆಸ್ ಸರಕಾರ ಆಡಳಿತಕ್ಕೆ ಬಂದು ಮೂರು ವರ್ಷಗಳಾಗಿವೆ. ಅಧಿಕಾರಕ್ಕೆ ಬಂದ ಒಂದೇ ತಿಂಗಳಲ್ಲಿ ಖಾಲಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುತ್ತೇವೆ; ಖಾಲಿ ಹುದ್ದೆ ಭರ್ತಿ ಮಾಡುವುದಾಗಿ ಭರವಸೆ ನೀಡಿದ್ದೀರಿ. ಅದು ಮರೆತು ಹೋಯಿತೇ? ಎಂದು ಕೇಳಿದರು. 2 ಲಕ್ಷ 86 ಸಾವಿರಕ್ಕೂ ಹೆಚ್ಚು ಹುದ್ದೆಗಳು ನೇಮಕಾತಿ ಮಾಡದೇ ನಾಡಿನ ಯುವಜನತೆ ಬೀದಿಗಿಳಿದು ಹೋರಾಟ ಮಾಡುವ ದುಸ್ಥಿತಿಗೆ ತಾವು ತಂದಿದ್ದೀರಿ. ಯುವಜನತೆ ತಮ್ಮ ಬಳಿ ಅಹವಾಲು ಮಂಡಿಸಲು ರಾಜ್ಯ ಹೈಕೋರ್ಟ್ ಮಧ್ಯಸ್ಥಿಕೆ ವಹಿಸಬೇಕಾಯಿತು ಎಂದು ಗಮನ ಸೆಳೆದರು.

ಧಾರವಾಡದಲ್ಲಿ ನ್ಯಾಯಕ್ಕಾಗಿ ಲಕ್ಷಾಂತರ ಯುವಜನತೆ ಒತ್ತಾಯಿಸಿದಾಗ ಲಾಠಿಪ್ರಹಾರ ಮಾಡಿದ್ದೀರಿ. ಯಾಕೆ ಸತ್ಯ ಮರೆಮಾಚುತ್ತಿದ್ದೀರಿ ಎಂದು ಪ್ರಶ್ನಿಸಿದರು. ಗ್ಯಾರಂಟಿಗಳಿಗೆ ಹಣ ಕ್ರೋಢೀಕರಿಸಲು ಸಾಧ್ಯವಾಗದೇ ಹೈಕೋರ್ಟಿನ ಕುಂಟು ನೆಪ, ಮೀಸಲಾತಿ ನೆಪ ಹೇಳಿಕೊಂಡು ನೇಮಕಾತಿಯನ್ನು ಮುಂದೂಡುತ್ತಿರುವುದು ತಾವಲ್ಲವೇ ಎಂದು ಮುಖ್ಯಮಂತ್ರಿಗಳನ್ನು ಪ್ರಶ್ನಿಸಿದರು.

ಇದು ರಾಜ್ಯದ ಆರ್ಥಿಕ ಪರಿಸ್ಥಿತಿಯ ಕೈಗನ್ನಡಿಯಲ್ಲವೇ?

ಮಂಡ್ಯ ಜಿಲ್ಲೆಯಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಕುಟುಂಬಗಳಿಗೆ ಪಿಂಚಣಿ ಕೊಡುವುದನ್ನೂ 10 ತಿಂಗಳಿಂದ ನಿಲ್ಲಿಸಿದ್ದಾರೆ. ಇದು ರಾಜ್ಯದ ಆರ್ಥಿಕ ಪರಿಸ್ಥಿತಿಯ ಕೈಗನ್ನಡಿಯಲ್ಲವೇ ಎಂದು ಪ್ರಶ್ನೆ ಹಾಕಿದರು. ಅತಿಥಿ ಉಪನ್ಯಾಸಕರಿಗೆ 2 ತಿಂಗಳಿಂದ ಸಂಬಳ ನೀಡದೇ ಇರುವುದು ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಎತ್ತಿ ತೋರಿಸುವುದಿಲ್ಲವೇ ಎಂದು ವಿಜಯೇಂದ್ರ ಅವರು ಪ್ರಶ್ನೆ ಮಾಡಿದರು.

ರಾಜ್ಯದ ಇತಿಹಾಸದಲ್ಲಿ ಮೊಟ್ಟ ಮೊದಲ ಬಾರಿಗೆ ಕಾನೂನು– ಸುವ್ಯವಸ್ಥೆ ಕಾಪಾಡುವ ಜವಾಬ್ದಾರಿಯುತ ಪೊಲೀಸ್ ಇಲಾಖೆಗೆ 15– 20 ದಿನ, ಒಂದು ತಿಂಗಳಾದರೂ ಸಂಬಳ ಕೊಡುವುದಕ್ಕೆ ಆಗುತ್ತಿಲ್ಲ. ಇದು ಆರ್ಥಿಕ ಪರಿಸ್ಥಿತಿ ಯಾವ ಮಟ್ಟಿಗೆ ಹೋಗಿದೆ ಎಂಬುದನ್ನು ತೋರಿಸುವುದಿಲ್ಲವೇ ಎಂದು ಕೇಳಿದರು.

ಕೇವಲ ಕೇಂದ್ರ ಸರಕಾರದ ವಿರುದ್ಧ ಆರೋಪ ಮಾಡುವುದರಲ್ಲೇ ಕಾಲಹರಣ ಮಾಡುತ್ತೀರಿ. ಯುಕೆಪಿ ಮುಳುಗಡೆ ಪರಿಹಾರ ವಿಚಾರದಲ್ಲಿ 4 ತಿಂಗಳ ಹಿಂದೆ ವಿಶೇಷ ಕ್ಯಾಬಿನೆಟ್ ಸಭೆ ಮಾಡಿದ್ದೀರಿ. ನೀರಾವರಿ ಜಮೀನಿರುವ ರೈತರಿಗೆ ಎಕರೆಗೆ 40 ಲಕ್ಷ ಪರಿಹಾರ, ಒಣ ಭೂಮಿ ಇರುವವರಿಗೆ 30 ಲಕ್ಷ ಪರಿಹಾರ ಎಂದು ತಿಳಿಸಲಾಗಿತ್ತು. ಬಜೆಟ್‌ನಲ್ಲಿ ಇದಕ್ಕಾಗಿ ಎಷ್ಟು ಸಾವಿರ ಕೋಟಿ ಇಟ್ಟಿದ್ದೀರಿ ಎಂದು ಪ್ರಶ್ನೆ ಮುಂದಿಟ್ಟರು.ಕೇವಲ ಕೇಂದ್ರ ಸರಕಾರದ ವಿರುದ್ಧ ಆರೋಪ ಮಾಡುವುದರಲ್ಲೇ ಕಾಲಹರಣ ಮಾಡುತ್ತೀರಿ. ಯುಕೆಪಿ ಮುಳುಗಡೆ ಪರಿಹಾರ ವಿಚಾರದಲ್ಲಿ 4 ತಿಂಗಳ ಹಿಂದೆ ವಿಶೇಷ ಕ್ಯಾಬಿನೆಟ್ ಸಭೆ ಮಾಡಿದ್ದೀರಿ. ನೀರಾವರಿ ಜಮೀನಿರುವ ರೈತರಿಗೆ ಎಕರೆಗೆ 40 ಲಕ್ಷ ಪರಿಹಾರ, ಒಣ ಭೂಮಿ ಇರುವವರಿಗೆ 30 ಲಕ್ಷ ಪರಿಹಾರ ಎಂದು ತಿಳಿಸಲಾಗಿತ್ತು. ಬಜೆಟ್‌ನಲ್ಲಿ ಇದಕ್ಕಾಗಿ ಎಷ್ಟು ಸಾವಿರ ಕೋಟಿ ಇಟ್ಟಿದ್ದೀರಿ ಎಂದು ಪ್ರಶ್ನೆ ಮುಂದಿಟ್ಟರು.

ತುಂಗಭದ್ರಾ ಅಣೆಕಟ್ಟಿನ ಗೇಟ್ ಕುಸಿಯಿತು. ನಾವು ತೆಲಂಗಾಣ, ಆಂಧ್ರವನ್ನು ಕಾಯುವುದಿಲ್ಲ. ರಾಜ್ಯ ಸರಕಾರವೇ ಹಣ ಹಾಕಿ 21 ಗೇಟ್ ಕೂರಿಸಲಿದೆ ಎಂದು ಡಿ.ಕೆ.ಶಿವಕುಮಾರ್ ಅವರು ಹೇಳಿಕೆ ಕೊಟ್ಟಿದ್ದರು. ಆಂಧ್ರವು ಗೇಟ್ ದುರಸ್ತಿಗೆ ಹಣ ಕೊಟ್ಟಿತು. ಸಂಬಳಕ್ಕಾಗಿ 20 ಕೋಟಿ ಹೆಚ್ಚುವರಿಯಾಗಿ ಕೊಟ್ಟರೆ, ಆ ಹಣದಿಂದ ರಾಜ್ಯ ಸರಕಾರ ಕೊಟ್ಟ 10 ಕೋಟಿ ಹಿಂಪಡೆಯುವ ಕೆಲಸ ಮಾಡಿದೆ. ಇದು ವಾಸ್ತವಿಕ ಸತ್ಯ. ಇದನ್ನು ಅರ್ಥ ಮಾಡಿಕೊಳ್ಳಲು ಆರ್ಥಿಕ ತಜ್ಞರಾಗಬೇಕಿಲ್ಲ ಎಂದು ಮುಖ್ಯಮಂತ್ರಿಗಳ ಗಮನ ಸೆಳೆದರು.

ಕರ್ನಾಟಕದ ಗ್ಯಾರಂಟಿ ದೇಶಕ್ಕೇ ಮಾದರಿ ಎಂದು ಬಡಾಯಿ ಕೊಚ್ಚಿಕೊಂಡರು. ಹಿಮಾಚಲ ಪ್ರದೇಶದಲ್ಲಿ ಏನಾಗಿದೆ? ಹಿಮಾಚಲ ಪ್ರದೇಶದಲ್ಲಿ ಅಲ್ಲಿನ ಮುಖ್ಯಮಂತ್ರಿಗಳು ದೇವಾಲಯಗಳಿಗೆ ಪತ್ರ ಬರೆದಿದ್ದಾರೆ. ಗ್ಯಾರಂಟಿ ಕಾರಣದಿಂದ ಸರಕಾರಿ ನೌಕರರ ವೇತನ ಕೊಡಲು ಆಗುತ್ತಿಲ್ಲ. ಭಕ್ತರ ಆದಾಯದಲ್ಲಿ ಶೇ 50ರಷ್ಟನ್ನು ಸರಕಾರಕ್ಕೆ ಕೊಡಿ ಎಂದು ಪತ್ರದಲ್ಲಿ ಕೋರಿದ್ದರು.

# ಕೈಮಗ್ಗ ತರಬೇತಿ ಪಡೆದವರಿಗೆ ಪ್ರಮಾಣಪತ್ರ ವಿತರಣೆ

ಬಳ್ಳಾರಿ

ಗ್ರಾಮಾಂತರ ಕ್ಷೇತ್ರದ ವ್ಯಾಪ್ತಿಯ ಮೋಕಾ ಗ್ರಾಮದಲ್ಲಿ ಮಹಿಳಾ ದಿನಾಚರಣೆ ಅಂಗವಾಗಿ ಕೈಮಗ್ಗ ತರಬೇತಿ ಪಡೆದ ಮಹಿಳೆಯರಿಗೆ ಪ್ರಮಾಣಪತ್ರ ವಿತರಣೆ ಕಾರ್ಯಕ್ರಮ ನಡೆಯಿತು.

ಗ್ರಾಮದ ಶ್ರೀ ಪಾಂಡುರಂಗ ದೇವಸ್ಥಾನದ ಭವನದಲ್ಲಿ ಶ್ರೀ ಮಾತೃ ಮಹಿಳಾ ಮಂಡಳಿ ಹಾಗೂ ಮಹರ್ಷಿ ರೂರಲ್ ಎಜುಕೇಶನಲ್ ಡೆವಲಪ್ಮೆಂಟ್ ಸೊಸೈಟಿ ವತಿಯಿಂದ ಆಯೋಜಿಸಲಾದ ಕಾರ್ಯಕ್ರಮಕ್ಕೆ ಸಂಘದ ಅಧ್ಯಕ್ಷರಾದ ಪುಷ್ಪಲತಾ ಚಂದ್ರಶೇಖರ್ ಹಾಗೂ ಕೊಳ್ಳಿ ವಿಜಯ್ ಕುಮಾರ್ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮವನ್ನು ಟೆಕ್ಸ್ಟೈಲ್ ಇಲಾಖೆಯ ಉಪ ನಿರ್ದೇಶಕರಾದ ಮಹಾಂತೇಶ್ ಕಂತಿಮಠ ಹಾಗೂ ಕರ್ನಾಟಕ ರಕ್ಷಣಾ ವೇದಿಕೆ (ಶಿವರಾಮೇಗೌಡ ಬಣ) ಬಳ್ಳಾರಿ– ವಿಜಯನಗರ ಜಿಲ್ಲಾಧ್ಯಕ್ಷ ಕೆ.ರಾಜಣ್ಣ ಅವರು ಕಾರ್ಯಕ್ರಮ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, ಗ್ರಾಮೀಣ ಮಹಿಳೆಯರು



ಸ್ವಾವಲಂಬಿ ಜೀವನ ನಡೆಸಲು ಮುಂದಾಗಬೇಕು ಎಂದು ಕರೆ ನೀಡಿದರು. ಸರ್ಕಾರ ಮಹಿಳೆಯರಿಗಾಗಿ ವಿವಿಧ ಯೋಜನೆಗಳು ಹಾಗೂ ಸಾಲ ಸೌಲಭ್ಯಗಳನ್ನು ಒದಗಿಸುತ್ತಿದ್ದು, ಕೈಮಗ್ಗ, ಟೈಲರಿಂಗ್, ಬ್ಯೂಟಿ ಪಾರ್ಲರ್ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ತರಬೇತಿ ಪಡೆದು ಸ್ವಂತ ಉದ್ಯಮ ಆರಂಭಿಸುವ ಅವಕಾಶಗಳಿವೆ ಎಂದು ತಿಳಿಸಿದರು. ಮಹಿಳೆಯರು ಯಾವುದೇ ಕ್ಷೇತ್ರದಲ್ಲಿ ಮುಂದೆ ಬರಲು ಇಚ್ಛಿಸಿದರೆ ಸರ್ಕಾರದ ಸೌಲಭ್ಯಗಳನ್ನು ತಲುಪಿಸಲು ನೆರವಾಗುತ್ತೇವೆ ಎಂದು ಭರವಸೆ ನೀಡಿದರು.

ಕೈಮಗ್ಗ ತರಬೇತಿ ಪಡೆದಿರುವುದು ಮಹಿಳೆಯರಿಗೆ ಹೊಸ ಅವಕಾಶಗಳನ್ನು ತೆರೆದಿಡುತ್ತದೆ. ಹಳ್ಳಿಯ ಮಟ್ಟದಲ್ಲೇ ಬಟ್ಟೆಗಳನ್ನು ತಯಾರಿಸಿ, ಖರೀದಿ ಹಾಗೂ ಮಾರಾಟ ಮಾಡುವ ಮೂಲಕ ಆರ್ಥಿಕವಾಗಿ ಬಲಿಷ್ಠರಾಗಲು ಸಾಧ್ಯ. ಇಂತಹ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸಿರುವ ಸಂಘದ ಅಧ್ಯಕ್ಷರಾದ ಪುಷ್ಪಲತಾ ಚಂದ್ರಶೇಖರ್, ವಿಜಯ್ ಕುಮಾರ್ ಹಾಗೂ ಅವರ ತಂಡದ ಸೇವೆಯನ್ನು ಗಣ್ಯರು ಶ್ಲಾಘನೀಯ. ಮುಂದಿನ ದಿನಗಳಲ್ಲಿ ಸಹ ಇದೇ ರೀತಿಯ ಕಾರ್ಯಕ್ರಮಗಳು ಇನ್ನಷ್ಟು ಮಹಿಳೆಯರಿಗೆ ಪ್ರೇರಣೆಯಾಗಲಿ ಎಂದು ಆಶಿಸಿದರು.

ಮಹಿಳೆಯರಿಗೆ ಕೈಮಗ್ಗ ತರಬೇತಿ ನೀಡಿದಂತ ಶಿಕ್ಷಕರಾದ ಭಾಗ್ಯಲಕ್ಷ್ಮಿ, ಪೂಜಾ ಮತ್ತು ಮುಮ್ತಾಜ್ ಅವರಿಗೆ ಹಾಗೂ ಕಾರ್ಯಕ್ರಮದಲ್ಲಿ ನೃತ್ಯ ಪ್ರದರ್ಶನ ನೀಡಿದ ಮಗು ಶ್ರೇಯ ಪಾಟೀಲ್ ಹಾಗೂ ತನುಶ್ರೀ ಪಾಟೀಲ್ ಅವರಿಗೆ ಸನ್ಮಾನಿಸಲಾಯಿತು.

ಮೋಕಾ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಭಾರತಿ, ಮುರಾರ್ಜಿ ವಸತಿ ಶಾಲೆಯ ಪ್ರಾಂಶುಪಾಲರಾದ ಅನುಸೂಯ, ಮೋಕಾ ಪಂಚಾಯತಿ ಪಿಡಿಓ ಸಿದ್ದಲಿಂಗಪ್ಪ, ಕೆಎಸ್‌ಜೆ ಯೂನಿಯನ್ ಜಿಲ್ಲಾಧ್ಯಕ್ಷ ಎರಗುಡಿ ರಮೇಶ್, ರೈತ ಸೇವಾ ಸಂಘದ ಕೃಷ್ಣಪ್ಪ, ಉಮಾಪತಿ, ಸಮಾಜ ಸೇವಕ ಎರಗುಡಿ ಚಂದ್ರಪ್ಪ, ಕರವೇ ಪದಾಧಿಕಾರಿ ಶ್ರೀಶೈಲ ಉಮಾಮಹೇಶ್ವರ, ರಾಜಕುಮಾರ್, ಮಲ್ಲಿಕಾರ್ಜುನ, ಊರಿನ ಮುಖಂಡರಾದ ರಾಜಣ್ಣ ಸೇರಿದಂತೆ ಹಲವು ಮಹಿಳೆಯರು, ಗ್ರಾಮಸ್ಥರು ಸೇರಿದಂತೆ ಹಲವರು ಇದ್ದರು.

# ‘ಕಿರಿಯ ಕಲಾವಿದರ ಪ್ರೋತ್ಸಾಹಕ್ಕೆ ಸಂಗೀತ ವಿದ್ವಾಂಸರು ಮುಂದಾಗಲಿ’

ಕನಕಪುರ

“ಸಂಗೀತ ಕಲಿತವರು ಕೇವಲ ತಮ್ಮ ಹಿತಾಸಕ್ತಿಯನ್ನು ನೋಡಿಕೊಳ್ಳುತ್ತಿದ್ದಾರೆಯೇ ಹೊರತು, ಉದಯೋನ್ಮುಖ ಕಿರಿಯ ಸಂಗೀತಗಾರರನ್ನು ಪ್ರೋತ್ಸಾಹಿಸುವ ಕೆಲಸ ನಿರೀಕ್ಷಿತ ಮಟ್ಟದಲ್ಲಿ ನಡೆಯುತ್ತಿಲ್ಲ,” ಎಂದು ಹಿರಿಯ ಸಂಗೀತ ವಿದ್ವಾನ್ ಎಂ.ಎಸ್. ರಾಜೀವಲೋಚನ ವಿಷಾದ ವ್ಯಕ್ತಪಡಿಸಿದರು.



ನಗರದ ಜೆ.ಎಸ್. ಎಸ್. ಸಭಾಂಗಣದಲ್ಲಿ ಶ್ರೀ ಶಾರದಾ ಗಾನ ಸಭಾದ 11ನೇ ವಾರ್ಷಿಕೋತ್ಸವ ಹಾಗೂ ಪಿಟೀಲು ವಾದ್ಯ ಸಾಮ್ರಾಟ್, ಪದ್ಮಶ್ರೀ ಎಂ.ಎಸ್. ಗೋಪಾಲಕೃಷ್ಣನ್ ಅವರ ಸ್ಮರಣಾರ್ಥ ಹಮ್ಮಿಕೊಂಡಿದ್ದ ಸಂಗೀತೋತ್ಸವದ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ಸ್ವಂತ ದುಡಿಮೆಯಲ್ಲೇ ಕಲೆಗೆ ಆಸರೆ:

ಇಂದಿನ ದಿನಗಳಲ್ಲಿ ಹೆಚ್ಚಿನ ಕಾರ್ಯಕ್ರಮಗಳು ಪ್ರಾಯೋಜಿತವಾಗಿರುತ್ತವೆ. ಆದರೆ, ಶ್ರೀ ಶಾರದಾ ಗಾನ ಸಭಾದ ಸಂಸ್ಥಾಪಕ ಬಿ.ವಿ. ವೆಂಕಟೇಶ್ ಮೂರ್ತಿ ಅವರು ಕಳೆದ 11 ವರ್ಷಗಳಿಂದ ಸರ್ಕಾರದ ಅಥವಾ ಇತರರ ಆರ್ಥಿಕ ಸಹಕಾರವಿಲ್ಲದೆ, ತಮ್ಮ ಸ್ವಂತ ದುಡಿಮೆಯ ಹಣದಿಂದಲೇ ಇಂತಹ ಬೃಹತ್ ಸಂಗೀತೋತ್ಸವ ನಡೆಸುತ್ತಿರುವುದು ದೊಡ್ಡ ಸಾಧನೆ ಎಂದು ರಾಜೀವಲೋಚನ ಶ್ಲಾಘಿಸಿದರು.

# ನಿಮ್ಮ ಮನೆಗಣತಿ ನೀವೇ ಮಾಡಿಕೊಳ್ಳಿ: ಇಂದಿನಿಂದ ಸ್ವಯಂ-ಗಣತಿ ಪೋರ್ಟಲ್ ಲಭ್ಯ

ದೇವನಹಳ್ಳಿ

“ಮುಂಬರುವ ‘ಜನಗಣತಿ–2027’ರ ಅಂಗವಾಗಿ ಸಾರ್ವಜನಿಕರು ಸುರಕ್ಷಿತ ವೆಬ್ ಪೋರ್ಟಲ್ ಮೂಲಕ ಮನೆಯಲ್ಲೇ ಕುಳಿತು ಸ್ವಯಂ–ಗಣತಿಯಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಜಿಲ್ಲೆಯ ನಾಗರಿಕರು ಇದರ ಸದುಪಯೋಗ ಪಡೆದುಕೊಂಡು ನಿಖರ ಮಾಹಿತಿ ನೀಡಬೇಕು,” ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಮನೆ ಪಟ್ಟಿ ಮತ್ತು ಮನೆಗಣತಿ ಕಾರ್ಯವು ಏಪ್ರಿಲ್ 16 ರಿಂದ ಅಧಿಕೃತವಾಗಿ ಆರಂಭವಾಗಲಿದೆ. ಇದಕ್ಕೂ




15 ದಿನಗಳ ಮುಂಚಿತವಾಗಿ, ಅಂದರೆ ದಿನಾಂಕ: 01–04–2026 ರಿಂದ 15–04–2026 ರವರೆಗೆ ಸಾರ್ವಜನಿಕರು ಸ್ವಯಂ–ಗಣತಿ ಮಾಡಿಕೊಳ್ಳಲು ಪೋರ್ಟಲ್ ಮುಕ್ತವಾಗಿರಲಿದೆ.

ಸ್ವಯಂ–ಗಣತಿ ಮಾಡುವುದು ಹೇಗೆ?

ವೆಬ್ ಪೋರ್ಟಲ್: ಸಾರ್ವಜನಿಕರು self-enumeration.census.gov.in ಪೋರ್ಟಲ್ ಬಳಸಿಕೊಂಡು ಮೊಬೈಲ್, ಡೆಸ್ಕ್‌ಟಾಪ್ ಅಥವಾ ಲ್ಯಾಪ್‌ಟಾಪ್ ಮೂಲಕ ತಮ್ಮ ಕುಟುಂಬದ ಮಾಹಿತಿಯನ್ನು ಭರ್ತಿ ಮಾಡಬಹುದು.

ವಿವರಗಳು: ಮಾಹಿತಿ ಭರ್ತಿ ಮಾಡುವಾಗ ರಾಜ್ಯ, ಜಿಲ್ಲೆ, ತಾಲೂಕು, ಗ್ರಾಮ ಅಥವಾ ಪಟ್ಟಣದ ವಿವರಗಳನ್ನು ಪಿನ್ ಕೋಡ್ ಹಾಗೂ ಡಿಜಿಟಲ್ ಮ್ಯಾಪ್ ಸಹಿತ ನಿಖರವಾಗಿ ನಮೂದಿಸಬೇಕು.

ಸಮಯದ ಉಳಿತಾಯ: ಆನ್‌ಲೈನ್ ಮೂಲಕ ಮಾಹಿತಿ ನೀಡುವುದರಿಂದ ಸಮಯ ಉಳಿತಾಯವಾಗುವುದಲ್ಲದೆ, ನಿಖರ ಹಾಗೂ ಸಮಗ್ರ ದತ್ತಾಂಶ ಸಂಗ್ರಹಿಸಲು ಸಹಕಾರಿಯಾಗಲಿದೆ.

ವಿಶಿಷ್ಟ ಐಡಿ (Self-Enumeration ID): ಕುಟುಂಬವು ಮಾಹಿತಿಯನ್ನು ಯಶಸ್ವಿಯಾಗಿ ಸಲ್ಲಿಸಿದ ನಂತರ, ಅವರಿಗೆ ಒಂದು ‘ವಿಶಿಷ್ಟ ಸ್ವಯಂ–ಗಣತಿ ಐಡಿ’ ದೊರೆಯುತ್ತದೆ. ಇದನ್ನು ಎಸ್‌ಎಂಎಸ್ ಅಥವಾ ಇಮೇಲ್ ಮೂಲಕ ಕಳುಹಿಸಲಾಗುತ್ತದೆ. ನಂತರ ಗಣತಿದಾರರು ಮನೆಗೆ ಭೇಟಿ ನೀಡಿದಾಗ ಈ ಐಡಿಯನ್ನು ಅವರಿಗೆ ತೋರಿಸಿದರೆ ಸಾಕು, ಮರು ಮಾಹಿತಿ ನೀಡುವ ಅಗತ್ಯವಿರುವುದಿಲ್ಲ.

ಗೌಪ್ಯತೆಗೆ ಆದ್ಯತೆ: ಜನಗಣತಿಯ ಸಂದರ್ಭದಲ್ಲಿ ಸಾರ್ವಜನಿಕರು ನೀಡುವ ವೈಯಕ್ತಿಕ ಮಾಹಿತಿಯ ಗೌಪ್ಯತೆಯನ್ನು ಸಂಪೂರ್ಣವಾಗಿ ಕಾಯ್ದುಕೊಳ್ಳಲಾಗುವುದು. ಯಾವುದೇ ಆತಂಕವಿಲ್ಲದೆ ಸಾರ್ವಜನಿಕರು ಈ ರಾಷ್ಟ್ರೀಯ ಕಾರ್ಯದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಕೆ.ಜಿ.ಎಫ್, ಬೇತಮಂಗಲ ರಸ್ತೆ ಸಂಚಾರ ಇನ್ಮುಂದೆ ಸುಗಮ



ಬೇತಮಂಗಲ

“ಕ್ಷೇತ್ರದ ಪ್ರತಿಯೊಂದು ಗ್ರಾಮ ಹಾಗೂ ಬಡಾವಣೆಗಳಿಗೆ ಮೂಲಭೂತ ಸೌಕರ್ಯ ಒದಗಿಸುವುದು ನಮ್ಮ ಮೊದಲ ಆದ್ಯತೆಯಾಗಿದೆ. ನ್ಯೂ ಟೌನ್ ಭಾಗದ ಜನರ ಬಹುದಿನಗಳ ಬೇಡಿಕೆಯಾಗಿದ್ದ ಸುಸಜ್ಜಿತ ರಸ್ತೆ ಮತ್ತು ಬೆಳಕಿನ ವ್ಯವಸ್ಥೆ ಇಂದು ಪೂರ್ಣಗೊಂಡಿರುವುದು ಸಂತಸ ತಂದಿದೆ,” ಎಂದು ಶಾಸಕಿ ರೂಪಕಲಾ ಶಶಿಧರ್ ತಿಳಿಸಿದರು.

ನ್ಯೂ ಟೌನ್ ಗೇಟ್ ಬಳಿ ನೂತನವಾಗಿ ಅಳವಡಿಸಲಾದ ಹೈಮಾಸ್ಟ್ ದೀಪ ಹಾಗೂ ಪೂರ್ಣಗೊಂಡಿರುವ ಸಿಸಿ ರಸ್ತೆಯನ್ನು ಸಾರ್ವಜನಿಕರ ಬಳಕೆಗೆ ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು.

ಸಮನ್ವಯದ ಅಭಿವೃದ್ಧಿ ಕಾರ್ಯಕ್ಕೆ ಶ್ಲಾಘನೆ: ಕೆ.ಜಿ.ಎಫ್ ಮುಖ್ಯ ರಸ್ತೆಯಿಂದ ನ್ಯೂ ಟೌನ್ ವರೆಗಿನ ಸಂಚಾರವನ್ನು ಸುಗಮಗೊಳಿಸಲು ಶಾಸಕರು ತಮ್ಮ ವಿವಿಧ ಅನುದಾನಗಳ ಅಡಿಯಲ್ಲಿ 70 ಲಕ್ಷ ರೂ. ವೆಚ್ಚದಲ್ಲಿ ಸಿಸಿ ರಸ್ತೆ ನಿರ್ಮಾಣಕ್ಕೆ ಒತ್ತು ನೀಡಿದ್ದರು. ರಸ್ತೆಯ ಪ್ರವೇಶ ದ್ವಾರದ ಬಳಿ ಸುಸಜ್ಜಿತ ಸರ್ಕಲ್ ನಿರ್ಮಿಸಲಾಗಿದ್ದು, ಸಾರ್ವಜನಿಕರ ಸುರಕ್ಷತೆ ಮತ್ತು ಸೌಂದರ್ಯೀಕರಣದ ದೃಷ್ಟಿಯಿಂದ ಹೈಮಾಸ್ಟ್ ದೀಪದ ವ್ಯವಸ್ಥೆ ಕಲ್ಪಿಸಲಾಗಿದೆ.

ಇದೇ ಸಂದರ್ಭದಲ್ಲಿ ಶಾಸಕರು ಮಾಜಿ ಗ್ರಾ.ಪಂ ಸದಸ್ಯ ಮಂಜುನಾಥ್ ಅವರ ಕಾರ್ಯವೈಖರಿಯನ್ನು ಶ್ಲಾಘಿಸಿ, “ಮಂಜುನಾಥ್ ಅವರು ನರೇಗಾ ಯೋಜನೆಯಡಿ ಬಾಕಿ ಉಳಿದಿದ್ದ ರಸ್ತೆ ಹಾಗೂ ಚರಂಡಿ ಕಾಮಗಾರಿಯನ್ನು ಮುತುವರ್ಜಿ ವಹಿಸಿ ಪೂರ್ಣಗೊಳಿಸಿದ್ದಾರೆ. ಶಾಸಕರ ಅನುದಾನ ಹಾಗೂ ಸ್ಥಳೀಯ ಪ್ರತಿನಿಧಿಗಳ ಈ ಸಮನ್ವಯದ ಕೆಲಸ ಮಾದರಿಯಾಗಿದೆ,” ಎಂದರು. ಮುಂದಿನ ದಿನಗಳಲ್ಲಿ ದೇಗುಲ ನಿರ್ಮಾಣ: ಗ್ರಾ.ಪಂ. ಮಾಜಿ ಸದಸ್ಯ ಡೈರಿ ಮಂಜುನಾಥ್ ಮಾತನಾಡಿ, “ಶಾಸಕರ ವಿಶೇಷ ಆಸಕ್ತಿಯಿಂದ ಈ ಭಾಗದ ರಸ್ತೆ ಸಮಸ್ಯೆ ನೀಗಿದೆ. ಹೈಮಾಸ್ಟ್ ಲೈಟ್‌ನಿಂದಾಗಿ ರಾತ್ರಿ ವೇಳೆ ಸಂಚಾರಕ್ಕೆ ಅನುಕೂಲವಾಗಿದೆ. ಮುಂದಿನ ದಿನಗಳಲ್ಲಿ ಈ ಭಾಗದಲ್ಲಿ ಆಂಜನೇಯ ಸ್ವಾಮಿ ದೇಗುಲ ನಿರ್ಮಾಣ ಮಾಡುವ ಉದ್ದೇಶವಿದೆ,” ಎಂದು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಜಿ.ಪಂ ಮಾಜಿ ಸದಸ್ಯ ಅ.ಮು. ಲಕ್ಷ್ಮೀನಾರಾಯಣ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕಮ್ಮಸಂದ್ರ ನಾಗರಾಜ್, ಕೆಪಿಸಿಸಿ ಸದಸ್ಯ ದುರ್ಗಾ ಪ್ರಸಾದ್, ಎಪಿಎಂಸಿ ನಿರ್ದೇಶಕ ರಾಮಚಂದ್ರಪ್ಪ, ಸುರೇಂದ್ರ ಗೌಡ, ಗ್ರಾ.ಪಂ ಮಾಜಿ ಅಧ್ಯಕ್ಷರಾದ ವಿನು ಕಾರ್ತಿಕ್, ಕಾರಿ ಪ್ರಸನ್ನ ಹಾಗೂ ಮುಖಂಡರಾದ ರಮೇಶ್, ವೆಂಕಟರಮಣ, ರಾಜಣ್ಣ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ‘ರೈತರ ಮೇಲೆ ಸುಳ್ಳು ಕೇಸ್ ದಾಖಲಿಸಬೇಡಿ’



ಕುಣಿಗಲ್

“ಬೇಸಿಗೆಯ ಅವಧಿಯಲ್ಲಿ ರೈತರು ತಮ್ಮ ಅಡಕೆ, ತೆಂಗು ಮತ್ತು ಬಾಳೆ ತೋಟಗಳಿಗೆ ಕೆರೆಗಳಿಂದ ಹೂಳು ಮಣ್ಣನ್ನು ಸಾಗಿಸಿಕೊಳ್ಳಲು ಸರ್ಕಾರ ಯಾವುದೇ ಅಡಚಣೆ ಉಂಟುಮಾಡಬಾರದು,” ಎಂದು ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಬಿ.ಆರ್. ಯೋಗೀಶ್ (ಕರಿಗೌಡ) ಒತ್ತಾಯಿಸಿದರು.

ತಾಲೂಕಿನ ಹುಲಿಯೂರುದುರ್ಗ ವೃತ್ತದಲ್ಲಿ ನೂರಾರು ರೈತರೊಂದಿಗೆ ಪ್ರತಿಭಟನೆ ನಡೆಸಿ ಮಾತನಾಡಿದ ಅವರು, ಕಂದಾಯ ಮತ್ತು ಸಣ್ಣ ನೀರಾವರಿ ಇಲಾಖೆಗಳು ರೈತರ ಮೇಲೆ ಸುಳ್ಳು ಕೇಸ್ ದಾಖಲಿಸುತ್ತಿರುವುದನ್ನು ತೀವ್ರವಾಗಿ ಖಂಡಿಸಿದರು.

ಅಧಿಕಾರಿಗಳ ಕ್ರಮಕ್ಕೆ ಆಕ್ರೋಶ: ರೈತರು ಸ್ವಯಂಪ್ರೇರಿತರಾಗಿ ಕೆರೆಯ ಹೂಳು ತೆಗೆಯುವುದರಿಂದ ಕೆರೆಯ ಸಂಗ್ರಹಣಾ ಸಾಮರ್ಥ್ಯ ಹೆಚ್ಚುತ್ತದೆ ಮತ್ತು ಅಂತರ್ಜಲ ವೃದ್ಧಿಯಾಗುತ್ತದೆ. ಆದರೆ, ಇಲಾಖೆಗಳು ಜೆಸಿಬಿ ಮತ್ತು ಟ್ರ್ಯಾಕ್ಟರ್‌ಗಳ ಮೂಲಕ ಮಣ್ಣು ಸಾಗಿಸುವ ರೈತರ ಮೇಲೆ ಕಾನೂನು ಕ್ರಮ ಜರುಗಿಸಲು ಮುಂದಾಗಿರುವುದು ಸರಿಯಲ್ಲ. “ರೈತರ ಹೆಸರಿನಲ್ಲಿ ಮಣ್ಣನ್ನು ವಾಣಿಜ್ಯ ಉದ್ದೇಶಕ್ಕೆ ಬಳಸಿ ಸ್ಟಾಕ್ ಮಾಡುತ್ತಿದ್ದರೆ ಅಂತಹವರ ಮೇಲೆ ಕ್ರಮ ಕೈಗೊಳ್ಳಲಿ, ಆದರೆ ಪ್ರಾಮಾಣಿಕವಾಗಿ ತೋಟಗಳಿಗೆ ಮಣ್ಣು ಹೊರುವ ರೈತರಿಗೆ ತೊಂದರೆ ನೀಡಬಾರದು,” ಎಂದು ಅವರು ಆಗ್ರಹಿಸಿದರು.

ಎಚ್ಚರಿಕೆ ಸಂದೇಶ: ಕೆರೆಗಳಲ್ಲಿ ಬೆಳೆದಿರುವ ಜಾಲಿ ಗಿಡಗಳನ್ನು ತೆರವುಗೊಳಿಸಿ ಕೆರೆ ಸಂರಕ್ಷಣೆ ಮಾಡುವುದು ಪ್ರತಿಯೊಬ್ಬ ರೈತನ ಜವಾಬ್ದಾರಿಯಾಗಿದೆ. ಸರ್ಕಾರ ಕೂಡಲೇ ರೈತರಿಗೆ ಮಣ್ಣು ಸಾಗಿಸಲು ಮುಕ್ತ ಅವಕಾಶ ನೀಡಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ತಾಲೂಕು ಕಚೇರಿ ಮುಂದೆ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ತಹಶೀಲ್ದಾರ್ ಭರವಸೆ: ಸ್ಥಳಕ್ಕೆ ಆಗಮಿಸಿ ರೈತರಿಂದ ಮನವಿ ಸ್ವೀಕರಿಸಿದ ತಹಶೀಲ್ದಾರ್ ಕರಿಯ ನಾಯಕ್, “ಈ ಕುರಿತು ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ ರೈತರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಸೂಕ್ತ ಕ್ರಮ ವಹಿಸಲಾಗುವುದು,” ಎಂದು ಭರವಸೆ ನೀಡಿದರು. ಭರವಸೆಯ ನಂತರ ರೈತರು ಪ್ರತಿಭಟನೆಯನ್ನು ಹಿಂತೆಗೆದುಕೊಂಡರು.

ಸರ್ಕಲ್ ಇನ್ಸ್‌ಪೆಕ್ಟರ್ ನವೀನ್ ಗೌಡ ಅವರ ನೇತೃತ್ವದಲ್ಲಿ ಬಿಗಿಯಾದ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು. ಪ್ರತಿಭಟನೆಯಲ್ಲಿ ರೈತ ಮುಖಂಡರಾದ ಶಿವಲಿಂಗಯ್ಯ, ಹೆಚ್.ಡಿ. ನಿಂಗೇಗೌಡ, ಸಿದ್ಧಾರ್ಥ, ಲಿಂಗರಾಜು, ರವಿಕುಮಾರ್ ಅರ್ಜುನಹಳ್ಳಿ ಸೇರಿದಂತೆ ನೂರಾರು ರೈತರು ಭಾಗವಹಿಸಿದ್ದರು.

# ಶೋಷಿತರ ಪರ ಹೋರಾಟ ಬಲಪಡಿಸಲು ಕ್ರಮ

ಬಂಗಾರಪೇಟೆ

“ಕರ್ನಾಟಕ ದಲಿತ ರೈತಸೇನೆಯು ನಿರಂತರವಾಗಿ ಸಮಾಜದ ಅಂಕುಡೊಂಕುಗಳನ್ನು ತಿದ್ದುತ್ತಾ, ನೊಂದವರ ಧ್ವನಿಯಾಗಿ ಕಾರ್ಯನಿರ್ವಹಿಸುತ್ತಾ ಬಂದಿದೆ. ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಜಿಲ್ಲಾಧ್ಯಕ್ಷರ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ,” ಎಂದು ಸಂಘಟನೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಹುಣಸನಹಳ್ಳಿ ಎನ್. ವೆಂಕಟೇಶ್ ತಿಳಿಸಿದರು.

ಪಟ್ಟಣದ ಅಂಬೇಡ್ಕರ್ ಪುತ್ಥಳಿಯ ಮುಂಭಾಗದಲ್ಲಿ ಹಮ್ಮಿಕೊಂಡಿದ್ದ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆಗೆ ಚಾಲನೆ ನೀಡಿ ಅವರು ಮಾತನಾಡಿದರು.



ಶೋಷಿತರ ಬೆಂಬಲಕ್ಕೆ ಸಂಘಟನೆ ಅನಿವಾರ್ಯ: ಇತ್ತೀಚಿನ ದಿನಗಳಲ್ಲಿ ಬಡವರು, ದಲಿತರು ಹಾಗೂ ಶ್ರಮಿಕ ವರ್ಗದವರ ಮೇಲೆ ದಬ್ಬಾಳಿಕೆ ಮತ್ತು ದೌರ್ಜನ್ಯ ಪ್ರಕರಣಗಳು ಹೆಚ್ಚಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ನೊಂದವರಿಗೆ ಧ್ವನಿಯಾಗಿ ನಿಲ್ಲುವ ನಾಯಕರ ಕೊರತೆ ಎದುರಾಗಿರುವ ಈ ಸಂದರ್ಭದಲ್ಲಿ, ಶೋಷಿತರಿಗೆ ನ್ಯಾಯ ಒದಗಿಸಲು ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸುವುದು ಅನಿವಾರ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ನೂತನ ಪದಾಧಿಕಾರಿಗಳ ಆಯ್ಕೆ: ಮೊದಲ ಹಂತವಾಗಿ ಕೋಲಾರ ಜಿಲ್ಲಾ ಘಟಕಕ್ಕೆ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಿ ಆದೇಶ ಪತ್ರಿಕೆ ವಿತರಿಸಲಾಯಿತು.

ಜಿಲ್ಲಾಧ್ಯಕ್ಷರು: ರಾಜುಕೋಟಿ

ಉಪಾಧ್ಯಕ್ಷರು: ಕೊಂಡನಹಳ್ಳಿ ರವಿಕುಮಾರ್

ಜಿಲ್ಲಾ ಪದಾಧಿಕಾರಿಗಳು: ಪ್ರದೀಪ್ ಮತ್ತು ಗಂಗಮ್ಮನಪಾಳ್ಯ ತರುಣ್.

ಹಣದ ಅಸ್ತ್ರವಾಗಬಾರದು: ನೇಮಕಾತಿ ಬಳಿಕ ಮಾತನಾಡಿದ ನೂತನ ಜಿಲ್ಲಾಧ್ಯಕ್ಷ ರಾಜುಕೋಟಿ, “ಸಂಘಟನೆಗಳು ಹಣ ಸಂಪಾದಿಸುವ ಅಸ್ತ್ರವಾಗಬಾರದು. ಬದಲಿಗೆ ನೊಂದವರಿಗೆ ನ್ಯಾಯ ಕೊಡಿಸುವ ವೇದಿಕೆಯಾಗಬೇಕು. ರಾಜ್ಯಾಧ್ಯಕ್ಷರ ಮಾರ್ಗದರ್ಶನ ಹಾಗೂ ಸಂಘದ ತತ್ವ ಸಿದ್ಧಾಂತಗಳಿಗೆ ಬದ್ಧನಾಗಿ ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಿಸುತ್ತೇನೆ,” ಎಂದು ಭರವಸೆ ನೀಡಿದರು.

# ತತ್ವಪದ, ರಂಗಗೀತೆ ಜಾನಪದ ಸಂಗೀತ ಸಂಭ್ರಮ

ಬಳ್ಳಾರಿ

ಇಲ್ಲಿನ ಬಂಡಿಹಟ್ಟಿ ರಾಮನಗರದ ಗಿರಿಜಪ್ಪ ಅವಧೂತರ ಮಠದಲ್ಲಿ ಶ್ರೀ ಮಾರುತಿ ತೊಗಲು ಗೊಂಬೆ ಕಲಾ ಟ್ರಸ್ಟ್ ಹಮ್ಮಿಕೊಂಡ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ತತ್ವ ಪದಗಳು, ರಂಗ ಗೀತೆಗಳು ಮತ್ತು ಜಾನಪದ ಸಂಗೀತದ ಸಂಭ್ರಮ ಮೇರೆ ಮೀರಿತ್ತು.

ಉದ್ಯಮಿ ಕೊರಲಗುಂದಿ ಬಸವನಗೌಡ ಈ ಸಂಗೀತ ಸಂಭ್ರಮ ಉದ್ಘಾಟಿಸಿ ಮಾತನಾಡಿ, ಜನಪದ ತತ್ವ ಪದಗಳು ಈಗಿನ ಆಧುನಿಕ ಕಾಲದಲ್ಲಿ ಜನ ಮನ್ನಣೆ ಗಳಿಸಿವೆ. ಅವುಗಳಲ್ಲಿರುವ ಸಾಹಿತ್ಯ ಗಟ್ಟಿತನ, ಮನುಷ್ಯನ ಬದುಕಿನ ಸಾರವನ್ನು, ಮೋಕ್ಷದ ಮಾರ್ಗಗಳನ್ನು, ದುಡಿಮೆ, ದಾನ, ಧರ್ಮ, ಗುರು ಶಿಷ್ಯ ಪರಂಪರೆಯನ್ನು ಬೋಧಿಸುವ ಮಾರ್ಗಗಳನ್ನು ಕಾಣುತ್ತೇವೆ. ಹೀಗಾಗಿ ಎಂದಿಗೂ ಜನಪದ, ತತ್ವಪದ ಜಗತ್ತು ಇರುವರೆಗೂ ಶಾಶ್ವತವಾಗಿ ಸರ್ವಕಾಲಕ್ಕೂ ಬದುಕಿನ ಸತ್ಯವನ್ನು ಹೇಳುತ್ತವೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಬಳ್ಳಾರಿ ಜಿಲ್ಲಾ ಕಲಾವಿದರ ಸಂಘದ ಅಧ್ಯಕ್ಷ ಎಲ್ಲನಗೌಡ ಶಂಕರಬಂಡೆ, ಶರೀಫರ ತತ್ವಪದಗಳು ಮತ್ತು ಅವರ ಗುರು ಶಿಷ್ಯ ಪರಂಪರೆ ಮೋಕ್ಷ ಮಾರ್ಗದ ಸಾರವನ್ನು ಅಂದಿನ ಕಾಲದಲ್ಲಿ ಜಾತಿ ಧರ್ಮಗಳನ್ನು ಮೀರಿ ಭಾವೈಕ್ಯತೆಯ ಭಾಗವಾಗಿ ಬೆಳೆದಿವೆ. ಇದು ನಮ್ಮ ಮಣ್ಣಿನ ಜನಪದ ಮತ್ತು ತತ್ವಪದಗಳಲ್ಲಿ ಅಮೋಘವಾದ ಶಕ್ತಿ ಇದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಕರ್ಚೆಡು ತಿಪ್ಪೇಸ್ವಾಮಿ, ಯುವ ಉದ್ಯಮಿ ವೈ ಮಾರುತಿ ಸಿರುಗುಪ್ಪ, ಸಪ್ತಸ್ವರ ಸಾಂಸ್ಕೃತಿಕ ಬಯಲಾಟ ಕಲೆ ಟ್ರಸ್ಟ್ ನ ಉಪಾಧ್ಯಕ್ಷೆ ಜಯಲಕ್ಷ್ಮೀ ಸುಬ್ರಮಣ್ಯಂ ಸಿರುಗುಪ್ಪ, ಬೈಲಾಟ ಹಿರಿಯ ಕಲಾವಿದ ಹನುಮಾವದೂತ ಹಾಗೂ ಮಾರುತಿ ತೊಗಲುಗೊಂಬೆ ಕಲಾ ಟ್ರಸ್ಟ್ ನ ಅಧ್ಯಕ್ಷ ಸುಬ್ಬಣ್ಣ ಉಪಸ್ಥಿತರಿದ್ದರು.

ಜಡೇಶ್ ಎಮ್ಮಿಗನೂರು ಅವರಿಂದ ಜನಪದ ಸಂಗೀತ, ಕೆ. ರಮೇಶ್ ತಂಡದವರಿಂದ ತತ್ವಪದ ಗಾಯನ, ಹನುಮಾವದೂತ ತಂಡದವರಿಂದ ರಂಗಗೀತೆ ಕಾರ್ಯಕ್ರಮಗಳು ನೆರದ ಪ್ರೇಕ್ಷಕರ ಮನ ರಂಜಿಸಿದವು.


# ಉಪ ಚುನಾವಣೆಯಲ್ಲಿ ಗೆಲುವು ಖಚಿತ: ಕೆ.ವೈ.ನಂಜೇಗೌಡ

ಕೋಲಾರ

ಚುನಾವಣೆಯಲ್ಲಿ ಯಾರಿಗೆ ಟಿಕೆಟ್ ನೀಡುತ್ತಾರೆ ಎಂಬುದು ಹೈಕಮಾಂಡ್‌ಗೆ ಬಿಟ್ಟ ವಿಚಾರ. ಉಪ ಚುನಾವಣೆಯ ವಿಚಾರದಲ್ಲೂ ಹೈಕಮಾಂಡ್ ನ ತೀರ್ಮಾನ ಆಗಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬರಬೇಕೆಂದರೆ ಮುಸ್ಲಿಮರ ಪಾತ್ರ ಬಹು ಮುಖ್ಯ. ಪಕ್ಷದಲ್ಲಿನ ಭಿನ್ನಾಭಿಪ್ರಾಯಗನ್ನು ರಾಜ್ಯ ಉಸ್ತುವಾರಿ ಸುರ್ಜೆವಾಲ ಶಮನ ಮಾಡಿದ್ದಾರೆ. ನನಗೂ ಪ್ರಚಾರಕ್ಕೆ ಹೋಗಲು ಸೂಚಿಸಿದ್ದು, ಕೈ ಅಭ್ಯರ್ಥಿಗಳ ಗೆಲುವು ಖಚಿತ ಎಂದು ಕೋಲಾರ ಹಾಲು ಒಕ್ಕೂಟದ ಅಧ್ಯಕ್ಷರೂ ಆಗಿರುವ ಶಾಸಕ ಕೆ.ವೈ.ನಂಜೇಗೌಡ ವಿಶ್ವಾಸ ವ್ಯಕ್ತಪಡಿಸಿದರು.

ಇಲ್ಲಿನ ಒಕ್ಕೂಟದ ಕಚೇರಿಯಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿ, ಎಲ್ಲಾ ಜಾತಿ, ಧರ್ಮದವರನ್ನು ಒಟ್ಟಿಗೆ ತೆಗೆದುಕೊಂಡು ಹೋಗುವ ಪದ್ಧತಿ ಕಾಂಗ್ರೆಸ್‌ನಲ್ಲಿ ಮಾತ್ರ. ಬಿಜೆಪಿ, ಆರ್.ಎಸ್.ಎಸ್. ನವರು ಸ್ವಾತಂತ್ರ್ಯ ಹೋರಾಟದಲ್ಲಿದ್ದರಾ? ಎಂದ ಅವರು ದೇಶ ಕಾಂಗ್ರೆಸ್ ಮಯವಾಗುತ್ತದೆ ನೋಡುತ್ತಿರಿ ಎಂದರು.

ಹಾಲು ಒಕ್ಕೂಟದಿಂದ ಆರೋಗ್ಯಕರ ತೀರ್ಮಾನಗಳನ್ನು ಕೈಗೊಳ್ಳುವ ಮೂಲಕ ಲಾಭದಾಯಕದತ್ತ ಆಡಳಿತ ಮಂಡಳಿ ಕೊಂಡೊಯ್ಯುತ್ತಿದೆ. ಆ



ಮೂಲಕ ಉತ್ಪಾದಕರಿಗೆ ಅನುಕೂಲ ಕಲ್ಪಿಸುವಲ್ಲಿ ಮುಂದಿದೆ. ಶಾಸಕ ಎಸ್. ಎನ್.ನಾರಾಯಣಸ್ವಾಮಿ ಅವರು ಸಹ ಒಕ್ಕೂಟದ ನಿರ್ದೇಶಕರಾಗಿದ್ದು, ಒಕ್ಕೂಟದ ಪರವಾಗಿ ಸಲಹೆ ಸೂಚನೆ ನೀಡುತ್ತಿದ್ದಾರೆ.

ಜಿಲ್ಲಾಡಳಿತ ಕಚೇರಿ ಆವರಣದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿ ನಿರ್ಮಾಣಕ್ಕಾಗಿ 15 ಲಕ್ಷ ರೂ. ಬೇಡಿಕೆ ಇಟ್ಟಿದ್ದರು, ರೂ. 10 ಲಕ್ಷ ನೀಡುವುದಾಗಿ ಹೇಳಲಾಗಿದೆ. ಚರ್ಚೆಯಾಗಿ ನಿರ್ದೇಶಕರೆಲ್ಲ ಒಮ್ಮತದಿಂದ ತೀರ್ಮಾನ ಕೈಗೊಂಡು 15 ಲಕ್ಷ ಕೊಡಲು ಒಪ್ಪಿಗೆ ನೀಡಿದ್ದಾರೆ. ಅಷ್ಟರೊಳಗೆ ಸಭೆಯಿಂದ ಹೊರ ಹೋಗಿದ್ದು ಸರಿಯಲ್ಲ ಎಂದರು.

ಮೂರು ಭಾರಿ ಶಾಸಕರಾಗಿರುವ ಅವರು, ಬೋರ್ಡ್ನಲ್ಲಿ ಆಗಿರುವ ತೀರ್ಮಾನವನ್ನು ಮಾಧ್ಯಮಗಳಿಗೆ ಹೇಳಿಕೆ ನೀಡಿದ್ದಾರೆ. ಸಭೆಯಲ್ಲಿ ಚರ್ಚಿಸಬೇಕಿದ್ದನ್ನು ಹೊರಗಡೆ ಹೇಳಿಕೆ ನೀಡುವುದು ಎಷ್ಟು ಮಾತ್ರ ಸರಿ...?, ಅವರು ಹಿರಿಯರಿದ್ದು ಮುಂದೆ ಒಳ್ಳೆ ಅವಕಾಶಗಳು ಸಿಗೋದಿದೆ ಎಂದರು. ಆಡಳಿತ ಮಂಡಳಿಯಲ್ಲಿ ಆದ ತೀರ್ಮಾನಗಳು ಹೊರಗಡೆ ಗೊತ್ತಾಗುತ್ತಿರಲಿಲ್ಲ, ಇದೀಗ ಕೆಲವರು ಹೊರ ಹಾಕುತ್ತಿರುವುದು ಬೇಸರ ತಂದಿದೆ ಎಂದರು.

ಐಪಿಎಲ್ ಟಿಕೆಟ್ ವಿಚಾರವಾಗಿ ಮಾತನಾಡಿ, ಸರ್ಕಾರಕ್ಕೆ ಶಾಸಕರೆಲ್ಲ ಸಹಕಾರ ನೀಡುತ್ತಿದ್ದಾರೆ. ಶಾಸನ ರೂಪಿಸುವವರೆ ನಾವೇ. ಐಪಿಎಲ್ ಟಿಕೆಟ್ ಬೇಕು ಎಂದು ಪಕ್ಷಾತೀತವಾಗಿ ಕೇಳಿದ್ದಾರೆ. ಹೋಗಿ ಪಂದ್ಯ ನೋಡುವುದರಲ್ಲಿ ತಪ್ಪೇನಿದೆ? ಒಳಗಡೆ ಟಿಕೇಟ್ ಬೇಕು ಎಂದು ಹೇಳಿ, ರಾಜಕೀಯಕ್ಕಾಗಿ ಬಿಜೆಪಿಯವರು ಹೊರಗಡೆ ಮಾತನಾಡಿದ್ದಾರೆ ಎಂದು ಆರೋಪಿಸಿದರು.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

11/04/2026 ಭಾರತ ಸಾರಥಿ



ತುಮಕೂರಿನ ಸಿದ್ದಗಂಗಾ ಮಠಕ್ಕೆ ಆಗಮಿಸಿದ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪನವರನ್ನು ಆಟೋ ಯಡಿಯೂರಪ್ಪ ಹಾರ, ಶಾಲು ಹಾಕಿ ಅಭಿನಂದಿಸಿದರು. ಟಿ.ಆರ್. ಸದಾಶಿವಯ್ಯ, ಕೊಪ್ಪಲ್ ನಾಗರಾಜು, ಸತ್ಯಮಂಗಲ ಜಗದೀಶ್ ಚಿತ್ರದಲ್ಲಿದ್ದಾರೆ.



ಬಳ್ಳಾರಿ ನಗರದ ಜನನಿಬಿಡ ಪ್ರದೇಶವಾದ ಕಾಳಮ್ಮ ಬೀದಿಯ ಶ್ರೀ ಕಾಳಿಕಾ ಕಮಠೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಶ್ರೀ ಕಾಳಿಕಾ ಕಮಟೇಶ್ವರ ಸ್ವಾಮಿಯ ಕಲ್ಯಾಣೋತ್ಸವ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಿತು. ವಿಶ್ವಕರ್ಮ ಸಮುದಾಯದ ವತಿಯಿಂದ ಆಯೋಜಿಸಿದ ಕಾರ್ಯಕ್ರಮದಲ್ಲಿ ಸಕಲ ಸದ್ಭಕ್ತರು ಇದ್ದರು.

# ಬಾಗಲಕೋಟೆ ಉಪಸಮರ: ಉಮೇಶ್ ಮೇಟಿ ಪರ ಸಚಿವ ಬೈರತಿ ಸುರೇಶ್ ಬಿರುಸಿನ ಮತಯಾಚನೆ



ಬಾಗಲಕೋಟೆ

ಏಪ್ರಿಲ್ 9ರಂದು ನಡೆಯಲಿರುವ ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಪರ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ಮಂಗಳವಾರ ಬಿರುಸಿನ ಪ್ರಚಾರ ನಡೆಸಿದರು.

ನಗರದ ವಿದ್ಯಾಗಿರಿ ಸೇರಿದಂತೆ ವಿವಿಧ ಬಡಾವಣೆಗಳಲ್ಲಿ ಮನೆ ಮನೆಗೆ ತೆರಳಿದ ಸಚಿವರು, ರಾಜ್ಯ ಸರ್ಕಾರದ ಸಾಧನೆಗಳನ್ನು ವಿವರಿಸಿ ಕಾಂಗ್ರೆಸ್ ಬೆಂಬಲಿಸುವಂತೆ ಮತದಾರರಲ್ಲಿ ಮನವಿ ಮಾಡಿದರು.

ಪ್ರಚಾರದ ವೇಳೆ ಮಾತನಾಡಿದ ಸಚಿವ ಬೈರತಿ ಸುರೇಶ್, "ಬಾಗಲಕೋಟೆ ಜನತೆಯ ದಶಕಗಳ ಬೇಡಿಕೆಯಾಗಿದ್ದ ವೈದ್ಯಕೀಯ ಕಾಲೇಜು ಮಂಜೂರು ಮಾಡಿಸುವಲ್ಲಿ ಮಾಜಿ ಶಾಸಕ ಹೆಚ್.ವೈ. ಮೇಟಿ ಅವರ ಶ್ರಮ ದೊಡ್ಡದಿದೆ. ಈ ಹಿಂದೆ ಅಧಿಕಾರದಲ್ಲಿದ್ದ ಬಿಜೆಪಿ ಸರ್ಕಾರ ಜಿಲ್ಲೆಯ ಈ ಪ್ರಮುಖ ಬೇಡಿಕೆಯನ್ನು ನಿರ್ಲಕ್ಷಿಸಿತ್ತು. ಆದರೆ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಮೇಟಿಯವರ ಒತ್ತಾಸೆಯಂತೆ ಜಿಲ್ಲೆಗೆ ಮೆಡಿಕಲ್ ಕಾಲೇಜು ಮಂಜೂರಾಗಿದೆ," ಎಂದು ನೆನಪಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳು ಲಕ್ಷಾಂತರ ಬಡ ಕುಟುಂಬಗಳನ್ನು ಆರ್ಥಿಕವಾಗಿ ಸಬಲಗೊಳಿಸಿವೆ. ಅನ್ನಭಾಗ್ಯ ಸೇರಿದಂತೆ ಹಲವು ಭಾಗ್ಯಗಳ ಮೂಲಕ ಸರ್ಕಾರ ಬಡವರ ಪರವಾಗಿ ನಿಂತಿದೆ. ಎಚ್.ವೈ. ಮೇಟಿಯವರಂತೆಯೇ ಉಮೇಶ್ ಮೇಟಿ ಅವರು ಕೂಡ ಜನಪರ ಕಾಳಜಿ ಹೊಂದಿದ್ದು, ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗಾಗಿ ಅವರನ್ನು ಬೆಂಬಲಿಸಬೇಕು ಎಂದು ಕರೆ ನೀಡಿದರು.

"ಬಿಜೆಪಿ ಆಡಳಿತಾವಧಿಯಲ್ಲಿ ಬಾಗಲಕೋಟೆ ಜಿಲ್ಲೆಯ ಅಭಿವೃದ್ಧಿ ಶೂನ್ಯವಾಗಿತ್ತು. ಅಭಿವೃದ್ಧಿ ಕೆಲಸಗಳು ನಡೆದಿರುವುದು ಕಾಂಗ್ರೆಸ್ ಶಾಸಕರು ಆಯ್ಕೆಯಾದಾಗ ಮಾತ್ರ. ಉಮೇಶ್ ಮೇಟಿ ಅವರನ್ನು ಗೆಲ್ಲಿಸುವ ಮೂಲಕ ಕ್ಷೇತ್ರದ ಅಭಿವೃದ್ಧಿ ಪರ್ವ ಮುಂದುವರಿಸಲು ಮತದಾರರು ಆಶೀರ್ವದಿಸಬೇಕು," ಎಂದು ವಿನಂತಿಸಿದರು.

ಇದೇ ವೇಳೆ ಸ್ಥಳೀಯ ನಾಯಕರು ಮತ್ತು ಕಾರ್ಯಕರ್ತರೊಂದಿಗೆ ಸಭೆ ನಡೆಸಿದ ಸಚಿವರು, ಸರ್ಕಾರದ ಜನಪ್ರಿಯ ಕಾರ್ಯಕ್ರಮಗಳನ್ನು ಪ್ರತಿ ಮನೆಗೆ ತಲುಪಿಸಿ ಪಕ್ಷದ ಗೆಲುವಿಗೆ ಶ್ರಮಿಸುವಂತೆ ಕಿವಿಮಾತು ಹೇಳಿದರು.

# ಸಿದ್ದಗಂಗಾ ಮಠದಲ್ಲಿ ಬಿ.ಎಸ್. ಯಡಿಯೂರಪ್ಪ ಭಕ್ತಿಪರವಶ: ಲಿಂಗೈಕ್ಯ ಶ್ರೀಗಳ ಗದ್ದುಗೆಗೆ ವಿಶೇಷ ಪೂಜೆ



ತುಮಕೂರು

ಆಧುನಿಕ ಬಸವಣ್ಣ, ತ್ರಿವಿಧ ದಾಸೋಹ ಮೂರ್ತಿ ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ 119ನೇ ಜನ್ಮ ಜಯಂತಿಯ ಅಂಗವಾಗಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಬುಧವಾರ ಸಿದ್ದಗಂಗಾ ಮಠಕ್ಕೆ ಭೇಟಿ ನೀಡಿ ಶ್ರೀಗಳ ಗದ್ದುಗೆ ದರ್ಶನ ಪಡೆದರು.

ಗದ್ದುಗೆ ಮಂದಿರದಲ್ಲಿ ವಿಶೇಷ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದ ನಂತರ, ಸಿದ್ದಗಂಗಾ ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿ ಅವರನ್ನು ಭೇಟಿ ಮಾಡಿ ಫಲತಾಂಬೂಲ ನೀಡಿ ಗೌರವಿಸಿದರು.

**ಶ್ರೀಗಳ ನಾಮಸ್ಮರಣೆ ಮಾಡದೆ ಕೆಲಸ ಆರಂಭಿಸಲ್ಲ:**

ಸುದ್ದಿಗಾರರೊಂದಿಗೆ ಮಾತನಾಡಿದ ಯಡಿಯೂರಪ್ಪನವರು, "ಪೂಜ್ಯ ಶ್ರೀಗಳ 119ನೇ ಜಯಂತಿಯ ಶುಭ ಸಂದರ್ಭದಲ್ಲಿ ಗದ್ದುಗೆ ದರ್ಶನ ಪಡೆಯುವ ಸೌಭಾಗ್ಯ ನನ್ನದಾಗಿದೆ. ನಾನು ಪ್ರತಿನಿತ್ಯವೂ ಶ್ರೀಗಳ ನಾಮಸ್ಮರಣೆ ಮಾಡದೆ ಯಾವುದೇ ಕೆಲಸವನ್ನು ಆರಂಭಿಸುವುದಿಲ್ಲ. ಅವರ ಆಶೀರ್ವಾದ ಸದಾ ನಮ್ಮ ಮೇಲಿರುತ್ತದೆ," ಎಂದು ಭಾವುಕರಾಗಿ ನುಡಿದರು.

**ರಾಷ್ಟ್ರಪತಿಗಳ ಆಗಮನಕ್ಕೆ ಸ್ವಾಗತ:**

ಶ್ರೀಗಳ ಜಯಂತಿ ಮತ್ತು ಗುರುವಂದನಾ ಮಹೋತ್ಸವದಲ್ಲಿ ಭಾಗವಹಿಸಲು ಭಾರತದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಆಗಮಿಸುತ್ತಿರುವುದು ತುಮಕೂರು ಜಿಲ್ಲೆಗೆ ಹೆಮ್ಮೆಯ ವಿಷಯ. ಅವರ ಭೇಟಿಯಿಂದ ಶ್ರೀಕ್ಷೇತ್ರದ ಮೆರಗು ಮತ್ತಷ್ಟು ಹೆಚ್ಚಲಿದೆ ಎಂದು ಅವರು ತಿಳಿಸಿದರು.

**ಉಪಚುನಾವಣೆಯಲ್ಲಿ ಬಿಜೆಪಿ ಗೆಲುವು ನಿಶ್ಚಿತ:**

ರಾಜ್ಯದ ಎರಡು ವಿಧಾನಸಭಾ ಕ್ಷೇತ್ರಗಳಿಗೆ ನಡೆಯಲಿರುವ ಉಪಚುನಾವಣೆಯ ಕುರಿತು ಮಾತನಾಡಿದ ಅವರು, "ಭಾರತೀಯ ಜನತಾ ಪಾರ್ಟಿಯ ಅಭ್ಯರ್ಥಿಗಳು ಎರಡೂ ಕ್ಷೇತ್ರಗಳಲ್ಲಿ ನೂರಕ್ಕೆ ನೂರರಷ್ಟು ಗೆಲುವು ಸಾಧಿಸಲಿದ್ದಾರೆ," ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಶಾಸಕ ಜ್ಯೋತಿಗಣೇಶ್, ಜಿಲ್ಲಾ ಬಿಜೆಪಿ ಅಧ್ಯಕ್ಷ ರವಿಶಂಕರ್ ಹೆಬ್ಬಾಕ, ಮುಖಂಡರಾದ ರುದ್ರೇಶ್, ಮೈದಾಳ ಮಂಜುನಾಥ್, ಮರಿಸ್ವಾಮಿ ಹಾಗೂ ಪಕ್ಷದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಚರಂತಿಮಠ ಗೆಲುವೇ ಬಾಗಲಕೋಟೆ ಪ್ರಗತಿಗೆ ಮುನ್ನುಡಿ: ಡಾ. ಮುರುಗೇಶ್ ನಿರಾಣಿ



ಬಾಗಲಕೋಟೆ

ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಕಣ ರಂಗೇರಿದ್ದು, ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಅವರ ಪರವಾಗಿ ಮಾಜಿ ಸಚಿವ ಹಾಗೂ ರಾಜ್ಯ ಬಿಜೆಪಿ ಉಪಾಧ್ಯಕ್ಷ ಡಾ. ಮುರುಗೇಶ್ ಆರ್. ನಿರಾಣಿ ಅವರು ಮಂಗಳವಾರ ಬಿರುಸಿನ ಮತಯಾಚನೆ ನಡೆಸಿದರು.

ನಗರದ ಸೆಕ್ಟರ್ ನಂಬರ್ 27ರಲ್ಲಿ ಮನೆ ಮನೆಗೆ ತೆರಳಿದ ನಿರಾಣಿ ಅವರು, ಕೇಂದ್ರ ಮತ್ತು ರಾಜ್ಯದ ಬಿಜೆಪಿ ಸರ್ಕಾರಗಳು ಜಾರಿಗೆ ತಂದಿದ್ದ ಜನಪರ ಯೋಜನೆಗಳನ್ನು ಸ್ಮರಿಸುತ್ತಾ, ಕಮಲದ ಗುರುತಿಗೆ ಮತ ನೀಡುವಂತೆ ಮನವಿ ಮಾಡಿದರು.

ಪ್ರಚಾರದ ವೇಳೆ ಮಾತನಾಡಿದ ಮುರುಗೇಶ್ ನಿರಾಣಿ, "ಬಾಗಲಕೋಟೆ ಕ್ಷೇತ್ರದ ಸಮಗ್ರ ಪ್ರಗತಿ ಮತ್ತು ಭವಿಷ್ಯಕ್ಕಾಗಿ ವೀರಣ್ಣ ಚರಂತಿಮಠ ಅವರ ಗೆಲುವು ಅನಿವಾರ್ಯವಾಗಿದೆ. ರೈತರು, ಯುವಕರು ಹಾಗೂ ಸಮಾಜದ ಪ್ರತಿಯೊಬ್ಬರ ಏಳಿಗೆಗಾಗಿ ಶ್ರಮಿಸುತ್ತಿರುವ ಅಭಿವೃದ್ಧಿಯ ಹರಿಕಾರ ಚರಂತಿಮಠ ಅವರನ್ನು ಅತಿ ಹೆಚ್ಚಿನ ಬಹುಮತದಿಂದ ಗೆಲ್ಲಿಸಬೇಕು," ಎಂದು ವಿನಂತಿಸಿದರು. ಈ ಸಂದರ್ಭದಲ್ಲಿ ಸಂಸದ ಗೋವಿಂದ ಎಂ. ಕಾರಜೋಳ ಅವರು ಮಾತನಾಡಿ, ಬಿಜೆಪಿ ಸರ್ಕಾರದ ಅವಧಿಯಲ್ಲಿ ಬಾಗಲಕೋಟೆಯಲ್ಲಿ ನಡೆದ ಅಭಿವೃದ್ಧಿ ಕಾರ್ಯಗಳೇ ನಮ್ಮ ಶ್ರೀರಕ್ಷೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಪ್ರಚಾರದ ಉದ್ದಕ್ಕೂ ಕಾರ್ಯಕರ್ತರು ಘೋಷಣೆಗಳನ್ನು ಕೂಗುವ ಮೂಲಕ ಮತದಾರರ ಗಮನ ಸೆಳೆದರು. ಕಾರ್ಯಕ್ರಮದಲ್ಲಿ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ, ಪ್ರಮುಖರಾದ ಯಲಪ್ಪ ಬೆಂಡಿಗೇರಿ, ರಾಜು ರೇವನಕರ್, ವಕೀಲರಾದ ಟವಳಿ ಸೇರಿದಂತೆ ಸ್ಥಳೀಯ ಮುಖಂಡರು ಹಾಗೂ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

# 100 ಹಳ್ಳಿಗಳಲ್ಲಿ ನೀರಿಗೆ ತತ್ವಾರ; ಬಡಾವಣೆಗಳಿಗೆ 2 ದಿನಕ್ಕೊಮ್ಮೆ ನೀರು ಪೂರೈಸಲು ಸೂಚನೆ



ತುಮಕೂರು

ಮಾರ್ಚ್ 15ರ ನಂತರ ಜಿಲ್ಲೆಯಲ್ಲಿ ತೀವ್ರ ಬೇಸಿಗೆ ಆರಂಭವಾಗಿದ್ದು, ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ 100 ಹಳ್ಳಿಗಳಿಗೆ ತಕ್ಷಣವೇ ಪರ್ಯಾಯ ವ್ಯವಸ್ಥೆ ಕಲ್ಪಿಸುವಂತೆ ಗೃಹ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ನಗರದ ಸ್ಮಾರ್ಟ್ ಸಿಟಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಾವಗಡ ಹೊರತುಪಡಿಸಿ ಜಿಲ್ಲೆಯ ಉಳಿದೆಲ್ಲಾ ತಾಲೂಕುಗಳ ಆಯ್ದ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಗುರುತಿಸಲಾಗಿದೆ ಎಂದು ತಿಳಿಸಿದರು.

**ನೀರಿನ ಸಮಸ್ಯೆ ನೀಗಿಸಲು ಚತುರ್ಮುಖ ಯೋಜನೆ:** ನೀರಿನ ತತ್ವಾರವಿರುವ ಗ್ರಾಮಗಳಲ್ಲಿ ಮೊದಲ ಹಂತವಾಗಿ ಟ್ಯಾಂಕರ್ ಮೂಲಕ, ಎರಡನೇ ಹಂತದಲ್ಲಿ ಖಾಸಗಿ ಬೋರ್‌ವೆಲ್‌ಗಳ ಬಾಡಿಗೆ ಮೂಲಕ ಹಾಗೂ ಮೂರನೇ ಹಂತದಲ್ಲಿ ಸಮೀಪದ ಮೂಲಗಳಿಂದ ನೀರು ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗಿದೆ. ಈ ಮೂರೂ ಸಾಧ್ಯವಾಗದಿದ್ದಲ್ಲಿ ಹೊಸದಾಗಿ ಬೋರ್‌ವೆಲ್ ಕೊರೆಸಲು ಜಿಲ್ಲಾಧಿಕಾರಿಗಳು ಅಥವಾ ಜಿಪಂ ಸಿಇಒ ಅವರು ತಕ್ಷಣ ಅನುಮತಿ ನೀಡಬೇಕು. ಬೆಸ್ಕಾಂ ಅಧಿಕಾರಿಗಳು ವಿಳಂಬ ಮಾಡದೆ ವಿದ್ಯುತ್ ಸಂಪರ್ಕ ಕಲ್ಪಿಸಬೇಕು ಎಂದು ಸಚಿವರು ನಿರ್ದೇಶಿಸಿದರು.

**ಅಂತರ್ಜಲ ಕುಸಿತದ ಬಗ್ಗೆ ಭೂವಿಜ್ಞಾನ ವರದಿ:** "ಭಾರತೀಯ ಭೂವಿಜ್ಞಾನ ಸಮೀಕ್ಷೆ ವರದಿ ಪ್ರಕಾರ, ತುಮಕೂರು ಜಿಲ್ಲೆಯ ಭೂಭಾಗದ ತಳದಲ್ಲಿ ಗ್ರಾನೈಟ್ ಪದರ ಇರುವುದರಿಂದ ಅಂತರ್ಜಲ ಮಟ್ಟ ವೇಗವಾಗಿ ಕುಸಿಯುತ್ತಿದೆ. ಕೋಲಾರ ಮತ್ತು ತುಮಕೂರು ಜಿಲ್ಲೆಗಳಲ್ಲಿ ನೀರಿನ ಅತಿಹೆಚ್ಚು ಶೋಷಣೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಅಂತರ್ಜಲ ವೃದ್ಧಿಗೆ ಶಾಶ್ವತ ಯೋಜನೆಗಳನ್ನು ರೂಪಿಸುವುದು ಅನಿವಾರ್ಯವಾಗಿದೆ," ಎಂದು ಸಚಿವರು ಆತಂಕ ವ್ಯಕ್ತಪಡಿಸಿದರು.

**ಹೇಮಾವತಿ ನೀರಿಗಾಗಿ ಹಾಸನ ಸಚಿವರೊಂದಿಗೆ ಚರ್ಚೆ:** ತುಮಕೂರು ನಗರದ ನೀರಿನ ಮೂಲವಾದ ಬುಗುಡನಹಳ್ಳಿ ಕೆರೆಗೆ ಕನಿಷ್ಠ 2 ಟಿಎಂಸಿ ಹೇಮಾವತಿ ನೀರು ಹರಿಸುವಂತೆ ಹಾಸನ ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಮಾತುಕತೆ ನಡೆಸಲಾಗಿದೆ. ಜಿಲ್ಲಾಡಳಿತದ ವತಿಯಿಂದಲೂ ಸರ್ಕಾರಕ್ಕೆ ಈ ಕುರಿತು ಶೀಘ್ರವೇ ಮನವಿ ಸಲ್ಲಿಸಲಾಗುವುದು ಎಂದರು.

**ಶಿರಾ ಭಾಗದಲ್ಲಿ ಆಲಿಕಲ್ಲು ಮಳೆ ಬೆಳೆ ನಷ್ಟದ ಭೀತಿ:** ಮಾರ್ಚ್ 17ರಂದು ಶಿರಾದಲ್ಲಿ ಸುರಿದ ಭಾರಿ ಆಲಿಕಲ್ಲು ಮಳೆಯಿಂದ ಸುಮಾರು 4 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ದಾಳಿಂಬೆ, ಅಡಿಕೆ ಹಾಗೂ ರೇಷ್ಮೆ ಬೆಳೆ ನಷ್ಟವಾಗಿದೆ. ಸಂಕಷ್ಟಕ್ಕೀಡಾದ ರೈತರಿಗೆ ಬೆಳೆ ವಿಮೆ ಹಾಗೂ ವಿಪತ್ತು ನಿರ್ವಹಣಾ ನಿಧಿಯಿಂದ ಪರಿಹಾರ ಕೊಡಿಸಲು ಕ್ರಮ ಕೈಗೊಳ್ಳಲಾಗುವುದು. ರೈತರು ಯಾವುದೇ ಕಾರಣಕ್ಕೂ ಧೃತಿಗೆಡಬಾರದು ಎಂದು ಸಚಿವರು ಧೈರ್ಯ ತುಂಬಿದರು.

ಇತರೆ ಪ್ರಮುಖಾಂಶಗಳು:

**ಕಾಡ್ಗಿಚ್ಚು ನಿಯಂತ್ರಣ:** ಏಪ್ರಿಲ್–ಮೇ ತಿಂಗಳಲ್ಲಿ ಕಾಡ್ಗಿಚ್ಚು ತಡೆಗೆ ಅಗ್ನಿಶಾಮಕ ದಳದಿಂದ ತೀವ್ರ ನಿಗಾ.

**ಚಿರತೆ ಕಾಟ:** ಜಿಲ್ಲೆಯಲ್ಲಿ ಚಿರತೆ ಹಾವಳಿ ಹೆಚ್ಚಿರುವ ಕಡೆ ಬೋನುಗಳ ದಾಸ್ತಾನು ಇಟ್ಟುಕೊಳ್ಳಲು ಸೂಚನೆ.

**ವಸತಿ ಹಂಚಿಕೆ:** ಕೊಳಚೆ ನಿರ್ಮೂಲನಾ ಮಂಡಳಿಯಿಂದ ನಿರ್ಮಿಸಲಾದ 1800 ಮನೆಗಳನ್ನು ಶೀಘ್ರವೇ ಬಡವರಿಗೆ ಹಂಚಿಕೆ.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮತ್ತು ಜಿಲ್ಲಾ ಪಂಚಾಯತ್ ಸಿಇಒ ಬಿ.ವಿ. ಅಶ್ವಿಜ ಉಪಸ್ಥಿತರಿದ್ದರು.



ಶ್ರೀರಾಮನವಮಿ ಪ್ರಯುಕ್ತ ಕೋಲಾರ ತಾಲೂಕಿನ ಯಾನಾದಹಳ್ಳಿ ಗ್ರಾಮದಲ್ಲಿ ಶ್ರೀರಾಮಕೋಟಿ ಭಜನಾ ಕಾರ್ಯಕ್ರಮವು ಗ್ರಾಮಸ್ಥರ ಸಹಕಾರದೊಂದಿಗೆ ಶ್ರದ್ಧಾಭಕ್ತಿಗಳಿಂದ ನಡೆಯಿತು. ಗುಟ್ಲೂರು ಗೋಪಾಲಸ್ವಾಮಿಗಳು ರಾಮಕೋಟಿ ಭಜನೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಪೂಜಾ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು. ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ, ರಾಮಕೋಟಿಯ ನಂತರ ಊಟದ ವ್ಯವಸ್ಥೆಯನ್ನು ಮಾಡಲಾಗಿತ್ತು. ಈ ವೇಳೆ ಮುಖಂಡರಾದ ಸಿ.ಬಿ.ವೆಂಕಟೇಪ್ಪ, ಎನ್.ಶಂಕರಪ್ಪ, ನಾರಾಯಣಸ್ವಾಮಿ, ಅಂಗಡಿ ನಾರಾಯಣಸ್ವಾಮಿ, ಶ್ರೀರಾಮ್, ಮಂಜು, ಮುನಿಯಪ್ಪ, ರಘು, ಹರೀಶ್, ಅಂಗಡಿ ವೆಂಕಟೇಶ್, ವೆಂಕಟೇಶಪ್ಪ, ವಿವೇಕ್, ಮನು, ಮಧು, ಅರುಣ್, ಪರಮೇಶ್, ಶಿವಣ್ಣ, ನವೀಶ್, ಗ್ರಾಮದ ಎಲ್ಲಾ ಹಿರಿಯರು, ಕಿರಿಯರು, ಮಹಿಳೆಯರು ಭಾಗವಹಿಸಿದ್ದರು.



ಕೋಲಾರ ತಾಲೂಕಿನ ವಕ್ಕಲೇರಿ ಗ್ರಾಮದ ಶ್ರೀರಾಮ ಮಂದಿರದಲ್ಲಿ ಜಿ.ಪಂ. ಮಾಜಿ ಅಧ್ಯಕ್ಷೆ ಚೌಡೇಶ್ವರಿ ರಾಮು ಹಾಗೂ ರಾಜ್ಯ ಒಕ್ಕಲಿಗ ಸಂಘದ ಮಾಜಿ ನಿರ್ದೇಶಕ ವಕ್ಕಲೇರಿ ರಾಮು ನೇತೃತ್ವದಲ್ಲಿ ಶ್ರೀನಿವಾಸ ಕಲ್ಯಾಣೋತ್ಸವ ನಡೆಯಿತು. ಈ ಸಂದರ್ಭದಲ್ಲಿ ಜಿ.ಪಂ. ಮಾಜಿ ಸದಸ್ಯೆ ಯಶೋಧಮ್ಮ, ಗುತ್ತಿಗೆದಾರ ಯಲಹಂಕ ಚಂದ್ರೇಗೌಡ, ತಾ.ಪಂ. ಮಾಜಿ ಸದಸ್ಯ ರಮೇಶ್ ಗೌಡ, ಸೈನಿಕ್ ಪಬ್ಲಿಕ್ ಶಾಲೆ ಮುಖ್ಯಸ್ಥ ಮುನೇಗೌಡ ಸೇರಿದಂತೆ ಮುಂತಾದವರು ಇದ್ದರು.

## ರೈಲ್ವೆ ನೌಕರರ ವಾರ್ಷಿಕ ಸಭೆ; ನೂತನ ಪದಾಧಿಕಾರಿಗಳ ಪದಗ್ರಹಣ

ಬೆಂಗಳೂರು

ನಗರದ ಖಾಸಗಿ ಹೋಟೆಲ್‌ನಲ್ಲಿ ಭಾನುವಾರ ಆಯೋಜಿಸಲಾಗಿದ್ದ ನೈರುತ್ಯ ರೈಲ್ವೆ ದಿವ್ಯಾಂಗಜನ ವೆಲ್ಫೇರ್ ಅಸೋಸಿಯೇಷನ್‌ನ ವಾರ್ಷಿಕ ಸಾಮಾನ್ಯ ಸಭೆಯು ಅತ್ಯಂತ ಯಶಸ್ವಿಯಾಗಿ ಜರುಗಿತು. ಈ ಸಂದರ್ಭದಲ್ಲಿ ಸಂಘದ ಮುಂದಿನ ಅವಧಿಗೆ ನೂತನ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಯಿತು.

ಅಸೋಸಿಯೇಷನ್‌ನ ಅಧ್ಯಕ್ಷರಾಗಿ ಕಿರಣ್ ಬಿ. ಚಿನ್ನಾ ರಾಥೋಡ್ ಅವರು ಸರ್ವಾನುಮತದಿಂದ ಮತ್ತೊಮ್ಮೆ ಮರು ಆಯ್ಕೆಯಾಗುವ ಮೂಲಕ ಸಂಘದ ಚುಕ್ಕಾಣಿ ಹಿಡಿದಿದ್ದಾರೆ.

**ಪದಾಧಿಕಾರಿಗಳ ಮರು ಆಯ್ಕೆ:** ಸಂಘದ ಪ್ರಧಾನ ಕಾರ್ಯದರ್ಶಿಯಾಗಿ (ಜನರಲ್ ಸೆಕ್ರೆಟರಿ) ಷಣ್ಮುಖಪ್ಪ ಬಿ. ಹಾಗೂ ಖಜಾಂಚಿಯಾಗಿ (ಟ್ರೆಜರರ್) ಎಂ. ಎ. ಅತ್ತಾರ ಅವರು ಮರು ಆಯ್ಕೆಯಾಗಿದ್ದಾರೆ. ಸಂಘದ ಮೇಲೆ ಸದಸ್ಯರು ಇಟ್ಟಿರುವ ನಂಬಿಕೆಯನ್ನು ಉಳಿಸಿಕೊಂಡು, ದಿವ್ಯಾಂಗ ನೌಕರರ ಹಿತರಕ್ಷಣೆಗಾಗಿ ಶ್ರಮಿಸುವುದಾಗಿ ಮರು ಆಯ್ಕೆಯಾದ ಪದಾಧಿಕಾರಿಗಳು ಈ ಸಂದರ್ಭದಲ್ಲಿ ಭರವಸೆ ನೀಡಿದರು.

**ಕ್ಷೇಮಾಭಿವೃದ್ಧಿ ಕುರಿತು ಚರ್ಚೆ:** ಸಭೆಯಲ್ಲಿ ದಿವ್ಯಾಂಗ ನೌಕರರು ಎದುರಿಸುತ್ತಿರುವ ಸವಾಲುಗಳು, ಅವರಿಗೆ ಸಿಗಬೇಕಾದ ಸೌಲಭ್ಯಗಳು ಹಾಗೂ ಸಂಘಟನೆಯ ಮುಂದಿನ ಗುರಿಗಳ ಕುರಿತು ಸುದೀರ್ಘವಾಗಿ ಚರ್ಚಿಸಲಾಯಿತು. ದಿವ್ಯಾಂಗ ನೌಕರರ ಕ್ಷೇಮಾಭಿವೃದ್ಧಿಯೇ ಸಂಘದ ಪ್ರಮುಖ ಆದ್ಯತೆಯಾಗಿದ್ದು, ಮುಂಬರುವ ದಿನಗಳಲ್ಲಿ ಸಂಘಟನೆಯನ್ನು ಇನ್ನಷ್ಟು ಬಲಪಡಿಸಲು ನಿರ್ಧರಿಸಲಾಯಿತು.

ಕಾರ್ಯಕ್ರಮದಲ್ಲಿ ಅಸೋಸಿಯೇಷನ್‌ನ ವಿವಿಧ ವಿಭಾಗಗಳ ಸದಸ್ಯರು ಹಾಗೂ ರೈಲ್ವೆ ಇಲಾಖೆಯ ನೌಕರರು ದೊಡ್ಡ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.



# ಅಂತರ್ ಜಿಲ್ಲಾ ಕುರಿ ಕಳ್ಳರ ಬಂಧನ: ಪೊಲೀಸರಿಂದ ಕುರಿ ಮತ್ತು ಮೇಕೆ ವಶ







ಕೋಲಾರ

ಜಿಲ್ಲಾ ಪೊಲೀಸ್ ಇಲಾಖೆ ವ್ಯಾಪ್ತಿಯ ಶ್ರೀನಿವಾಸಪುರ ಪೊಲೀಸ್ ಠಾಣೆಯ ಪೊಲೀಸರ ಯಶಸ್ವಿ ಕಾರ್ಯಾಚರಣೆಯಿಂದಾಗಿ ಮೂರು ಜನ ಅಂತರ ಜಿಲ್ಲಾ ಕುರಿ ಕಳ್ಳರನ್ನು ಬಂಧಿಸಿ ಸುಮಾರು 3 ಲಕ್ಷ ರೂ ಬೆಲೆಯ 37 ಕುರಿ ಮತ್ತು 2 ಮೇಕೆಗಳನ್ನು ವಶ ಪಡಿಸಿಕೊಳ್ಳಲಾಗಿದೆ.

ಈ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಪ್ರಕಟಣೆ ನೀಡಿದ್ದು, ಶ್ರೀನಿವಾಸಪುರ ಪೊಲೀಸ್ ಠಾಣೆಯಲ್ಲಿ ಮಾರ್ಚ್ 14 ರಂದು ದಾಖಲಾಗಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳಾದ ತುಮಕೂರಿನ ಅಜ್ಜಿಹಳ್ಳಿ ಕೆಂಪರಾಜು ಬಿನ್ ಕುಮಾರ್(22), ಮೇಲೆಕೋಟೆ ಪ್ರಶಾಂತ್ ಬಿನ್ ರಮೇಶ್(20), ಗಟ್ಟಿಗೊಲಹಳ್ಳಿ ಹನುಮಂತ ಬಿನ್ ರಾಮಸ್ವಾಮಿ(24) ಇವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಗೌನಪಲ್ಲಿ ಪೊಲೀಸ್ ಠಾಣೆಯ ಸಹಕಾರದೊಂದಿಗೆ ಕುರಿ, ಮೇಕೆ ಕಳ್ಳತನ ಪ್ರಕರಣಗಳನ್ನು ಕೇವಲ 15 ದಿನಗಳಲ್ಲಿ ಪತ್ತೆಹಚ್ಚುವಲ್ಲಿ ಕೋಲಾರ ಜಿಲ್ಲಾ ಪೊಲೀಸ್ ಇಲಾಖೆ ಮತ್ತೊಂದು ಮಹತ್ವದ ಸಾಧನೆ ಮಾಡಿದೆ ಎಂದು ಪೊಲೀಸ್ ಅಧೀಕ್ಷಕರಾದ ಶ್ರೀಮತಿ ಕನ್ನಿಕಾ ಸಿಕ್ರಿವಾಲ್ ಅವರು ತಿಳಿಸಿದ್ದಾರೆ.

ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ರವಿಶಂಕರ್ ಮತ್ತು ಜಗದೀಶ್ ಅವರ ಸಹಕಾರದೊಂದಿಗೆ ಕು. ಮನಿಷಾ ಸಹಾಯಕ ಪೊಲೀಸ್ ಅಧೀಕ್ಷಕರಾದ ಮುಳಬಾಗಿಲು ಉಪವಿಭಾಗ ಬಿ. ಶಂಕರಾಚಾರ್ ಪಿ.ಐ–ಶ್ರೀನಿವಾಸಪುರ ಪೊಲೀಸ್ ಠಾಣೆ ಹಾಗೂ ಜಯರಾಮ್. ಹೆಚ್., ಸುಬ್ಬಾರೆಡ್ಡಿ ಹಾಗೂ ಸಿಬ್ಬಂದಿಗಳಾದ ನಾಗರಾಜ, ಆನಂದಕುಮಾರ್, ಗುರುಪ್ರಸಾದ್, ಸಂತೋಷಕುಮಾರ್, ಅಂಬರೀಶ್ ಎಂ.ಸಿ. ನಾರಾಯಣಸ್ವಾಮಿ ಗೌನಿಪಲ್ಲಿ ಪೊಲೀಸ್ ಠಾಣೆ ಮತ್ತು ಜಿಲ್ಲಾ ತಾಂತ್ರಿಕ ವಿಭಾಗದ ಮುರಳಿ, ಶ್ರೀನಾಥ್ ರವರುಗಳನ್ನು ಆರೋಪಿಗಳ ಪತ್ತೆಗಾಗಿ ವಿಶೇಷ ತಂಡವನ್ನು ರಚಿಸಲಾಗಿತ್ತು.

ಸುಮಾರು 150ಕ್ಕೂ ಹೆಚ್ಚು ಸಿಸಿ ಕ್ಯಾಮರಗಳನ್ನು ಮತ್ತು ಇಲಾಖೆಯ ಗುಪ್ತ ಮಾಹಿತಿದಾರರ ಸಹಾಯದಿಂದ ಅಂತರ ಜಿಲ್ಲಾ ಕುರಿ ಮತ್ತು ಮೇಕೆ ಕಳ್ಳತನದ ಆರೋಪಿಗಳನ್ನು ಬಂಧಿಸಲಾಗಿದೆ.

# ರೇಣುಕಾ ಎಲ್ಲಮ್ಮ ದೇವಿಯ 87ನೇ ವರ್ಷದ ಅದ್ದೂರಿ ಹಸಿಕರಗ ಮಹೋತ್ಸವ



ವಿಜಯಪುರ

ಪಟ್ಟಣದ ಇತಿಹಾಸ ಪ್ರಸಿದ್ಧ ರೇಣುಕಾಎಲ್ಲಮ್ಮ ದೇವಿಯ 87 ನೇ ವರ್ಷದ ಹಸಿಕರಗ ಮಹೋತ್ಸವವು ಸೋಮವಾರ ರಾತ್ರಿ ವಿಜೃಂಭಣೆಯಿಂದ ನಡೆಯಿತು.

ಉತ್ಸವದ ಅಂಗವಾಗಿ ರೇಣುಕಾಎಲ್ಲಮ್ಮ ದೇವಿಯ ದೇವಾಲಯಕ್ಕೆ ವಿದ್ಯುತ್ ದೀಪಾಲಂಕಾರ ಮಾಡಲಾಗಿತ್ತು. ಮಲ್ಲಿಗೆ ಹೂಗಳಿಂದ ತಯಾರಿಸಿದ್ದ ಹಸಿಕರಗವನ್ನು ಹೊತ್ತ ಕರಗದ ಪೂಜಾರಿ ದೇವರಾಜು ಅವರು, ಪಟ್ಟಣದ ಕೋಲಾರ ಮುಖ್ಯರಸ್ತೆಯ ಬಲಮುರಿ ಗಣಪತಿ ದೇವಾಲಯದಿಂದ ಸಾಗಿದರು.

ಬಲಮುರಿ ಗಣತಿ ದೇವಾಲಯದ ಮುಂಭಾಗದಲ್ಲಿನ ಕಣದಲ್ಲಿ ಬಳೆ ತೊಡಿಸುವ ಮತ್ತು ಪೋತುಲು ರಾಜನನ್ನು ರೇಗಿಸುವಂತಹ ಕಾರ್ಯಕ್ರಮ ನಡೆಯಿತು.

ಹಸಿಕರಗವನ್ನು ಕಂಕುಳಲ್ಲಿ ಹೊತ್ತು, ಕರಗದ ಪೂಜಾರಿ ಸಾಗುತ್ತಿದ್ದರೆ, ಕರಗಕ್ಕೆ ಮಲ್ಲಿಗೆ ಹೂವು ಎಸೆಯುತ್ತ ಗೋವಿಂದಾ, ನಾಮಸ್ಮರಣೆ ಮಾಡುತ್ತಾ, ಸಾಗಿದ ವೀರಕುಮಾರರು ಕರಗವನ್ನು ಹಿಂಬಾಲಿಸಿದರು. ಪಟ್ಟಣದ ಬೀದಿಗಳಲ್ಲಿ ಭಕ್ತರು ಪೂಜೆ ಸಲ್ಲಿಸಿದರು. ವೀರಕುಮಾರರು ಅಲಗು ಸೇವೆ ಮಾಡಿದರು.

ಹಸಿಕರಗಕ್ಕೆ ಪಟ್ಟಣದ ಪ್ರತಿಯೊಂದು ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಮನೆ ಮನೆಗಳಲ್ಲಿ ಮತ್ತು ಇಡೀ ಪಟ್ಟಣದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ಪುರಸಭಾ ಮಾಜಿ ಉಪಾಧ್ಯಕ್ಷ ಎಂ.ಕೇಶವಪ್ಪ, ಕರಗದ ಪೂಜಾರಿ ಹಾಗೂ ಕಸಾಪ ಅಧ್ಯಕ್ಷ ಜೆ.ಎನ್.ಶ್ರೀನಿವಾಸ್, ಎಂ.ಡಿ.ಮಂಜುನಾಥ್, ರಾಮಚಂದ್ರಪ್ಪ, ಡಿ.ಎಂ.ಮುನೀಂದ್ರ, ಪ್ರಕಾಶ್, ಚನ್ನಪ್ಪ, ಕರಗದ ಪೂಜಾರಿ ರಾಮಾಂಜಿನಪ್ಪ, ಜೆ.ಆರ್. ಮುನಿವೀರಣ್ಣ, ಮುನಿವೆಂಕಟರಮಣಪ್ಪ, ಅನಂತ್, ವಹ್ನಿಕುಲದ ಎಲ್ಲಾ ಕುಲಬಂಧುಗಳು ಹಾಗೂ ರೇಣುಕಾಎಲ್ಲಮ್ಮ ದೇವಿಯ ಭಕ್ತಮಂಡಳಿಯವರು ಪಟ್ಟಣದ ಜನತೆ ಹಾಜರಿದ್ದರು.

ಸುತ್ತಮುತ್ತಲಿನ ಗ್ರಾಮಗಳಿಂದ ಸಾವಿರಾರು ಮಂದಿ ಕರಗ ವೀಕ್ಷಣೆಗೆ ಬಂದಿದ್ದರು.

11/04/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಶಾಲಾ-ಕಾಲೇಜುಗಳಲ್ಲಿ ಪೋಕ್ಸೋ ಪ್ರಕರಣಗಳ ಹೆಚ್ಚಳ ಆತಂಕಕಾರಿ: ಎಸ್. ಸೋಮಶೇಖರ್

ದೇವನಹಳ್ಳಿ

ಇತ್ತಿಚಿನ ದಿನಗಳಲ್ಲಿ ಶಾಲಾ ಕಾಲೇಜುಗಳಲ್ಲಿ ಮಕ್ಕಳ ಮೇಲಿನ ದೌರ್ಜನ್ಯ ಜೊತೆಗೆ ಪೋಕ್ಸೋ ಪ್ರಕರಣಗಳು ಹೆಚ್ಚಾಗುತ್ತಿರುವುದು ಆತಂಕಕಾರಿ ಎಂದು ಜಿಲ್ಲಾ ಸತ್ರ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಎಸ್. ಸೋಮಶೇಖರ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬೆಂಗಳೂರು ಗ್ರಾಮಾಂತರ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾಡಳಿತತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣ ಆಯೋಗದ ವತಿಯಿಂದ ಮಕ್ಕಳ ಹಕ್ಕುಗಳ ಕುರಿತು ಹಮ್ಮಿಕೊಳ್ಳಲಾಗಿದ್ದ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪೋಕ್ಸೋ ಕಾಯ್ದೆ– 2012ರ ಪ್ರಕಾರ 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಪ್ರತಿಯೊಬ್ಬ ವ್ಯಕ್ತಿಯನ್ನು 'ಮಗು' ಎಂದು ಪರಿಗಣಿಸಲಾಗುತ್ತದೆ. ಅಪ್ರಾಪ್ತ ಮಕ್ಕಳ ಮೇಲೆ ಲೈಂಗಿಕ ಕಿರುಕುಳ ಮತ್ತು ಅಶ್ಲೀಲವಾಗಿ ವರ್ತಿಸುವುದು ಮಕ್ಕಳ ಹಕ್ಕುಗಳ ಕಾಯ್ದೆ ಪ್ರಕಾರ ಅಪರಾದ ವಾಗುತ್ತದೆ. ಮಕ್ಕಳ ಮೇಲೆ ಸುಮ್ಮನೆ ಮುಟ್ಟುವುದು, ಕೈ ಮಾಡುವುದು, ಅಶ್ಲೀಲಚಿತ್ರಗಳನ್ನ ತೋರಿಸುವುದು ಈ ರೀತಿಯಾಗಿ ಯಾರಾದರು ಅನುಚಿತವಾಗಿ ವರ್ತಿಸಿದರೆ ಅಂತಹವರ ವಿರುದ್ದ ಕ್ರಮ ಜರುಗಿಸಲಾಗುವುದು.




ಮಕ್ಕಳಿಗೆ ದೈಹಿಕವಾಗಿ, ಮಾನಸಿಕವಾಗಿ ಹಿಂಸೆ ಕೊಡುವಂತಿಲ್ಲ. ಶಾಲೆಗಳಲ್ಲಿ ಮಕ್ಕಳ ಮೇಲೆ ಹಲ್ಲೆ, ನಿಂದನೆ, ಮಾನಸಿಕ ಹಿಂಸೆ ಇವೆಲ್ಲವೂ ಅಪರಾಧಗಳೇ. ಶಾಲಾ ಕಾಲೇಜು ಶಿಕ್ಷಕರು, ಆಡಳಿತ ಮಂಡಳಿ ಅಥವಾ ಇತರೆ ಸಿಬ್ಬಂದಿ ಮಕ್ಕಳಿಗೆ ಮಾನಸಿಕ, ದೈಹಿಕ ಕಿರುಕುಳ ನೀಡುವುದು, ಇತ್ತೀಚಿನ ದಿನಗಳಲ್ಲಿ ಲೈಂಗಿಕ ದೌರ್ಜನ್ಯಗಳು ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆ. ಶಿಕ್ಷಣ ಸಂಸ್ಥೆಗಳಲ್ಲಿನ ಚಲನವಲನಗಳನ್ನು ಅಧಿಕಾರಿಗಳು ಪರಿಶೀಲನೆ ನಡೆಸಬೇಕು. ಕಾಲಕಾಲಕ್ಕೆ ಮಕ್ಕಳಿಗೆ ಅರಿವು ಮೂಡಿಸುವ ಕೆಲಸ ಆಗಬೇಕು. ಪೋಷಕರು ಕೂಡ ಮಕ್ಕಳ ಮೇಲೆ ಸದಾ ನಿಗಾ ಇರಲಿ ಎಂದರು.

ಶಿಕ್ಷಕರು ಮತ್ತು ಪೊಲೀಸ್ ಅಧಿಕಾರಿಗಳು ಚೈಲ್ಡ್ ಸೈಕಾಲಜಿ ಮತ್ತು ಚೈಲ್ಡ್ ಡೆವಲಪ್‌ಮೆಂಟ್ ಬಗ್ಗೆ ತಿಳಿದುಕೊಳ್ಳಬೇಕು. ಎಷ್ಟೋ ಮಕ್ಕಳು ತಮ್ಮ ಭಾವನೆಗಳನ್ನ ಇತರರೊಂದಿಗೆ ಹಂಚಿಕೊಳ್ಳಲು ಇಷ್ಟ ಪಡುವುದಿಲ್ಲ. ಅದು ಅವರ ಬೆಳೆದ ವಾತಾವರಣ ಆಗಿರಬಹುದು ಅಥವಾ ಮನೆಯ ಸ್ಥಿತಿ ಆಗಿರಬಹುದು ಅದು ಮಕ್ಕಳ ಮೇಲೆ ಹೆಚ್ಚು ಪರಿಣಾಮ ಬೀರಿರುತ್ತದೆ. ಇಂತಹ ಸಂದರ್ಭದಲ್ಲಿ ಶಿಕ್ಷಕರು ಮಕ್ಕಳ ಮನಸ್ಥಿಯನ್ನು ತಿಳಿದುಕೊಂಡು ಅದನ್ನ ಸರಿಪಡಿಸಬೇಕು ಎಂದು ನಿವೃತ್ತ ನ್ಯಾಯಮೂರ್ತಿಗಳು ತಿಳಿಸಿದರು.

ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ಅವರು ಮಾತನಾಡಿ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಪೋಕ್ಸೊ ಕಾಯ್ದೆಯಡಿ 78 ಪ್ರಕರಣ ದಾಖಲಾಗಿದೆ, 30 ಬಾಲ್ಯ ವಿವಾಹ ಪ್ರಕರಣಗಳ ಪೈಕಿ 8 ಬಾಲ್ಯ ವಿವಾಹ ನಡೆದಿದ್ದು 22 ತಡೆಯಲಾಗಿದೆ, 8 ಪ್ರಕರಣಗಳ ಮೇಲೆ ಎಫ್‌ಐಆರ್ ದಾಖಲು ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ಮಕ್ಕಳಿಗೆ ಪ್ರೀತಿ, ರಕ್ಷಣೆ ಹಾಗೂ ಶಿಕ್ಷಣ ನೀಡಿ ಅಗತ್ಯತೆ ಈಡೇರಿಸುವುದು ಸರ್ಕಾರ, ಸಮಾಜ ಹಾಗೂ ಪ್ರತಿಯೊಬ್ಬರ ಕರ್ತವ್ಯವಾಗಿದೆ. ಬಾಲಕಾರ್ಮಿಕ ಮಕ್ಕಳನ್ನು ದುಡಿಯುವ ಯಂತ್ರಗಳನ್ನಾಗಿ ಮಾಡಿಕೊಂಡು ಅವರ ಕನಸುಗಳನ್ನು ಛಿದ್ರ ಮಾಡುತ್ತಿದೆ. ಇದನ್ನೆಲ್ಲಾ ವಿರೋಧಿಸಿ ಮಕ್ಕಳನ್ನು ರಕ್ಷಿಸಿ ಬಾಲ್ಯಾವಸ್ಥೆಯಲ್ಲಿ ಶಿಕ್ಷಣ ನೀಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು.


ಮಕ್ಕಳ ಮೇಲಿನ ದೌರ್ಜನ್ಯಗಳು ಕಂಡು ಬಂದಲ್ಲಿ ದೂರವಾಣಿ ಸಂಖ್ಯೆ 112 ಅಥವಾ ಚೈಲ್ಡ್‌ಲೈನ್ 1098ಗೆ ಉಚಿತ ದೂರವಾಣಿ ಕರೆ ಮಾಡಿ ದೂರು ನೀಡಿ ಅಥವಾ ಜಿಲ್ಲಾ ಮಕ್ಕಳ ರಕ್ಷಣಾ ಘಟಕ 0034 ಗೆ ಕರೆ ಮಾಡಿ ಮಕ್ಕಳ ರಕ್ಷಣೆಗೆ ಸಹಕಾರ ನೀಡಬಹುದಾಗಿದೆ.

ಈ ಕಾರ್ಯಾಗಾರದಲ್ಲಿ ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಅಧ್ಯಕ್ಷೆ ಚಿತ್ರಕಲಾ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಅನಿತಾ ಲಕ್ಷ್ಮೀ ಸಾಮಾಜ ಕಲ್ಯಾಣ ಉಪ ನಿರ್ದೇಶಕರು ಪ್ರೇಮ, ರೋಹಿತ್ ಸಿ.ಜಿ. ಪೊಲೀಸ್ ತರಬೇತುದಾರರು, ಎಸ್.ಜೆ.ಪಿ.ಯು–ಸಿ.ಐ.ಡಿ ಬೆಂಗಳೂರು, ಶಿಕ್ಷಣ ಇಲಾಖೆ ಅಧಿಕಾರಿ ಪದ್ಮವತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಿಬ್ಬಂದಿ, ಪೊಲೀಸ್ ಇಲಾಖೆಯ ಅಧಿಕಾರಿಗಳು, ಜಿಲ್ಲಾಮಟ್ಟದ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಮಾವು ಬೆಳೆಗಾರರ ವಿಮಾ ಯೋಜನೆ ಮರು ವಿನ್ಯಾಸಕ್ಕೆ ಡಿಸಿ ಸೂಚನೆ

ರಾಮನಗರ

"ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆಯಾದ ಮಾವು ಬೆಳೆಗಾರರು ಹವಾಮಾನ ವೈಪರೀತ್ಯದಿಂದ ನಷ್ಟ ಅನುಭವಿಸದಂತೆ ತಡೆಯಲು, ಹವಾಮಾನ ಆಧಾರಿತ ಮಾವು ಬೆಳೆ ವಿಮಾ ಯೋಜನೆಯನ್ನು ಮತ್ತಷ್ಟು ರೈತಸ್ನೇಹಿಯಾಗಿ ರೂಪಿಸಲಾಗುವುದು," ಎಂದು ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ತಿಳಿಸಿದರು.



ಇತ್ತೀಚೆಗೆ ತೋಟಗಾರಿಕೆ ಇಲಾಖೆ ಅಧಿಕಾರಿಗಳು, ವಿಜ್ಞಾನಿಗಳು ಹಾಗೂ ತಾಂತ್ರಿಕ ಸಮಿತಿ ಸದಸ್ಯರೊಂದಿಗೆ ನಡೆಸಿದ ಜಿಲ್ಲಾ ಮಟ್ಟದ ಸಭೆಯಲ್ಲಿ ಅವರು ಈ ವಿಷಯ ತಿಳಿಸಿದರು. ಮಾವು ಬೆಳೆಗಾರರು ಅಕಾಲಿಕ ಮಳೆ, ಬಿರುಗಾಳಿ ಹಾಗೂ ರೋಗಬಾಧೆಯಿಂದ ಸಂಕಷ್ಟಕ್ಕೆ ಸಿಲುಕಿದಾಗ ಸೂಕ್ತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

**ಟರ್ಮ್ ಶೀಟ್ ಮರು ವಿನ್ಯಾಸಕ್ಕೆ ಆದೇಶ:** ಕಳೆದ 2023–24ರಿಂದ 2025–26ನೇ ಸಾಲಿನವರೆಗಿನ ವಿಮಾ ಯೋಜನೆಯಡಿ ರೈತರಿಗೆ ದೊರೆತಿರುವ ಪರಿಹಾರದ ಮೊತ್ತ ಹಾಗೂ ವಿಪತ್ತು ವಿಶ್ಲೇಷಣಾ ಪತ್ರದ (ಟರ್ಮ್ ಶೀಟ್) ಅಂಶಗಳನ್ನು ಸಭೆಯಲ್ಲಿ ವಿವರವಾಗಿ ಚರ್ಚಿಸಲಾಯಿತು. ಮುಂದಿನ 2026–27, 2027–28 ಮತ್ತು 2028–29ನೇ ಸಾಲಿನ ಅವಧಿಗೆ ಹೊಸ ಟರ್ಮ್ ಶೀಟ್ ಸಿದ್ಧಪಡಿಸುವ ಮುನ್ನ, ರೈತ ಮುಖಂಡರ ಅಭಿಪ್ರಾಯಗಳನ್ನು ಗಣನೆಗೆ ತೆಗೆದುಕೊಳ್ಳುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

**ರೈತರಿಗೆ ಹೆಚ್ಚಿನ ಲಾಭದ ಗುರಿ:** ಜಿಲ್ಲೆಯ 127 ಗ್ರಾಮ ಪಂಚಾಯಿತಿಗಳು ಹಾಗೂ 2 ಸ್ಥಳೀಯ ಸಂಸ್ಥೆಗಳ ವಿಮಾ ಘಟಕಗಳಲ್ಲಿನ ಹಾನಿಯ ಪ್ರಮಾಣ ಮತ್ತು ದೊರೆಯುತ್ತಿರುವ ಪರಿಹಾರವನ್ನು ತುಲನೆ ಮಾಡಿದ ಡಿಸಿ, ಮುಂಬರುವ ವರ್ಷಗಳಲ್ಲಿ ರೈತರಿಗೆ ಕಳೆದ ಬಾರಿಗಿಂತ ಹೆಚ್ಚಿನ ಪರಿಹಾರ ಮೊತ್ತ ಲಭಿಸುವಂತೆ ಯೋಜನೆಯನ್ನು ಮರು ವಿನ್ಯಾಸಗೊಳಿಸಲು ತೋಟಗಾರಿಕೆ ಜಂಟಿ ನಿರ್ದೇಶಕರಿಗೆ ನಿರ್ದೇಶನ ನೀಡಿದರು.

ಅಗತ್ಯ ಮಾರ್ಪಾಡುಗಳೊಂದಿಗೆ ಸಿದ್ಧಪಡಿಸಲಾದ ಹೊಸ ಟರ್ಮ್ ಶೀಟ್ ಅನ್ನು ಜಿಲ್ಲಾಧಿಕಾರಿಗಳಿಂದ ದೃಢೀಕರಿಸಿ, ಮುಂದಿನ ಕ್ರಮಕ್ಕಾಗಿ ತೋಟಗಾರಿಕೆ ಇಲಾಖೆಯ 'ಹಾರ್ಟಿಕಲ್ಚರ್ ಇ–ಗವರ್ನನ್ಸ್' ವಿಭಾಗಕ್ಕೆ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾ ತೋಟಗಾರಿಕೆ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

## ಮುಂಬರುವ ಚುನಾವಣೆಗಳಿಗೆ ಜೆಡಿಎಸ್ ಭರ್ಜರಿ ಸಿದ್ಧತೆ: ಬೂತ್ ಮಟ್ಟದಲ್ಲಿ ಪಕ್ಷ ಸಂಘಟನೆಗೆ ನಟರಾಜ್ ಕರೆ

ಕೋಲಾರ



"ಮುಂಬರುವ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆಗಳ ಹಿನ್ನೆಲೆಯಲ್ಲಿ ಜೆಡಿಎಸ್ ಪಕ್ಷದ ಕಾರ್ಯಕರ್ತರು ಮತ್ತು ಮುಖಂಡರು ಬೂತ್ ಮಟ್ಟದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವನ್ನು ಜಾಗರೂಕತೆಯಿಂದ ಕೈಗೊಂಡು ಪಕ್ಷ ಸಂಘಟನೆಗೆ ಒತ್ತು ನೀಡಬೇಕು," ಎಂದು ಜೆಡಿಎಸ್ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ ಬಣಕನಹಳ್ಳಿ ನಟರಾಜ್ ಮನವಿ ಮಾಡಿದರು.

ಪಕ್ಷದ ರಾಜ್ಯ ಘಟಕದ ಆದೇಶದಂತೆ ಜಿಲ್ಲೆಯ ಪ್ರತಿಯೊಂದು ವಿಧಾನಸಭಾ ಕ್ಷೇತ್ರದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ನಡೆಯುತ್ತಿದೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಾರ್ಯಕರ್ತರು ವಹಿಸಬೇಕಾದ ಜವಾಬ್ದಾರಿಗಳ ಬಗ್ಗೆ ಸವಿಸ್ತಾರವಾಗಿ ವಿವರಿಸಿದ್ದಾರೆ.

**ಕಾರ್ಯಕರ್ತರಿಗೆ ಪ್ರಮುಖ ಸೂಚನೆಗಳು:**

**ಹೊಸ ಸೇರ್ಪಡೆ:** ಅರ್ಹ ಯುವ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಹೊಸ ಹೆಸರುಗಳನ್ನು ಸೇರ್ಪಡೆ ಮಾಡಿಸುವುದು.

**ತಿದ್ದುಪಡಿ:** ಮತದಾರರ ಪಟ್ಟಿಯಲ್ಲಿರುವ ತಾಂತ್ರಿಕ ದೋಷಗಳು ಅಥವಾ ವಿಳಾಸದ ತಿದ್ದುಪಡಿಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡುವುದು.

ರಾಜ್ಯ ಘಟಕದ ಆದೇಶವನ್ನು ಪ್ರತಿಯೊಬ್ಬರೂ ಕಟ್ಟುನಿಟ್ಟಾಗಿ ಪಾಲಿಸಬೇಕು," ಎಂದು ನಟರಾಜ್ ತಿಳಿಸಿದರು.

## ಧರ್ಮ ರಕ್ಷಣೆಗಾಗಿ ಉದಿಸಿದ ಮಹಾಪುರುಷ ಅಗ್ನಿ ಬನ್ನಿರಾಯಸ್ವಾಮಿ: ತಹಶೀಲ್ದಾರ್

ದೇವನಹಳ್ಳಿ

"ಅಗ್ನಿ ಬನ್ನಿರಾಯಸ್ವಾಮಿಯವರ ಸಿದ್ಧಾಂತಗಳು ಎಂದೆಂದಿಗೂ ಅಜರಾಮರ. ಧರ್ಮ ಸಂಸ್ಥಾಪನೆಗಾಗಿ ಯಜ್ಞಕುಂಡದಿಂದ ಉದಿಸಿದ ಅವರ ಜೀವನ ಮತ್ತು ವಿಚಾರಧಾರೆಗಳು ಕೇವಲ ಒಂದು ಸಮುದಾಯಕ್ಕೆ ಸೀಮಿತವಾಗಿಲ್ಲ, ಬದಲಿಗೆ ಇಡೀ ಸಮಾಜಕ್ಕೆ ಅನ್ವಯವಾಗುವ ಅಮೂಲ್ಯ ವರದಾನಗಳಾಗಿವೆ," ಎಂದು ತಹಶೀಲ್ದಾರ್ ಎಂ. ಅನಿಲ್ ಕುಮಾರ್ ಅಭಿಪ್ರಾಯಪಟ್ಟರು.



ನಗರದ ಬಿ.ವಿ. ರಸ್ತೆಯಲ್ಲಿರುವ ತಾಲೂಕು ಆಡಳಿತ ಸೌಧದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ 'ಅಗ್ನಿವಂಶ ಕ್ಷತ್ರಿಯ ಅಗ್ನಿ ಬನ್ನಿರಾಯಸ್ವಾಮಿ ಜಯಂತೋತ್ಸವ' ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು. ತಾಲೂಕು ಆಡಳಿತ ಹಾಗೂ ತಾಲೂಕು ಪಂಚಾಯಿತಿ ವತಿಯಿಂದ ಆಯೋಜಿಸಲಾಗಿದ್ದ ಈ ಸಮಾರಂಭದಲ್ಲಿ ಬನ್ನಿರಾಯಸ್ವಾಮಿಯವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಗೌರವ ಸಮರ್ಪಿಸಲಾಯಿತು.

ಬನ್ನಿರಾಯಸ್ವಾಮಿಯವರ ಮಹಿಮೆಯನ್ನು ಸ್ಮರಿಸಿದ ತಹಶೀಲ್ದಾರ್, "ಅನಾದಿಕಾಲದಲ್ಲಿ ಋಷಿಮುನಿಗಳ ಯಾಗಗಳಿಗೆ ದುಷ್ಟಶಕ್ತಿಗಳು ಅಡ್ಡಿಪಡಿಸುತ್ತಿದ್ದಾಗ, ಅವರನ್ನು ಸಂಹರಿಸಲು ಅಗ್ನಿಯಿಂದ ಜನಿಸಿದವರೇ ಈ ಮಹಾಪುರುಷ. ವಾತಾಪಿ ಎಂಬ ರಾಕ್ಷಸನ ಅಟ್ಟಹಾಸದಿಂದ ದೇವಲೋಕವನ್ನು ರಕ್ಷಿಸಲು ಶಿವನ ತ್ರಿನೇತ್ರದ ಪ್ರಭೆಯಿಂದ ಇವರು ಉದಯಿಸಿದರೆಂಬ ನಂಬಿಕೆ ಇದೆ. ಇಂದಿನ ಪೀಳಿಗೆ ಇಂತಹ ಇತಿಹಾಸಗಳನ್ನು ಮನನ ಮಾಡಿಕೊಳ್ಳಬೇಕು," ಎಂದರು.

ತಿಗಳ ಸಮುದಾಯದ ಬಗ್ಗೆ ಮಾತನಾಡಿದ ಅವರು, "ತಿಗಳ ಸಮುದಾಯವು ಸಾವಿರಾರು ವರ್ಷಗಳ ಇತಿಹಾಸವಿರುವ ಸಮುದಾಯ. ಕೃಷಿ ಮತ್ತು ತೋಟಗಾರಿಕೆಯನ್ನು ಪ್ರಮುಖ ಕಾಯಕವಾಗಿಸಿಕೊಂಡಿರುವ ಇವರು, ಅತ್ಯಂತ ಸರಳ ಮತ್ತು ನಿಷ್ಠಾವಂತರು. ಅಲ್ಪ ಜಮೀನಿನಲ್ಲೇ ತರಕಾರಿ, ಹಣ್ಣುಗಳನ್ನು ಬೆಳೆದು ಸಮಾಜದ ಆರೋಗ್ಯ ಕಾಪಾಡುವಲ್ಲಿ ತಮ್ಮದೇ ಆದ ಕೊಡುಗೆ ನೀಡುತ್ತಿದ್ದಾರೆ. ಆದರೆ, ಶೈಕ್ಷಣಿಕವಾಗಿ ಮತ್ತು ಆರ್ಥಿಕವಾಗಿ ಈ ಸಮುದಾಯ ಇನ್ನೂ ಹಿಂದುಳಿದಿದ್ದು, ಇವರ ಪ್ರಗತಿಗಾಗಿ ಪಠ್ಯಪುಸ್ತಕಗಳಲ್ಲಿ ಮಹನೀಯರ ಇತಿಹಾಸವನ್ನು ಸೇರಿಸುವ ಅಗತ್ಯವಿದೆ," ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಶಿರಸ್ತೇದಾರ್ ಸಂತೋಷ್, ಸಾಗರ್, ವಿಷಯ ನಿರ್ವಾಹಕ ಶ್ರೀನಿವಾಸ ಪ್ರಸಾದ್, ಸಿಬ್ಬಂದಿ ವರ್ಗ ಮತ್ತು ಸಮುದಾಯದ ಪ್ರಮುಖ ಮುಖಂಡರು ಉಪಸ್ಥಿತರಿದ್ದರು.

## ಬೆಳಗಾನಹಳ್ಳಿ ಹಾಲು ಉತ್ಪಾದಕರ ಸಂಘಕ್ಕೆ ನೂತನ ಅಧ್ಯಕ್ಷರ ಆಯ್ಕೆ

ಕೋಲಾರ

ತಾಲೂಕಿನ ಬೆಳಗಾನಹಳ್ಳಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ (ಡೈರಿ) ಮುಂದಿನ ಐದು ವರ್ಷಗಳ ಅವಧಿಯ ಆಡಳಿತ ಮಂಡಳಿಗೆ ನಡೆದ ಚುನಾವಣೆಯಲ್ಲಿ, ಅಧ್ಯಕ್ಷರಾಗಿ ಬಿ.ಎಂ. ಶ್ರೀನಿವಾಸ್ ಹಾಗೂ ಉಪಾಧ್ಯಕ್ಷರಾಗಿ ಭಾಗ್ಯಮ್ಮ ಗೋಪಾಲಪ್ಪ ಆಯ್ಕೆಯಾಗಿದ್ದಾರೆ.



ಮಂಗಳವಾರ ನಡೆದ ಸಂಘದ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನದ ಚುನಾವಣೆಯಲ್ಲಿ ತೀವ್ರ ಕುತೂಹಲ ಮೂಡಿಸಿತ್ತು. ಅಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಬಿ.ಎಂ. ಶ್ರೀನಿವಾಸ್ ಅವರು ಒಟ್ಟು 9 ಮತಗಳನ್ನು ಪಡೆಯುವ ಮೂಲಕ ಭರ್ಜರಿ ಜಯ ದಾಖಲಿಸಿದರು. ಇವರ ಪ್ರತಿಸ್ಪರ್ಧಿಯಾಗಿದ್ದ ದೇವರಾಜ್ ಹಾಗೂ ವೆಂಕಟಮುನಿಯಪ್ಪ ಅವರ ಬೆಂಬಲಿತ ಅಭ್ಯರ್ಥಿ ಬಿ.ಎನ್. ಪ್ರವೀಣ್ ಕುಮಾರ್ ಕೇವಲ 3 ಮತಗಳನ್ನು ಪಡೆದು ಸೋಲು ಅನುಭವಿಸಿದರು.

ಇನ್ನು ಉಪಾಧ್ಯಕ್ಷ ಸ್ಥಾನಕ್ಕೆ ಭಾಗ್ಯಮ್ಮ ಗೋಪಾಲಪ್ಪ ಅವರು ಮಾತ್ರ ನಾಮಪತ್ರ ಸಲ್ಲಿಸಿದ್ದರಿಂದ, ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ವೆಂಕಟೇಶ್ ಬಾಬು ಅಧಿಕೃತವಾಗಿ ಘೋಷಿಸಿದರು.

ನೂತನ ಪದಾಧಿಕಾರಿಗಳನ್ನು ಸಂಘದ ನಿರ್ದೇಶಕರು ಹಾಗೂ ಗ್ರಾಮದ ಮುಖಂಡರು ಅಭಿನಂದಿಸಿದರು. ಈ ಸಂದರ್ಭದಲ್ಲಿ ನಿರ್ದೇಶಕರುಗಳಾದ ಬಿ.ಕೆ ಮುರಳಿಧರ, ಬಿ.ಟಿ ನಾಗರಾಜ್, ಬಿ.ಕೆ ನಾಗೇಶ್, ಬಿ.ಎನ್ ರಾಜಣ್ಣ, ಶಾಂತಮ್ಮ, ಆಂಜಪ್ಪ, ವೆಂಕಟೇಶ್, ಸುಬ್ರಹ್ಮಣ್ಯ ಆಚಾರಿ ಹಾಜರಿದ್ದರು.

ಈ ಕಾರ್ಯಕ್ರಮದಲ್ಲಿ ಮುಖಂಡರಾದ ಕೋಟೆ ನಾರಾಯಣಸ್ವಾಮಿ ವಿಟ್ಟಪ್ಪನಹಳ್ಳಿ, ಅರಳಕುಂಟೆ ವೆಂಕಟೇಶಪ್ಪ, ಬೆಳಗಾನಹಳ್ಳಿ ಮಂಜುನಾಥ್ (BMTC), ತಿಮ್ಮಣ್ಣನವರ ನಂಜುಂಡಪ್ಪ, ಮಾಜಿ ಅಧ್ಯಕ್ಷ ಬಿ.ಕೆ ಸುರೇಶ್, ಪಕ್ಷದ ಮುಖಂಡರಾದ ಬಿ.ಎಂ. ಮುನೇಂದ್ರ, ಬಿ.ಎಂ. ರಮೇಶ್, ಹೊಳಲಿ ಚಲಪತಿ, ಮಲ್ಲಂಡಳ್ಳಿ ನಾಗಭೂಷಣ್‌ಬಾಬು, ಮೇಡಿತಂಬಹಳ್ಳಿ ರಮೇಶ್ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದು ಹೂಗುಚ್ಛ ನೀಡಿ ಶುಭ ಕೋರಿದರು.

## ಕೋಮುಲ್ ನಿರ್ದೇಶಕರಿಂದ ಅಪಮಾನ: ಎಸ್.ಎನ್.ನಾರಾಯಣಸ್ವಾಮಿ

ಕೋಲಾರ



ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿ ನಿರ್ಮಿಸಲು ಜಿಲ್ಲಾಡಳಿತದಿಂದ ದೇಣಿಗೆ ಕೋರಿ ಜಿಲ್ಲಾಧಿಕಾರಿ ಎಂ.ಆರ್.ರವಿ ಅವರು ಕೋಮುಲ್‌ಗೆ ಪತ್ರ ಬರೆದಿದ್ದರು. ಇದಕ್ಕೆ ಕೆಲ ನಿರ್ದೇಶಕರು ಆಕ್ಷೇಪ ವ್ಯಕ್ತಪಡಿಸುವ ಮೂಲಕ ಅಪಮಾನ ಮಾಡಿದ್ದಾರೆ ಎಂದು ಒಕ್ಕೂಟದ ನಿರ್ದೇಶಕರೂ ಆಗಿರುವ ಶಾಸಕ ಎಸ್.ಎನ್.ನಾರಾಯಣಸ್ವಾಮಿ ಹೇಳಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೋಲಾರ ಜಿಲ್ಲಾಡಳಿತ ಭವನದ ಆವರಣದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿ ನಿರ್ಮಾಣಕ್ಕಾಗಿ ಕೋಮುಲ್ ನಿಂದ 15 ಲಕ್ಷ ರೂ. ನೀಡಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಹೀಗಾಗಿ ಸಭೆಯಿಂದ ಹೊರ ಬಂದೆ ಎಂದ ಅವರು, ಅಯವ್ಯಯ ಸಭೆಯಲ್ಲಿ ವಿಚಾರ ಪ್ರಸ್ತಾಪಕ್ಕೆ ಬಂದಾಗ ಎಲ್ಲಾ ಕಡೆ ಕೇಳುತ್ತಾರೆ. ಕೊಡಲು ಸಾಧ್ಯವೇ..?, ಇದಕ್ಕೆ ಹಣ ಕೊಡಲು ಬರುವುದಿಲ್ಲ ಎಂಬುದಾಗಿ ಮುಳಬಾಗಿಲು ನಿರ್ದೇಶಕ ಕಾಡೇನಹಳ್ಳಿ ನಾಗರಾಜ್ ವಿರೋಧಿಸಿದ್ದಾರೆ. ಇದಕ್ಕೆ ಮಾಲೂರು ನಿರ್ದೇಶಕ ಶ್ರೀನಿವಾಸ್ ಧ್ವನಿಗೂಡಿಸಿದ್ದಾರೆ. ಅಂಬೇಡ್ಕರ್ ಪುತ್ಥಳಿಗೂ ದೇಣಿಗೆ ಕೊಡಬೇಕೇ? ಎಂದು ಪ್ರಶ್ನಿಸಿ ಅವಹೇಳನ ಮಾಡಿದ್ದಾರೆ ಎಂದು ಕಿಡಿಕಾರಿದರು.

ವಾರ್ಷಿಕವಾಗಿ 1,400 ಕೋಟಿ ವ್ಯವಹಾರ ಮಾಡುವ ಹಾಗೂ ವಾರ್ಷಿಕ 50 ಕೋಟಿ ಲಾಭ ಗಳಿಸುತ್ತಿರುವ ಒಕ್ಕೂಟಕ್ಕೆ ಅಂಬೇಡ್ಕರ್ ಪುತ್ಥಳಿ ನಿರ್ಮಾಣಕ್ಕೆ ರೂ. 15 ಲಕ್ಷ ಕೊಡಲು ಆಗುವುದಿಲ್ಲವೇ? ಎಂದು ಪ್ರಶ್ನಿಸಿದ ಅವರು, 10 ಲಕ್ಷ ಕೊಡಬಹುದು ಎಂಬುದಾಗಿ ಅಧ್ಯಕ್ಷ ನಂಜೇಗೌಡರು ಪ್ರಸ್ತಾಪಿಸಿದರು. ಆದರೆ ಬೇರೆ ಯಾವುದಕ್ಕೂ ವೆಚ್ಚ ಮಾಡಿಲ್ಲವೇ? ಎಂದ ಅವರು ನಮ್ಮ ಸಮುದಾಯ ಗಟ್ಟಿಯಾಗಿದೆ, ನಾವೆಲ್ಲಾ ಬದುಕಿದ್ದೇವೆ. ನನ್ನ ವೇತನ ಸೇರಿದಂತೆ ಸ್ವಂತ ಹಣ ನೀಡಿ, ಮುಂದೆ ನಿಂತು ಅಂಬೇಡ್ಕರ್ ಪುತ್ಥಳಿ ನಿರ್ಮಿಸುತ್ತೇನೆ. ಯಾವುದೇ ಕಾರಣಕ್ಕೂ ಕೋಮುಲ್ ದೇಣಿಗೆ ಬೇಡ. ಈಗಾಗಲೇ ಒಕ್ಕೂಟಕ್ಕೆ ಬರೆದಿರುವ ಪತ್ರವನ್ನು ವಾಪಸ್ ಪಡೆಯಲು ಜಿಲ್ಲಾಧಿಕಾರಿಗೆ ಮನವಿ ಮಾಡುತ್ತೇನೆ ಎಂದು ಹೇಳಿದರು.

ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ಎರಡೂ ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಗೆಲುವು ಶೇ.100 ಖಚಿತ. ನಾನು ಕೂಡ ಬುಧವಾರ ಪ್ರಚಾರಕ್ಕೆ ಹೋಗುತ್ತಿದ್ದು, ಐದು ದಿನ ಅಲ್ಲೇ ಇರುತ್ತೇನೆ. ಗ್ಯಾರಂಟಿ ಯೋಜನೆ, ಅಭಿವೃದ್ಧಿ ಕೆಲಸಗಳನ್ನು ಮನವರಿಕೆ ಮಾಡಿಕೊಡುತ್ತೇನೆ ಎಂದು ಎಸ್.ಎನ್.ನಾರಾಯಣಸ್ವಾಮಿ ಉಪ ಚುನಾವಣೆ ಕುರಿತು ಪ್ರತಿಕ್ರಿಯಿಸಿದರು.

ನಾನು ಕೂಡ ಕ್ರಿಕೆಟ್ ಪ್ರೇಮಿ. ನೋಡಲು ಹೋಗಲ್ಲ. ನನಗೆ ಸಿಗುವ ಟಿಕೆಟ್‌ಗಳನ್ನು ಅಭಿಮಾನಿಗಳಿಗೆ ನೀಡುತ್ತೇನೆ. ಅವರು ನೋಡಿ ಆನಂದಿಸಲಿ. ನಾನೇನೂ ಟಿಕೆಟ್‌ಗೆ ಬೇಡಿಕೆ ಇಟ್ಟಿರಲಿಲ್ಲ. ಉಚಿತವಾಗಿ ಕೊಡದಿದ್ದರೂ ಟಿಕೆಟ್ ಖರೀದಿಸಿ ವೀಕ್ಷಿಸುವ ಶಕ್ತಿ ನಮಗಿದೆ ಎಂದು ಐಪಿಎಲ್ ಕ್ರಿಕೆಟ್ ಟಿಕೆಟ್ ಕುರಿತು ಪ್ರತಿಕ್ರಿಯೆ ನೀಡಿದರು.

ಮೋದಿ ಅವರ ಡೋಂಗಿತನಕ್ಕೆ ಜನರು ಬೇಸತ್ತಿದ್ದಾರೆ. ಎಲ್‌ಪಿಜಿ ಸಿಲಿಂಡರ್ ಸಿಗದೆ ಜನರು ಪರದಾಡುತ್ತಿದ್ದಾರೆ. ಅಭಾವ ಸೃಷ್ಟಿ ಮಾಡಿದ್ದು, ಹೋಟೆಲ್?ಗಳು ಮುಚ್ಚಿವೆ. ಜನರೊಂದಿಗೆ ಕೇಂದ್ರ ಸರ್ಕಾರ ಚೆಲ್ಲಾಟವಾಡುತ್ತಿದೆ ಎಂದು ಕೇಂದ್ರ ಸರ್ಕಾರದ ವಿರುದ್ಧ ಗುಡುಗಿದರು.

## ಪಿಂಚಣಿ ಸೌಲಭ್ಯ ಕಡಿತ ವಿರೋಧಿಸಿ ಪ್ರತಿಭಟನೆ

ತಿಪಟೂರು


"ಕೇಂದ್ರ ಸರ್ಕಾರವು ನಿವೃತ್ತ ನೌಕರರಿಗೆ ನೀಡುತ್ತಿದ್ದ ಪಿಂಚಣಿ ಮತ್ತು ದಿನಭತ್ಯೆ ಸೌಲಭ್ಯಗಳನ್ನು ಇನ್ನು ಮುಂದೆ ಪರಿಷ್ಕರಣೆ ಮಾಡದಿರಲು ಕೈಗೊಂಡಿರುವ ನಿರ್ಧಾರ ಅತ್ಯಂತ ಖಂಡನೀಯ ಮತ್ತು ಮಾರಕವಾಗಿದೆ," ಎಂದು ತಾಲೂಕು ನಿವೃತ್ತ ನೌಕರರ ಸಂಘದ ಅಧ್ಯಕ್ಷ ಕೆ.ಎಂ. ರಾಜಣ್ಣ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಆಡಳಿತ ಸೌಧದ ಮುಂಭಾಗದಲ್ಲಿ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಪಾಲ್ಗೊಂಡು, ಹೆಚ್ಚುವರಿ ಶಿರಸ್ತೇದಾರ್ ರವಿಕುಮಾರ್ ಅವರ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿ ಅವರು ಮಾತನಾಡಿದರು.

"ಕೇಂದ್ರ ಸರ್ಕಾರವು ಮೊದಲಿನಿಂದಲೂ ನಿವೃತ್ತ ನೌಕರರನ್ನು ನಿರ್ಲಕ್ಷಿಸುತ್ತಾ ಬಂದಿದೆ. ಈಗ ಜಾರಿಗೆ ತರಲು ಉದ್ದೇಶಿಸಿರುವ ಹೊಸ ನಿರ್ಧಾರವು ನಿವೃತ್ತ ನೌಕರರ ಬದುಕಿಗೆ ಪೆಟ್ಟು ನೀಡಲಿದೆ. ಜೀವನದ ಬಹುಭಾಗವನ್ನು ಸರ್ಕಾರಿ ಸೇವೆಗೆ ಮುಡಿಪಾಗಿಟ್ಟ ನೌಕರರನ್ನು ಗೌರವದಿಂದ ಕಾಣುವ ಬದಲು, ಅವರ ಹಕ್ಕುಗಳನ್ನು ಕಸಿಯಲಾಗುತ್ತಿದೆ," ಎಂದು ಅವರು ದೂರಿದರು.

ಪ್ರಧಾನಮಂತ್ರಿಯವರು ಕೂಡಲೇ ಈ ಆದೇಶವನ್ನು ಕೈಬಿಡಬೇಕು. ನಿವೃತ್ತ ನೌಕರರು, ರೈತರು ಮತ್ತು ಮಧ್ಯಮ ವರ್ಗದ ಜನರ ಹಿತದೃಷ್ಟಿಯಿಂದ ಹಳೆಯ ಸೌಲಭ್ಯಗಳನ್ನು ಮುಂದುವರಿಸಬೇಕು. ನಮ್ಮ ನ್ಯಾಯಸಮ್ಮತ ಬೇಡಿಕೆಗಳನ್ನು ಈಡೇರಿಸುವ ಮೂಲಕ ನಿವೃತ್ತರ ನೆರವಿಗೆ ಬರಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘದ ಪ್ರಮುಖರಾದ ಸೋಮಶೇಖರ್, ಬಸವರಾಜಪ್ಪ ಸೇರಿದಂತೆ ನಿವೃತ್ತ ನೌಕರರ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.




## ದ್ವಿಭಾಷಾ ಸೂತ್ರ ಜಾರಿ ಸ್ವಾಗತಾರ್ಹ: ಕೃಷ್ಣೇಗೌಡ



ಕೋಲಾರ

"ರಾಷ್ಟ್ರಕವಿ ಕುವೆಂಪು ಅವರ ಆಶಯದಂತೆ ಹಾಗೂ ಕನ್ನಡಿಗರ ದಶಕಗಳ ಬೇಡಿಕೆಯಂತೆ ರಾಜ್ಯದಲ್ಲಿ ದ್ವಿಭಾಷಾ ಸೂತ್ರವನ್ನು ಜಾರಿಗೊಳಿಸುವ ನಿರ್ಧಾರ ಕೈಗೊಂಡಿರುವ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರ ನಡೆ ಕನ್ನಡಿಗರು ಹೆಮ್ಮೆ ಪಡುವಂತಹದ್ದು," ಎಂದು ಶ್ರೀ ಕುವೆಂಪು ಕನ್ನಡ ಕಲಾ ಸಂಘದ ಅಧ್ಯಕ್ಷ ಲಕ್ಷ್ಮೀಸಾಗರ ಎಲ್.ಇ ಕೃಷ್ಣೇಗೌಡರು ಶ್ಲಾಘಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, "ಹಿಂದೆ ಮಾಜಿ ಮುಖ್ಯಮಂತ್ರಿ ಎಸ್. ಬಂಗಾರಪ್ಪನವರು ಕಾವೇರಿ ನೀರಿಗಾಗಿ ಸುಗ್ರೀವಾಜ್ಞೆ ಹೊರಡಿಸಿ ನೆಲ–ಜಲದ ರಕ್ಷಣೆಗೆ ಕ್ರಾಂತಿಕಾರಿ ನಿರ್ಧಾರ ಕೈಗೊಂಡಿದ್ದರು. ಇಂದು ಅವರ ಸುಪುತ್ರ ಮಧು ಬಂಗಾರಪ್ಪನವರು ಅದೇ ದಿಟ್ಟತನವನ್ನು ಪ್ರದರ್ಶಿಸಿದ್ದಾರೆ. ಹಿಂದಿ ಹೇರಿಕೆ ಮತ್ತು ಕೇಂದ್ರದ ಓಲೈಕೆಯಂತಹ ರಾಜಕೀಯ ಒತ್ತಡಗಳ ನಡುವೆಯೂ ಕನ್ನಡದ ಅಳಿವು–ಉಳಿವಿನ ದೃಷ್ಟಿಯಿಂದ ದ್ವಿಭಾಷಾ ಸೂತ್ರ ಜಾರಿಗೊಳಿಸಲು ಮುಂದಾಗಿರುವುದು ವಿಶೇಷ," ಎಂದಿದ್ದಾರೆ.

ತ್ರಿಭಾಷಾ ಸೂತ್ರವು ಕರ್ನಾಟಕದ ವಿದ್ಯಾರ್ಥಿಗಳಿಗೆ ಮಾರಕವಾಗಲಿದೆ ಎಂದು ಕುವೆಂಪು ಅವರು ಹಿಂದೆಯೇ ಎಚ್ಚರಿಸಿದ್ದರು. ಆದರೆ ಅದನ್ನು ಜಾರಿಗೊಳಿಸುವ ಎದೆಗಾರಿಕೆಯನ್ನು ಈವರೆಗಿನ ಸರ್ಕಾರಗಳು ತೋರಿಸಿರಲಿಲ್ಲ. ಇದೀಗ ರಾಜ್ಯ ಸರ್ಕಾರವು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ನ್ಯಾಯಸಮ್ಮತ ತೀರ್ಮಾನ ತೆಗೆದುಕೊಂಡಿದೆ. ಇದನ್ನು ನಿಜವಾದ ಕನ್ನಡ ಪ್ರೇಮಿಗಳೆಲ್ಲರೂ ಮುಕ್ತಕಂಠದಿಂದ ಸ್ವಾಗತಿಸುತ್ತಾರೆ ಎಂದು ಕೃಷ್ಣೇಗೌಡರು ತಿಳಿಸಿದ್ದಾರೆ.

ಕನ್ನಡಿಗರ ಹಾಗೂ ಕನ್ನಡಪರ ಹೋರಾಟಗಾರರ ಹಲವು ವರ್ಷಗಳ ಮನವಿಯನ್ನು ಆಲಿಸಿ, ಈ ದಿಟ್ಟ ತೀರ್ಮಾನ ತೆಗೆದುಕೊಂಡ ಸರ್ಕಾರಕ್ಕೆ ಮತ್ತು ಶಿಕ್ಷಣ ಸಚಿವರಿಗೆ ಶ್ರೀ ಕುವೆಂಪು ಕನ್ನಡ ಕಲಾ ಸಂಘದ ಪರವಾಗಿ ಕೃತಜ್ಞತೆಗಳನ್ನು ಸಲ್ಲಿಸಲಾಗಿದೆ.

## ಇಂದಿನಿಂದ ಕರಿಯಮ್ಮ-ಪ್ಲೇಗಿನಮ್ಮ ದೇವಿಯರ ಜಾತ್ರೆ



ತಿಪಟೂರು

ತಾಲೂಕಿನ ಹೊನ್ನವಳ್ಳಿ ಹೋಬಳಿಯ ಪ್ರಸಿದ್ಧ ಶ್ರೀ ಕ್ಷೇತ್ರ ಹೆಚ್.ಭೈರಾಪುರ ಗ್ರಾಮದ ದೇವತೆಗಳಾದ ಶ್ರೀ ಕರಿಯಮ್ಮ ದೇವಿ ಮತ್ತು ಶ್ರೀ ಪ್ಲೇಗಿನಮ್ಮ ದೇವಿಯವರ ವಾರ್ಷಿಕ ಜಾತ್ರಾ ಮಹೋತ್ಸವವು ಇಂದಿನಿಂದ ಆರಂಭವಾಗಿ ಏಪ್ರಿಲ್ 5ರವರೆಗೆ ಅತ್ಯಂತ ವಿಜೃಂಭಣೆಯಿಂದ ಜರುಗಲಿದೆ ಎಂದು ದೇವಾಲಯದ ಧರ್ಮದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಜಾತ್ರಾ ಮಹೋತ್ಸವದ ದಿನಚರಿ:**

**ಏಪ್ರಿಲ್ 1 (ಬುಧವಾರ):** ಶ್ರೀ ಅಮ್ಮನವರ ಮೂಲಸ್ಥಾನದಲ್ಲಿ ವಿಶೇಷ ಹೂವಿನ ಅಲಂಕಾರ, ಮದುವಣಗಿತ್ತಿ ಕಾರ್ಯಕ್ರಮ, ಪ್ರಸಾದ ವಿನಿಯೋಗ ಹಾಗೂ ರಾತ್ರಿ ಆಕರ್ಷಕ ಮದ್ದಿನ ಪ್ರದರ್ಶನ ನಡೆಯಲಿದೆ.

**ಏಪ್ರಿಲ್ 2 (ಗುರುವಾರ):** ಭಕ್ತಾಧಿಗಳಿಂದ ಶ್ರೀ ಅಮ್ಮನವರಿಗೆ ಭಕ್ತಿಯ ಕಂಕಣಧಾರಣೆ ಕಾರ್ಯಕ್ರಮ.

**ಏಪ್ರಿಲ್ 3 (ಶುಕ್ರವಾರ):** ಆರತಿಬಾನ ಅರ್ಪಣೆ ಹಾಗೂ ದೇವರುಗಳಿಗೆ ವಿಶೇಷ ಪುಷ್ಪಾಲಂಕಾರ.

**ಏಪ್ರಿಲ್ 4 (ಶನಿವಾರ):** ಬೆಳಿಗ್ಗೆ ಗಂಗಾಸ್ನಾನ, ಮಧ್ಯಾಹ್ನ ಶ್ರೀ ಮಾರಮ್ಮನವರ ಕುಣಿತ. ಸಂಜೆ ಹಂಸ ದರ್ಬಾರ್ ಪುಷ್ಪಾಲಂಕೃತ ವಾಹನದಲ್ಲಿ ಚಿಟ್ಟಿಮೇಳ, ನಾಸಿಕ್ ಡೋಲ್ ಹಾಗೂ ವಿವಿಧ ಜಾನಪದ ಕಲಾತಂಡಗಳೊಂದಿಗೆ ದೇವಿಯರ ಮೆರವಣಿಗೆ ಜರುಗಲಿದೆ. ರಾತ್ರಿ ಬೆಂಗಳೂರಿನ ಶ್ರುತಿ ಇವೆಂಟ್ಸ್ ವತಿಯಿಂದ ರಸಮಂಜರಿ ಹಾಗೂ ಮದ್ದಿನ ಪ್ರದರ್ಶನ ಏರ್ಪಡಿಸಲಾಗಿದೆ.

**ಏಪ್ರಿಲ್ 5 (ಭಾನುವಾರ):** ಜಾತ್ರೆಯ ಪ್ರಮುಖ ಆಕರ್ಷಣೆಯಾದ ಶ್ರೀ ಅಮ್ಮನವರ ದಿವ್ಯ ರಥೋತ್ಸವ. ಕೆರಗೋಡಿ–ರಂಗಾಪುರದ ಶ್ರೀ ಶ್ರೀ ಗುರು ಪರದೇಶಿಕೇಂದ್ರ ಸ್ವಾಮೀಜಿಯವರ ಸಾನ್ನಿಧ್ಯದಲ್ಲಿ ಉಯ್ಯಾಲೋತ್ಸವ, ಭಂಡಾರ ಸೇವೆ ಹಾಗೂ ಅನ್ನಸಂತರ್ಪಣೆ ನಡೆಯಲಿದೆ. ಸಂಜೆ 5 ಗಂಟೆಗೆ ಸಿಡಿ ಉತ್ಸವ ಹಾಗೂ ರಾತ್ರಿ ಮಹಾ ಮಂಗಳಾರತಿಯೊಂದಿಗೆ ಮಣೆವು ಕಾರ್ಯಕ್ರಮದ ಮೂಲಕ ಜಾತ್ರೆ ಸಂಪನ್ನಗೊಳ್ಳಲಿದೆ.

ಗ್ರಾಮದ ಹಬ್ಬದಂತಿರುವ ಈ ಐದು ದಿನಗಳ ವೈಭವದ ಜಾತ್ರಾ ಮಹೋತ್ಸವಕ್ಕೆ ಸುತ್ತಮುತ್ತಲ ಗ್ರಾಮಸ್ಥರು ಹಾಗೂ ಸರ್ವ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ದೇವಿಯರ ಕೃಪೆಗೆ ಪಾತ್ರರಾಗಬೇಕೆಂದು ದೇವಸ್ಥಾನದ ಸಮಿತಿ ವಿನಂತಿಸಿದೆ.

## ಕಳ್ಳತನ ಶಂಕೆ–ವಲಸೆ ಕಾರ್ಮಿಕನ ಹತ್ಯೆ

ಎರ್ನಾಕುಲಂ(ಕೇರಳ)

ಮೊಬೈಲ್ ಕಳ್ಳತನದ ಶಂಕೆಯ ಮೇಲೆ ಅಸ್ಸಾಂನ ವಲಸೆ ಕಾರ್ಮಿಕನನ್ನು, ಅದೇ ರಾಜ್ಯದ ಆರು ಮಂದಿ ವಲಸೆ ಕಾರ್ಮಿಕರು ಭೀಕರವಾಗಿ ಥಳಿಸಿ ಹತ್ಯೆ ಮಾಡಿದ್ದಾರೆ.ಪೆರುಂಬವೂರ್ ಬಳಿಯ ಮುಡಿಕಲ್‌ನಲ್ಲಿರುವ ಪ್ಲೈವುಡ್ ಕಾರ್ಖಾನೆಯಲ್ಲಿ ಮಂಗಳವಾರ ರಾತ್ರಿ ಘಟನೆ ನಡೆದಿದೆ. ಕೊಲೆಯ ನಂತರ, ಪೊಲೀಸರು ಆರು ಮಂದಿ ಆರೋಪಿಗಳನ್ನು ಬಂಧಿಸಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy